ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಟ್ರಿಸಾ ಜೋಲಿ ಮತ್ತು ಗಾಯತ್ರಿ ಗೋಪಿಚಂದ್ ಅವರು ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್ ಮಹಿಳೆಯರ ಡಬಲ್ಸ್‌ನಲ್ಲಿ ಕ್ವಾರ್ಟರ್ ಫೈನಲ್ ಹಂತಕ್ಕೆ ಲಗ್ಗೆಯಿಟ್ಟಿದ್ದಾರೆ...

21 ಆಗಸ್ಟ್, 2026 ಶುಕ್ರವಾರ ಬೆಲೆ ₹ 2.00 ಸಂಪುಟ : 20 ಸಂಚಿಕೆ -159 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ರಾಕಿ ಭಾಯ್‌ಗೆ ದಾರಿ ಬಿಡ್ಕೊಟ್ಟಿತಾ ಸ್ಯಾಂಡಲ್ ವುಡ್? 2



ದೇವರಾಜ ಅರಸು ಸಾಮಾಜಿಕ ನ್ಯಾಯದ ಹರಿಕಾರ » 3



ನಕಲಿ ಔಷಧ ಜಾಲ ಸಕ್ರಿಯ : ಕೇಂದ್ರಕ್ಕೆ ಪತ್ರ » 4

# ನೀರು ನಮ್ಮನ್ನು ಒಗ್ಗೂಡಿಸಲಿ, ವಿಭಜಿಸದಿರಲಿ

## ತ.ನಾಡು ಮುಖ್ಯಮಂತ್ರಿ ಎದುರು ಡಿ.ಕೆ.ಶಿವಕುಮಾರ್ ಪ್ರಸ್ತಾಪ | ದಕ್ಷಿಣ ವಲಯ ಮಂಡಳಿ 31ನೇ ಸಭೆ

• ಪ್ರಜೋದಯ ವರದಿ

**ಬೆಂಗಳೂರು:** ನದಿಗಳಿಗೆ ರಾಜಕೀಯ ಗಡಿಗಳು ತಿಳಿದಿಲ್ಲ, ನೀರು ನಮ್ಮನ್ನು ಒಗ್ಗೂಡಿಸಬೇಕು ವಿಭಜಿಸಬಾರದು ಎಂದು ತಮಿಳುನಾಡು ಮುಖ್ಯಮಂತ್ರಿ ವಿಜಯ್ ಎದುರೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕಾವೇರಿ ವಿಚಾರ ಪ್ರಸ್ತಾಪ ಮಾಡಿದರು.

ತಮಿಳುನಾಡಿನ ಮಹಾಬಲಿಪುರಂನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ ದಕ್ಷಿಣ ವಲಯ ಮಂಡಳಿಯ 31ನೇ ಸಭೆಯಲ್ಲಿ ಮಾತನಾಡಿದ ಅವರು, ಕಾವೇರಿ, ಕೃಷ್ಣಾ ನದಿ ಸಹಿತ ದಕ್ಷಿಣ ಭಾರತದ ವಿವಿಧ ರಾಜ್ಯಗಳ ನಡುವೆ ಆಗಾಗ ಸಂಘರ್ಷಕ್ಕೆ ದಾರಿ ಮಾಡಿ ಕೊಡುವ ನದಿ ನೀರಿನ ಹಂಚಿಕೆ ಸಮಸ್ಯೆಗೆ ಸೌಹಾರ್ದ ಮಾತುಕತೆ ಹಾಗು ಸಹಕಾರ ತತ್ವವೇ ಮೂಲವೆಂದರು.

ಪ್ರತಿ ರಾಜ್ಯಕ್ಕೂ ನೀರಿಗಿಂತ ಮಹತ್ವದ ಸಂಪನ್ಮೂಲ ಮತ್ತೊಂದಿಲ್ಲ. ನಮ್ಮ ನದಿಗಳು ರಾಜಕೀಯ ಗಡಿಗಳನ್ನು ಗುರುತಿಸುವುದಿಲ್ಲ. ಕಾವೇರಿ (ಮೇಕೆದಾಟು), ಕೃಷ್ಣಾ, ತುಂಗಭದ್ರಾ, ಪೆನ್ನಾರ್ ಮತ್ತು ಪಾಲಾರ್ ನದಿಗಳು ಇಡೀ ದಕ್ಷಿಣ ರಾಜ್ಯಗಳ ಜೀವನಾಡಿಗಳಾಗಿವೆ. ನೀರಿನ ಹಂಚಿಕೆಯಿಂದ ನೀರಿನ ಸಹಕಾರದತ್ತ ಸಾಗುವ ಸಮಯ ಈಗ ಬಂದಿದೆ. ಸಂಪನ್ಮೂಲಗಳಲ್ಲಿ ನ್ಯಾಯಯುತ ಪಾಲು ಪಡೆಯುವುದು ಅಗತ್ಯ ಎಂದು ಪ್ರತಿಪಾದಿಸಿದರು.

ನಮ್ಮ ಧ್ವನಿಯಲ್ಲಿ ನ್ಯಾಯಯುತತೆ ಒಂದು ಭಾಗವಾದರೆ, ನಮ್ಮ ಸಂಪನ್ಮೂಲಗಳಲ್ಲಿ ನ್ಯಾಯಯುತ ಪಾಲು ಇನ್ನೊಂದು ಭಾಗವಾಗಿದೆ. ಈ ಸಭೆಯಲ್ಲಿರುವ ಪ್ರತಿಯೊಂದು ರಾಜ್ಯಕ್ಕೂ ನೀರಿಗಿಂತ ಮಹತ್ವದ ಸಂಪನ್ಮೂಲ ಮತ್ತೊಂದಿಲ್ಲ.

ನಮ್ಮ ನದಿಗಳು ರಾಜಕೀಯ ಗಡಿಗಳನ್ನು ಗುರುತಿಸುವುದಿಲ್ಲ. ಕಾವೇರಿ, ಕೃಷ್ಣಾ, ತುಂಗಭದ್ರಾ, ಪೆನ್ನಾರ್ ಮತ್ತು ಪಾಲಾರ್ ನದಿಗಳು ಇಡೀ ದಕ್ಷಿಣ ಪರ್ಯಾಯ ದ್ವೀಪದ ಜೀವನಾಡಿಗಳಾಗಿವೆ.

ಈ ಸಹಕಾರ ಹೇಗಿರಬೇಕು ಎಂಬುದನ್ನು ಕರ್ನಾಟಕ ತೋರಿಸಿಕೊಟ್ಟಿದೆ. ಜೂನ್ 25ರಂದು ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಅವರ ನಾಯಕತ್ವದಲ್ಲಿ ನಾವು ಜಂಟಿ ಸಾರ್ವಜನಿಕ ಸಭೆಯನ್ನು ನಡೆಸಿದೆವು. ಇದು ಅಂತಾರಾಜ್ಯ ಜಲ ಸಂಬಂಧಗಳ ಇತಿಹಾಸದಲ್ಲಿ ಒಂದು ಮಹತ್ವದ ಮೈಲಿಗಲ್ಲಾಗಿದೆ. ಆಂಧ್ರಪ್ರದೇಶ ಮತ್ತು ತೆಲಂಗಾಣದ ಮುಖ್ಯಮಂತ್ರಿಗಳಾದ

» ನಾಲ್ಕನೇ ಪುಟದಲ್ಲಿ



### ಕೇಂದ್ರದ ಕಾಳಜಿಯೂ ಬೇಕು

ದೇಶದ ಆರ್ಥಿಕತೆ ಹೆಚ್ಚಿಸುವ ನಮ್ಮ ಪಾತ್ರವನ್ನು ಯಶಸ್ವಿಯಾಗಿ ನಿರ್ವಹಿಸಿದ್ದೇವೆ. ನಮ್ಮ ಪ್ರೀತಿಗೆ ತಕ್ಕಂತೆ ನಿಮ್ಮ ಪ್ರೀತಿ ಇರಬೇಕು. ನಾವು ನಿರ್ವಹಿಸುವ ಹೊಣೆಗಾರಿಕೆಯಷ್ಟೇ ನಿಮ್ಮ ಕಾಳಜಿಯೂ ವ್ಯಕ್ತವಾಗಬೇಕು. 15ನೇ ಹಣಕಾಸು ಆಯೋಗದ ಅಡಿಯಲ್ಲಿ, ತೆರಿಗೆ ಪಾಲಿನಲ್ಲಿ ಕರ್ನಾಟಕದ ಪಾಲು ಶೇ.4.7 ರಿಂದ ಶೇ.3.6 ರಷ್ಟು ಕುಸಿಯಿತು. ಅಂದರೆ ನಮ್ಮ ಪಾಲಿನಲ್ಲಿ ಸುಮಾರು ಶೇ.23 ರಷ್ಟು ಕಡಿತವಾಯಿತು. ಅದರಿಂದ ನಮ್ಮ ರಾಜ್ಯಕ್ಕೆ ಆರು ವರ್ಷಗಳಲ್ಲಿ ಅಂದಾಜು 65,000 ಕೋಟಿ ರೂಪಾಯಿಗಳ ನಷ್ಟವಾಗಿದೆ. ಇದು ರಾಜ್ಯದ ಪ್ರಗತಿಗೆ ಮಾತ್ರವಲ್ಲ ದೇಶದ ಪ್ರಗತಿಯ ಮೇಲೂ ಪ್ರತಿಕೂಲ ಪರಿಣಾಮ ಬೀರುತ್ತದೆಂದು ಕೇಂದ್ರ ಸಚಿವ ಅಮಿತ್ ಶಾ ಅವರಿಗೆ ಮನವರಿಕೆ ಮಾಡಿಕೊಟ್ಟರು.

### ಲೋಕಸಭಾ ಕ್ಷೇತ್ರ ಹೆಚ್ಚಳ ಬೇಡ

ಲೋಕಸಭಾ ಕ್ಷೇತ್ರಗಳನ್ನು ಹೆಚ್ಚಳ ಮಾಡಬಾರದು, 1971ರ ಜನಸಂಖ್ಯೆ ಆಧಾರವನ್ನು ಗೌರವಿಸಬೇಕೆಂಬುದು ನಮ್ಮ ಸಭೆಯ ಪ್ರಮುಖ ನಿರ್ಧಾರ ಆಗಿತ್ತು. ಈ ವಿಚಾರದಲ್ಲಿ ತಮಿಳುನಾಡು, ಕೇರಳ, ತೆಲಂಗಾಣ, ಕರ್ನಾಟಕ ಒಮ್ಮತದ ತೀರ್ಮಾನಕ್ಕೆ ಮುಂದಾಗಿದ್ದೇವೆಂದು ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು.

# ವರಮಹಾಲಕ್ಷ್ಮಿ : ಖರೀದಿ ಭರಾಟೆ

• ಪ್ರಜೋದಯ ವರದಿ

**ಹಾಸನ:** ಬೆಲೆ ಏರಿಕೆ ನಡುವೆಯೂ ವರಮಹಾಲಕ್ಷ್ಮಿ ಹಬ್ಬದ ಖರೀದಿ ಗುರುವಾರ ಜೋರಾಗಿ ನಡೆಯಿತು.

ಬರಗಾಲ, ಅಗತ್ಯ ವಸ್ತುಗಳ ಬೆಲೆಗಳಲ್ಲಿ ವಿಪರೀತ ಏರಿಕೆ ಮಧ್ಯೆಯೂ ಸಾರ್ವಜನಿಕರು ಮಾರುಕಟ್ಟೆಗಳಲ್ಲಿ ತುಂಬಿ ತುಳುಕುತ್ತಿದ್ದರು. ಪ್ರತಿ ವರ್ಷ ಕಸ್ತೂರ ಬಾ ರಸ್ತೆಯಲ್ಲಿ ನಡೆಯುತ್ತಿದ್ದ ಮಾರುಕಟ್ಟೆ ಈ ಬಾರಿ ಮಹಾವೀರ ವೃತ್ತಕ್ಕೆ ಸ್ಥಳಾಂತರಗೊಂಡು ಟ್ರಾಫಿಕ್ ಸಮಸ್ಯೆ ಸಹ ಹೆಚ್ಚಾಗಿತ್ತು. ಸಂಚಾರ ದಟ್ಟಣೆ ನಿಯಂತ್ರಿಸಲು ಪೊಲೀಸರು ಹರಸಾಹಸಪಡುತ್ತಿದ್ದ ದೃಶ್ಯಗಳು ಕಂಡು ಬಂದವು. ಇದೆ ವೇಳೆ ರಸ್ತೆ ಮಧ್ಯೆಯೇ ಸಾಮಾಗ್ರಿ ಇಟ್ಟು ಮಾರಾಟ ಮಾಡುತ್ತಿದ್ದವರನ್ನು ತೆರವುಗೊಳಿಸುವ ಪ್ರಕ್ರಿಯೆ ನಡೆಯಿತು.

ಮಹಾವೀರ ವೃತ್ತ, ದೇವಿಗೆರೆ ವೃತ್ತ, ಸ್ಲೇಟರ್ಸ್ ಹಾಲ್, ಬಿ.ಎಂ. ರಸ್ತೆ, ಸಾಲಗಾಮೆ ರಸ್ತೆ, ಕುವೆಂಪು ರಸ್ತೆ ಸೇರಿ ಪ್ರಮುಖ ಮಾರುಕಟ್ಟೆ ಪ್ರದೇಶಗಳಲ್ಲಿ ಜನರು ಹಬ್ಬದ ಸಾಮಾಗ್ರಿ ಖರೀದಿಗೆ ಮುಗಿಬಿದ್ದರು.

ಬೆಲೆ ಏರಿಕೆಯ ಬಿಸಿ ಜನಸಾಮಾನ್ಯರಿಗೆ ತಟ್ಟಿದ್ದರೂ ಹಬ್ಬದ ಸಂಭ್ರಮಕ್ಕೆ ಯಾವುದೇ ಕೊರತೆಯಾಗಲಿಲ್ಲ.



ಅಗತ್ಯ ವಸ್ತುಗಳ ಬೆಲೆ ಎಷ್ಟೇ ಹೆಚ್ಚಾಗಿದ್ದರೂ ಖರೀದಿಗೆ ಹಿಂದೇಟು ಹಾಕದೆ ಮಹಿಳೆಯರು ಹೂವು, ಹಣ್ಣು, ಬಾಳೆ ಕಂದು ಹಾಗು ಪೂಜಾ ಸಾಮಾಗ್ರಿ ಖರೀದಿಸುತ್ತಿದ್ದರು. ಸೇವಂತಿಗೆ ಹೂವು ಒಂದು ಮಾರಿಗೆ ಸುಮಾರು 100 ರಿಂದ 150, ಪುಟ್ಬಾಳೆ ಕೆ.ಜಿ.ಗೆ 120 ರಿಂದ 140 ರೂ., ಬಾಳೆಕಂದು ಜೋಡಿಗೆ 50 ರಿಂದ 100 ಹಾಗು ತಾವರೆ ಹೂವು ಎರಡಕ್ಕೆ 100 ರೂ. , ಮಲ್ಲಿಗೆ ಮಾರಿಗೆ 300 ರಿಂದ 400 ರೂ., ಕನಕಾಂಬರ ಮಾರಿಗೆ 200 ರೂ.ನಿಂದ 300, ರೂ.ನಂತೆ ಮಾರಾಟವಾಯಿತು. ಮಾವಿನ ತೋರಣ ಒಂದು ಕಟ್ಟಿಗೆ 20 ರೂ., ಬಿಡಿ ಹೂವು ಕಾಲು ಕೆ.ಜಿ.ಗೆ 50 ರೂ.ನಂತೆ ಲಭ್ಯವಾಯಿತು.

ಪೂಜೆಗೆ ಹಣ್ಣುಗಳ ಬೆಲೆಯಲ್ಲೂ ಏರಿಕೆ ಕಂಡುಬಂತು. ಸೇಬು ಕೆ.ಜಿ.ಗೆ 200 ರೂ.ನಿಂದ 250 ರೂ., ಮೊಸುಂಬೆ ಕೆ.ಜಿಗೆ 100 ರಿಂದ 150 ರೂ. ಹಾಗು ದಾಳಿಂಬೆ ಕೆ.ಜಿ.ಗೆ 100 ರಿಂದ 150 ರೂ.ವರೆಗೆ ಮಾರಾಟವಾಗುತ್ತಿತ್ತು. ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಮಾರುಕಟ್ಟೆಗೆ ಆಗಮಿಸಿ ಹಬ್ಬಕ್ಕೆ ಅಗತ್ಯವಾದ ವಸ್ತುಗಳನ್ನು ಖರೀದಿಸಿದರು. ಕೆಲವೆಡೆ ಹೂವು, ಹಣ್ಣು ಮತ್ತು ಬಾಳೆಕಂದು ಖರೀದಿಸಲು ನೂಕು ನುಗ್ಗಲಿನಲ್ಲಿ ನಿಂತಿರುವುದು ಕಂಡುಬಂತು.

# ಶಿವಾನಂದ ತಗಡೂರುಗೆ ನಾಟಕ ಅಕಾಡೆಮಿ ವಾರ್ಷಿಕ ಪ್ರಶಸ್ತಿ

• ಪ್ರಜೋದಯ ವರದಿ

**ಹಾಸನ:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು 2026-27ನೇ ಸಾಲಿನ ಕರ್ನಾಟಕ ನಾಟಕ ಅಕಾಡೆಮಿ ವಾರ್ಷಿಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಜೀವಮಾನ ಸಾಧನೆ ಗೌರವ ಪ್ರಶಸ್ತಿಗೆ ಹಿರಿಯ ಚಲನಚಿತ್ರ ನಟ ಮುಖ್ಯಮಂತ್ರಿ ಚಂದ್ರು ಆಯ್ಕೆಯಾಗಿದ್ದರೆ ವಿವಿಧ ಜಿಲ್ಲೆಯ 32 ಜನರನ್ನು ವಾರ್ಷಿಕ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.ಚನ್ನರಾಯಪಟ್ಟಣ ತಾಲ್ಲೂಕು ತಗಡೂರು ಗ್ರಾಮದ ಶಿವಾನಂದ ಅವರು 1985-86ರಲ್ಲಿ ರಂಗ ಪ್ರವೇಶ ಮಾಡಿದ್ದಾರೆ. ಪ್ರೌಢಶಾಲಾ ಶಿಕ್ಷಣದ ಅವಧಿಯಲ್ಲಿ ಬೇಲೂರು ಕೃಷ್ಣಮೂರ್ತಿ ವಿರಚಿತ ಕುದುರೆ ಮೊಟ್ಟೆ ಮತ್ತು ತ್ಯಾಗಿ ನಾಟಕಗಳ ಮೂಲಕ ರಂಗಭೂಮಿ ಪ್ರವೇಶಿಸಿದ ಅವರು ತಾಲ್ಲೂಕು ಮಟ್ಟದ ನಾಟಕ ಸ್ಪರ್ಧೆಯಲ್ಲಿ ದ್ವಿತೀಯ ಬಹುಮಾನ ಪಡೆದು ತಮ್ಮ ಛಾಪು ಮೂಡಿಸಿದರು.

1987ರಿಂದ 1990ರ ತನಕ ಎಲ್.ವಿ. ಪಾಲಿಟೆಕ್ನಿಕ್‌ನಲ್ಲಿ ನಡೆದ ವಾರ್ಷಿಕ ನಾಟಕ ಪ್ರದರ್ಶನಗಳಲ್ಲಿ ಸಕ್ರಿಯವಾಗಿ ಭಾಗವಹಿಸಿದರು.



ಸಾಕ್ಷರತಾ ಆಂದೋಲನ ಬೀದಿ ನಾಟಕಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡಿರುವ ಅವರು ಜಿಲ್ಲೆಯ 800ಕ್ಕೂ ಹೆಚ್ಚು ಗ್ರಾಮಗಳಿಗೆ ಭೇಟಿ ನೀಡಿದ್ದಾರೆ. ಬೆಂಗಳೂರಿನ ಕೊಳಚೆ ಪ್ರದೇಶಗಳಲ್ಲಿ ಒಂದು ವಾರ ಬೀದಿ ನಾಟಕಗಳ ಮೂಲಕ ಜನಜಾಗೃತಿ ಮೂಡಿಸಿದ್ದಾರೆ. ಹಾಸನದ ನಾಟಕಾಸಕ್ತರೊಂದಿಗೆ ಸೇರಿ ರಂಗಸಿರಿ ಸಂಸ್ಥೆಯ ಚಟುವಟಿಕೆಗಳಲ್ಲಿ ಪ್ರಮುಖ ಪಾತ್ರ ವಹಿಸಿ, ಹಲವು ವರ್ಷಗಳ ಕಾಲ ರಂಗ ಸಂಘಟಕರಾಗಿ ಸೇವೆ ಸಲ್ಲಿಸಿದ್ದಾರೆ. ಸಂಗ್ಯಾ-ಬಾಳ್ಯಾ ಮತ್ತು ತೆಂಕ-ಬಡಗ ಇವರು ಅಭಿನಯಿಸಿದ ಪ್ರಮುಖ ನಾಟಕಗಳು. ರಾಜ್ಯ ಮತ್ತು ರಾಷ್ಟ್ರ ಮಟ್ಟದ ರಂಗಭೂಮಿಯಲ್ಲೂ ಶಿವಾನಂದ ತಗಡೂರು ಅವರು ಸಾಧನೆ ಮೆರೆದಿದ್ದಾರೆ.

### ಡಿ.ದೇವರಾಜ ಅರಸು ಜನ್ಮ ದಿನಾಚರಣೆ : ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಬಣ್ಣನೆ

# ಭೂ ಒಡೆತನದ ಹಕ್ಕು ನೀಡಿದ ಮಹಾನ್ ನಾಯಕ ಅರಸು

• ಪ್ರಜೋದಯ ವರದಿ

**ಹಾಸನ:** ಲಕ್ಷಾಂತರ ಬಡ ರೈತರಿಗೆ ಭೂಮಿಯ ಒಡೆತನದ ಹಕ್ಕು ನೀಡಿದ ಡಿ.ದೇವರಾಜ್ ಅರಸು ಅವರು ಶೋಷಿತರ ಧ್ವನಿಯಾಗಿದ್ದರು ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ತಿಳಿಸಿದರು.

ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಸಾಮಾಜಿಕ ಕ್ರಾಂತಿಯ ನೇತಾರ, ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆ ಉದ್ಘಾಟಿಸಿ ಮಾತ ನಾಡಿದ ಅವರು, ಡಿ.ದೇವರಾಜ್ ಅರಸು ಅವರು ಉಳುವವನೇ ಭೂಮಿಯ ಒಡೆಯ ಎಂಬ ಕ್ರಾಂತಿಕಾರಿ ಕಾಯ್ದೆಯನ್ನು ಜಾರಿಗೆ ತಂದು, ಬಡವರು ಮತ್ತು ಶೋಷಿತರ ಬಾಳಿಗೆ ಬೆಳಕಾದ ಮಹಾನ್ ನಾಯಕ ಎಂದು ಬಣ್ಣಿಸಿದರು.

ಭಾರತ್ ಜೋಡೋ ಯುವ ಸಂಘದಲ್ಲಿ ಪಾಲ್ಗೊಳ್ಳುವ ಮೂಲಕ ಪ್ರತಿಯೊಬ್ಬರು ಆಡಳಿತದ ಭಾಗವಾಗಬೇಕು. ಆಧುನಿಕ ಯುಗದಲ್ಲಿ ಯುವ ಜನತೆಯ ಕೊಡುಗೆ ಅಪಾರವಾಗಿದೆ ಆದ್ದರಿಂದ ಸಾಮಾಜಿಕವಾಗಿ ಯುವಕರು ಸಂಘಟಿಕರಾಗಬೇಕು ಹಾಗು ಹಕ್ಕು ಪಡೆಯಲು, ನ್ಯಾಯಕ್ಕಾಗಿ ಹೋರಾಟ ಮಾಡಲು ಸಿದ್ದರಾಗಬೇಕು. 16 ವರ್ಷ ಮೇಲ್ಪಟ್ಟ ಹಾಗು 35 ವರ್ಷ ಒಳಗಿನ ಯುವಕ-ಯುವತಿಯರು ಭಾರತ್ ಜೋಡೋ ಯುವ ಸಂಘದಲ್ಲಿ ನೋಂದಣಿ ಮಾಡಿಕೊಳ್ಳಬೇಕೆಂದು ಹೇಳಿದರು.



ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪಟೇಲ್ ಶಿವಪ್ಪ ಅವರು ಮಾತನಾಡಿ, ಆರ್ಥಿಕ, ಸಾಮಾಜಿಕ, ಶೈಕ್ಷಣಿಕ, ರಾಜಕೀಯವಾಗಿ ಹಿಂದುಳಿದ ವರ್ಗಗಳಿಗೆ ಅವಕಾಶ ನೀಡಿದವರು ಡಿ.ದೇವರಾಜ ಅರಸು. ವಿದ್ಯಾಭ್ಯಾಸಕ್ಕೆ ಶಕ್ತಿ ನೀಡಿ, ವಿದ್ಯೆ ಕಲಿಯಲು ಯಾವುದೇ ರೀತಿಯ ಜಾತಿ-ಭೇದ ಭಾವವಿಲ್ಲವೆಂದು ಸಮಾಜಕ್ಕೆ ತಿಳಿಸಿಕೊಟ್ಟರು. ಅರಸು ಅವರ ಜಯಂತಿಯನ್ನು ಪ್ರತಿ ಗ್ರಾಮ, ನಗರದಲ್ಲೂ ಆಚರಣೆ ಮಾಡಬೇಕೆಂದು ಹೇಳಿದರು.

ಗ್ರಾಮೀಣ ಬದುಕಿನ ವಾಸ್ತವತೆ, ರೈತರ ಸಂಕಷ್ಟ, ಬಡತನ, ಸಾಮಾಜಿಕ ಅಸಮಾನತೆ ಹಾಗು ಅವಕಾಶಗಳ ಕೊರತೆಯನ್ನು ಹತ್ತಿರದಿಂದ ಕಂಡು ಬೆಳೆದ ಅವರ ವ್ಯಕ್ತಿತ್ವ ವಿಶೇಷವಾಗಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲಾ ಅವರು ಮಾತನಾಡಿ, ರೈತನಿಗೆ ಭೂಮಿ ಎಂದರೇ ಕೇವಲ ಆಸ್ತಿಯಲ್ಲ, ಅದು ಜೀವನೋಪಾಯದ ಆಧಾರ. ಆತ್ಮಗೌರವದ ಸಂಕೇತ ಹಾಗು ಸಮಾಜದಲ್ಲಿ ತನ್ನ ಸ್ಥಾನವನ್ನು ಕಟ್ಟಿಕೊಳ್ಳುವ ಪ್ರಮುಖ ಸಾಧನ ಎಂದು ತಿಳಿಸಿಕೊಟ್ಟವರೇ ದೇವರಾಜ್ ಅರಸು. ಸಾಮಾಜಿಕ ನ್ಯಾಯದ ಪರಿಕಲ್ಪನೆಯಲ್ಲಿ ಹಿಂದುಳಿದ ವರ್ಗಗಳ ಸಬಲೀಕರಣಕ್ಕೆ ವಿಶೇಷ ಸ್ಥಾನ ನೀಡಿದರೆಂದು ತಿಳಿಸಿದರು.

ಅರಸು ಅವರ ಆಡಳಿತವು ಸಾಮಾಜಿಕ ನ್ಯಾಯಕ್ಕೆ ಮಾತ್ರ ಸೀಮಿತವಾಗಿರಲಿಲ್ಲ, ಗ್ರಾಮೀಣಾಭಿವೃದ್ಧಿ, ಬಡವರ ಕಲ್ಯಾಣ, ಉದ್ಯೋಗಾವಕಾಶ, ಶಿಕ್ಷಣ ಮತ್ತು ಆರ್ಥಿಕ ಸಬಲೀಕರಣಕ್ಕೂ ಮಹತ್ವದ ದಾರಿಯಾಗಿತ್ತು. ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂಬ ಹೆಸರು ಬಂದದ್ದು ಕನ್ನಡ ನಾಡಿನ ಇತಿಹಾಸದಲ್ಲಿ ಮಹತ್ವದ ಘಟ್ಟವಾಗಿದೆ. ಇಂತಹ ಸಾಧನೆಗೆ ದೇವರಾಜ ಅರಸು ಅವರು

» ನಾಲ್ಕನೇ ಪುಟದಲ್ಲಿ

# ಅತ್ತೆ ಮನೆ ಕಿರುಕುಳ: ಮಗನನ್ನು ಕೊಂದು ತಾಯಿ ಆತ್ಮಹತ್ಯೆ

### ಪ್ರೀತಿಸಿ ಮದುವೆಯಾಗಿದ್ದಕ್ಕೆ ಮನೆಗೆ ಸೇರಿಸದ ಅತ್ತೆ

• ಪ್ರಜೋದಯ ವರದಿ

**ಹಾಸನ:** ಪ್ರೀತಿಸಿ ಮದುವೆಯಾಗಿದ್ದಕ್ಕೆ ಪತಿಯ ಮನೆಯವರು ನಿರಂತರವಾಗಿ ಕಿರುಕುಳ ನೀಡುತ್ತಿದ್ದರಿಂದ ಮನನೊಂದು ತನ್ನ ಎರಡು ವರ್ಷದ ಮಗನನ್ನು ದಿಂಬಿನಿಂದ ಉಸಿರುಗಟ್ಟಿಸಿ ಕೊಲೆ ಮಾಡಿ, ನಂತರ ಮಹಿಳೆ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಆಲೂರು ಪಟ್ಟಣದಲ್ಲಿ ನಡೆದಿದೆ.

ಈ ಸಂಬಂಧ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಪಟ್ಟಣದ ಹೌಸಿಂಗ್ ಬೋರ್ಡ್‌ನಲ್ಲಿ ಬುಧವಾರ ಅನುಪಮಾ (27) ತನ್ನ ಮಗ ಆರ್ಯನ್‌ನನ್ನು ಹತ್ಯೆಗೈದು ನಂತರ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವುದು ಕಂಡು ಬಂದಿದೆ. ಈ ಬಗ್ಗೆ ತನ್ನ ಪತ್ನಿಯೇ ಮಗುವನ್ನು ಕೊಲೆ ಮಾಡಿದ್ದಾಳೆಂದು ಶ್ರೀನಿವಾಸ್ ತಂದೆ ದೂರು ನೀಡಿದ್ದಾರೆ. ಶ್ರೀನಿವಾಸ್ ತಾಯಿ ಜಯಮ್ಮ ಹಾಗು ಆಕೆಯ ಪುತ್ರಿ ಅನುಶ್ರೀ ಕಿರುಕುಳ ನೀಡಿದ್ದರಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾರೆಂದು ಅನುಪಮಾ ತಾಯಿ ಯಶೋಧ ಅವರು ಪ್ರತಿ ದೂರು ನೀಡಿದ್ದಾರೆಂದು ತಿಳಿಸಿದರು.

ತಾಲ್ಲೂಕಿನ ಸಿಂಗಾಪುರ ಗ್ರಾಮದ ಶ್ರೀನಿವಾಸ್ ಹಾಗು ಅನುಪಮಾ ಅಕ್ಕಪಕ್ಕದ ಮನೆಯವರಾಗಿದ್ದು ಎರಡು ಕುಟುಂಬಗಳು ಅನ್ಯೋನ್ಯವಾಗಿದ್ದವು. ಪರಸ್ಪರ ಪ್ರೀತಿಸುತ್ತಿದ್ದ ಶ್ರೀನಿವಾಸ್ ಹಾಗು ಅನುಪಮಾ ಪೋಷಕರ ಮುಂದೆ ಮದುವೆ ವಿಚಾರ ಪ್ರಸ್ತಾಪಿಸಿದ್ದಾಗ ವಿರೋಧ ವಕ್ತವಾಗಿತ್ತು. ಆದರೆ, ಅನುಪಮಾ ಮನೆಯವರು ದೇವಾಲಯದಲ್ಲಿ ಮದುವೆ ಮಾಡಿಸಿದ್ದರು.

ಆನಂತರ ಶ್ರೀನಿವಾಸ್ ತಾಯಿ ಜಯಮ್ಮ ಮಗ ಹಾಗು ಸೊಸೆಯನ್ನು ಮನೆಗೆ ಸೇರಿಸಿರಲಿಲ್ಲ. ನವದಂಪತಿ ಇಬ್ಬರು ಊರು ತೊರೆದು ಬೆಂಗಳೂರಿನಲ್ಲಿ ನೆಲೆಸಿದ್ದರು. ಶ್ರೀನಿವಾಸ್ ಫೈನಾನ್ಸ್ ನಲ್ಲಿ ಕೆಲಸ ಮಾಡುತ್ತಿದ್ದು ಮದುವೆಯಾದ ನಾಲ್ಕು ವರ್ಷದ ಬಳಿಕ ಗಂಡು ಮಗು ಹುಟ್ಟಿತ್ತು. ಸಿಂಗಾಪುರದಲ್ಲಿ ಶ್ರೀನಿವಾಸ್ ತಾಯಿ ಜಯಮ್ಮ, ಅನುಪಮಾ ಅವರ ತಾಯಿ ಯಶೋಧ ಜೊತೆ ಮದುವೆ ವಿಚಾರ ಪ್ರಸ್ತಾಪ ಮಾಡಿ ಅವಾಚ್ಯ ಶಬ್ದಗಳಿಂದ ನಿಂದಿಸುತ್ತಿದ್ದರು. ಈ ವಿಷಯವನ್ನು ಮಗಳು ಅನುಪಮಾಗೆ ತಾಯಿ ಹೇಳುತ್ತಿದ್ದರು.

ಶ್ರೀನಿವಾಸ್ ತನ್ನ ಮನೆಗೆ ಹೋಗದಿದ್ದರೂ ತಾಯಿ ಜಯಮ್ಮ ಹಾಗು ಅಕ್ಕ ಅನುಶ್ರೀ ಜೊತೆ ಫೋನ್‌ನಲ್ಲಿ ಮಾತನಾಡುತ್ತಿದ್ದ. ಇದೇ ವಿಚಾರಕ್ಕೆ ಅನುಪಮಾ ಪತಿ ಜೊತೆ ಜಗಳವಾಡುತ್ತಿದ್ದಳು. ನಮ್ಮನ್ನು ನಿಮ್ಮ ತಾಯಿ

» ನಾಲ್ಕನೇ ಪುಟದಲ್ಲಿ



### ತಾಯಿ-ಮಗು ನೇತ್ರ ದಾನ

ಜಿಲ್ಲಾಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ಕುಟುಂಬಸ್ಥರಿಗೆ ಮೃತದೇಹಗಳನ್ನು ಹಸ್ತಾಂತರಿಸಲಾಯಿತು. ದುಃಖದ ನಡುವೆಯೂ ಅನುಪಮಾ ಹಾಗು ಆರ್ಯನ್ ಇಬ್ಬರ ಕಣ್ಣುಗಳನ್ನು ಪೋಷಕರು ದಾನ ಮಾಡುವ ಮೂಲಕ ಸಾರ್ಥಕತೆ ಮೆರೆದಿದ್ದಾರೆ. ಆಲೂರು ಪೊಲೀಸ್ ಠಾಣೆಯಲ್ಲಿ ಎರಡು ಪ್ರಕರಣ ದಾಖಲಾಗಿದ್ದು ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

# ಗ್ರಾಮಗಳ ನಕಾಶೆ ಪರಿಷ್ಕರಣೆ ಪ್ರಸ್ತಾಪವಿದೆ: ಪರಮೇಶ್ವರ್

• ಪ್ರಜೋದಯ ವರದಿ



**ಬೆಂಗಳೂರು:** ಗ್ರಾಮಗಳ ನಕಾಶೆಯನ್ನು ಪರಿಷ್ಕರಿಸುವ ಪ್ರಸ್ತಾವ ಸರ್ಕಾರದ ಮುಂದೆ ಇದೆ ಎಂದು ಕಂದಾಯ ಸಚಿವ ಡಾ.ಜಿ.ಪರಮೇಶ್ವರ್ ಅವರು ವಿಧಾನ ಪರಿಷತ್ತಿಗೆ ತಿಳಿಸಿದರು.

ಪರಿಷತ್ತಿನ ಪ್ರಶ್ನೋತ್ತರ ವೇಳೆಯಲ್ಲಿ ಕಾಂಗ್ರೆಸ್‌ನಎಂ.ಎಲ್.ಅನಿಲ್ ಕುಮಾರ್ ಅವರ ಪ್ರಶ್ನೆಗೆ ಅವರು ಉತ್ತರಿಸಿ, ಬ್ರಿಟಿಷರ ಆಳ್ವಿಕೆಯ ಅವಧಿಯಲ್ಲಿ ಗ್ರಾಮಗಳ ನಕಾಶೆ ರೂಪಿಸಲಾಗಿತ್ತು. ಯಾವುದೇ ಸರ್ವೆಗೆ 30 ವರ್ಷಗಳ ಗ್ಯಾರಂಟಿ ಅವಧಿ ಇರುತ್ತದೆ. ಆ ಅವಧಿ ಮುಕ್ತಾಯವಾದ ನಂತರ ಸರ್ವೆಯನ್ನು ಪರಿಷ್ಕರಿಸಬೇಕಿತ್ತು ಎಂದರು.

ಗ್ರಾಮ ನಕಾಶೆಗಳನ್ನು ಇಂತಿಷ್ಟೇ ವರ್ಷಗಳಿಗೆ ಕಡ್ಡಾಯವಾಗಿ ಪರಿಷ್ಕರಿಸಬೇಕೆಂಬ ನಿಯಮ ಇಲ್ಲ. ಆದರೆ, ಗ್ರಾಮಗಳ ಸ್ವರೂಪದಲ್ಲಿ ವ್ಯಾಪಕ ಬದಲಾವಣೆ ಆಗಿದೆ. ಹೀಗಾಗಿ ನಕಾಶೆಗಳನ್ನು ಪರಿಷ್ಕರಿಸಬೇಕಿತ್ತು. ಆ ಕೆಲಸ ಆಗಿಲ್ಲ. ಈಗ ನಕಾಶೆ ಪರಿಷ್ಕರಣೆಯ ಸಾಧ್ಯತೆಗಳನ್ನು ಪರಿಶೀಲಿಸಲಾಗುತ್ತಿದೆ ಎಂದರು. ಗ್ರಾಮ ಠಾಣಾ ವ್ಯಾಪ್ತಿಗೆ ಹೊಂದಿಕೊಂಡಿರುವ ಜಮೀನುಗಳನ್ನು, ಗ್ರಾಮ ಠಾಣಾ ಎಂದು ಪರಿವರ್ತಿಸಲು ಸಾಧ್ಯವಿಲ್ಲ ಎಂದು ಉಪಪ್ರಶ್ನೆಗೆ ಉತ್ತರಿಸಿದರು.

ಕಂದಾಯ ಕಟ್ಟದ ಕೃಷಿ ಭೂಮಿಯನ್ನು ಮುಟ್ಟುಗೋಲು ಮಾಡಿಕೊಳ್ಳಲು ಅವಕಾಶವಿದ್ದು, ಅವುಗಳ ಪಹಣಿಯಲ್ಲಿ ಸರ್ಕಾರಿ ಫಡಾ ಎಂದು ಇದೆ. ಪಹಣಿಗಳಲ್ಲಿ ರೈತರ ಹೆಸರನ್ನು ಪುನಃಸ್ಥಾಪಿಸಲು 2012ರ ಡಿ. 7 ರಿಂದ 2014ರ ಸೆ.6ರ ವರೆಗೆ ಅವಕಾಶ ನೀಡಲಾಗಿತ್ತು. ಈಗ ಮತ್ತೆ ಅವಕಾಶ ಕಲ್ಪಿಸಲಾಗುತ್ತದೆಂದು ಜಿ.ಪರಮೇಶ್ವರ್ ಉತ್ತರಿಸಿದರು.

ಕಾಂಗ್ರೆಸ್‌ನ ಎಸ್.ರವಿ ಅವರು ಕೇಳಿದ್ದ ಪ್ರಶ್ನೆಗೆ ಉತ್ತರಿಸಿದ ಅವರು, ಈಗಾಗಲೇ ಕರಡು ನಿಯಮಗಳನ್ನು ಹೊರಡಿಸಲಾಗಿದೆ. ಶೀಘ್ರವೇ ಅಂತಿಮ ಅಧಿಸೂಚನೆ ಹೊರಡಿಸಲಾಗುತ್ತದೆ ಎಂದರು.

# ಲಡಾಖ್‌ನಲ್ಲಿ ಜಮ್ಮು-ಕಾಶ್ಮೀರ ಹೈಕೋರ್ಟ್ ಪೀಠ

**ನವದೆಹಲಿ:** ಲಡಾಖ್ ಕೇಂದ್ರಾಡಳಿತ ಪ್ರದೇಶದ ಜನರಿಗೆ ಸುಲಭ ನ್ಯಾಯಾಂಗ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯ ಕೇಂದ್ರ ಸಚಿವ ಸಂಪುಟವು ಜಮ್ಮು ಮತ್ತು ಕಾಶ್ಮೀರ ಹೈಕೋರ್ಟ್‌ನ ನೂತನ ಪೀಠವನ್ನು ಲಡಾಖ್‌ನಲ್ಲಿ ಸ್ಥಾಪಿಸಲು ಅನುಮೋದನೆ ನೀಡಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಈ ಐತಿಹಾಸಿಕ ನಿರ್ಧಾರವನ್ನು ಗುರುವಾರ ಪ್ರಕಟಿಸಿದ್ದಾರೆ. ಈ ನಡೆಯಿಂದಾಗಿ ಲಡಾಖ್‌ನ ದುರ್ಗಮ ಪ್ರದೇಶಗಳಲ್ಲಿ ವಾಸಿಸುವ ನಾಗರಿಕರಿಗೆ ಕಾನೂನು ಸೇವೆಗಳು ಸುಲಭವಾಗಿ ಮತ್ತು ಶೀಘ್ರವಾಗಿ ದೊರೆಯಲಿವೆ. ಜನರು ನ್ಯಾಯಾಂಗ ಸೇವೆಗಳಿಗಾಗಿ ಜಮ್ಮು ಅಥವಾ ಶ್ರೀನಗರದಲ್ಲಿರುವ ಹೈ ಕೋರ್ಟ್ ಪೀಠಗಳಿಗೆ ಸುದೀರ್ಘ ಪ್ರಯಾಣ ಬೆಳೆಸಬೇಕಿತ್ತು. 2019 ರಲ್ಲಿ ಕೇಂದ್ರಾಡಳಿತ ಪ್ರದೇಶವಾಗಿದ್ದ ಲಡಾಖ್ 2019ರ ಅಕ್ಟೋಬರ್ 31 ರಂದು ಜಮ್ಮು-ಕಾಶ್ಮೀರ ಮರು ಸಂಘಟನೆಯ ನಂತರ ಪ್ರತ್ಯೇಕ ಕೇಂದ್ರಾಡಳಿತ ಪ್ರದೇಶವಾಗಿ ಹೊರಹೊಮ್ಮಿತ್ತು.

# ಮೊಬೈಲ್ ಶಾಪ್ ಮಾಲೀಕರಿಗೆ 8 ಲ.ರೂ. ಪಂಗನಾಮ

• ಪ್ರಜೋದಯ ವರದಿ

**ಸಕಲೇಶಪುರ:** ವ್ಯವಹಾರದಲ್ಲಿ ಪಾರ ದರ್ಶಕತೆ ಕಾಯ್ದುಕೊಳ್ಳುತ್ತಾನೆಂದು ನಂಬಿ ಪೂರ್ತಿ ಜವಾಬ್ದಾರಿ ವಹಿಸಿದ್ದಕ್ಕೆ ಉದ್ಯೋಗಿಯೊಬ್ಬ ಮೊಬೈಲ್ ಶಾಪ್ ಮಾಲೀಕನಿಗೆ ಸುಮಾರು 8 ಲ. ರೂ. ಪಂಗನಾಮ ಹಾಕಿರುವ ಘಟನೆ ತಾಲ್ಲೂಕಿನ ಬಾಳ್ಳುಪೇಟೆಯಲ್ಲಿ ನಡೆದಿದೆ.

ಬೆಳಗೋಡು ಗ್ರಾಮದ ಇಮ್ರಾನ್ ಮೋಸ ಮಾಡಿ ಪರಾರಿಯಾದ ಆರೋಪಿ. ದುರ್ಗಾ ಮೊಬೈಲ್ ಅಂಗಡಿ ಮಾಲೀಕ ಬಿ.ಎಸ್.ಕಿಶೋರ್ ಎಂಬುವವರು ಮೋಸಕ್ಕೊಳಗಾಗಿದ್ದು ಆರೋಪಿ ಪತ್ತೆ ಹಚ್ಚಿ ನ್ಯಾಯ ದೊರಕಿಸಿಕೊಡಬೇಕೆಂದು ಅವರು ಪೊಲೀಸ್ ಠಾಣೆ ಮೆಟ್ಟಿಲೇರಿದ್ದಾರೆ.

ಕಳೆದ 6 ವರ್ಷಗಳಿಂದ ಇಮ್ರಾನ್ ಅಂಗಡಿಯಲ್ಲಿ ಕೆಲಸ ಮಾಡಿಕೊಂಡಿದ್ದರಿಂದ ಆತನ ಮೇಲೆ ವಿಶ್ವಾಸ ಮೂಡಿತ್ತು. ನಂಬಿಕೆ ಹುಸಿ ಗೊಳಿಸಿರುವ ಇಮ್ರಾನ್ ಲಕ್ಷಾಂತರ



ರೂ.ನೊಂದಿಗೆ ನಾಪತ್ತೆಯಾಗಿದ್ದಾನೆ.

ಮೊಬೈಲ್ ಕಂಪನಿಗಳಿಗೆ ಜಮೆ ಮಾಡಬೇಕಾದ ಹಣವನ್ನು ತನ್ನ ಜೇಬಿಗೆ ಹಾಕಿಕೊಂಡಿರುವುದು ಬೆಳಕಿಗೆ ಬಂದಿದೆ. 2026ರ ಜೂನ್‌ನಲ್ಲಿ 2,34,736 ರೂ. ಹಾಗು ಜುಲೈನಲ್ಲಿ 2,35,308 ರೂ. ಹಣವನ್ನು ಬ್ಯಾಂಕ್‌ಗೆ ಜಮೆ ಮಾಡಲೆಂದು ಕೊಟ್ಟಿದ್ದರು. ಆದರೆ ಇಮ್ರಾನ್ ಹಣ ಪಾವತಿಸದೆ ಚೆಕ್ ಬುಕ್ ಸಹ ಕೊಡದೆ ಕಳ್ಳಾಟ ನಡೆಸಿದ್ದ. ಜೊತೆಗೆ 2 ಲಕ್ಷ ರೂ. ಮೌಲ್ಯದ 8 ಮೊಬೈಲ್‌ಗಳನ್ನು ಪರಿಚಯಸ್ಥರಿಗೆ ಮಾರಾಟ ಮಾಡಿ ಖಾಲಿ ಬಾಕ್ಸ್‌ಗಳನ್ನು ಮಾತ್ರ ಇಟ್ಟಿದ್ದ. ಕಳ್ಳಾಟ ಯಾರಿಗೂ ಗೊತ್ತಾಗದಂತೆ ಸಿಸಿಟಿವಿ ಕ್ಯಾಮರಾವನ್ನು ಬೇರೆ ದಿಕ್ಕಿಗೆ ತಿರುಗಿಸಿದ್ದ. ಇಷ್ಟು ಮಾತ್ರವಲ್ಲದೆ ಗಲ್ಲಾಪೆಟ್ಟಿಗೆಯಲ್ಲಿದ್ದ 1.20 ಲ.ರೂ. ಜೊತೆಗೆ ಪರಾರಿಯಾಗಿದ್ದಾನೆ. ಈ ಸಂಬಂಧ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಮಂಜೂರಾತಿಗಿಂತ ಹೆಚ್ಚಾದ ಮಕ್ಕಳ ಸಂಖ್ಯೆ | ವಿದ್ಯಾರ್ಥಿಗಳ ಆಕ್ರೋಶ

# ಹಾಸ್ಟೆಲ್ ನಿರ್ವಹಣೆಗೆ ಸಾಕಾಗದ ಅನುದಾನ

-ಮಲ್ಲಿಕಾರ್ಜುನ ಕೊಚ್ಚರಗಿ

• ಪ್ರಜೋದಯ ವರದಿ

**ಹಾಸನ:** ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳಲ್ಲಿ ಮಂಜೂರಾತಿಗಿಂತ ಅಧಿಕ ವಿದ್ಯಾರ್ಥಿಗಳು ಪ್ರವೇಶ ಪಡೆದಿರುವ ಹಿನ್ನಲೆಯಲ್ಲಿ ಅನುದಾನದ ಕೊರತೆಯಿಂದ ಮಕ್ಕಳಿಗೆ ಮೂಲಸೌಕರ್ಯ ಕಲ್ಪಿಸುವುದು ಸವಾಲಿನ ಕೆಲಸವಾಗಿದೆ.

ಜಿಲ್ಲೆಯಲ್ಲಿ ಮೆಟ್ರಿಕ್ ನಂತರದ 36 ಹಾಗು ಮೆಟ್ರಿಕ್ ಪೂರ್ವ 58 ವಸತಿ ನಿಲಯಗಳಿವೆ. ಮೆಟ್ರಿಕ್ ನಂತರದ ನಿಲಯಗಳಿಗೆ 2,800 ವಿದ್ಯಾರ್ಥಿಗಳನ್ನು ಸೇರಿಸಿಕೊಳ್ಳಲು ಅವಕಾಶ ಇದೆಯಾದರೂ 5,600 ಮಕ್ಕಳು ಪ್ರವೇಶ ಪಡೆದಿದ್ದಾರೆ. ಅದೇ ರೀತಿ ಮೆಟ್ರಿಕ್ ಪೂರ್ವ ನಿಲಯಗಳಲ್ಲಿ 3,500 ವಿದ್ಯಾರ್ಥಿಗಳಿದ್ದು, ಸರ್ಕಾರದಿಂದ ಬರುವ ಅನುದಾನವನ್ನು ಎಲ್ಲಾ ಮಕ್ಕಳಿಗೂ ಸಮರ್ಪಕವಾಗಿ ಹಂಚಿಕೆ ಮಾಡಲು ಸಾಧ್ಯವಾಗುತ್ತಿಲ್ಲವೆಂದು ಅಧಿಕಾರಿಗಳು ಅಸಹಾಯಕತೆ ವ್ಯಕ್ತಪಡಿಸಿದ್ದಾರೆ.



36ರಲ್ಲಿ 14 ನಿಲಯಗಳು ಬಾಡಿಗೆ ಕಟ್ಟಡದಲ್ಲಿದ್ದು, 22 ಹಾಸ್ಟೆಲ್‌ಗಳು ಸ್ವಂತ ಕಟ್ಟಡ ಹೊಂದಿವೆ. ನಿಲಯಗಳ ವಿದ್ಯುತ್ ವೆಚ್ಚ ಮತ್ತಿತರ ಖರ್ಚು ಹೆಚ್ಚುತ್ತಿರುವುದು ಅನುದಾನ ಹೊಂದಿಸಲು ಸಾಧ್ಯವಾಗುತ್ತಿಲ್ಲ. ಇದೆಲ್ಲದರ ಜೊತೆಗೆ ಮೆನು ಪ್ರಕಾರವೇ ಊಟ, ಉಪಾಹಾರ ನೀಡಬೇಕಿದ್ದು, ವಸತಿ ನಿಲಯಗಳ ನಿರ್ವಹಣೆಗೆ ಭಾರೀ ತೊಡಕಾಗಿದೆ.

**3 ತಿಂಗಳಿಗೆ 20 ಲ.ರೂ. ಅನುದಾನ**

ಸಮಾಜ ಕಲ್ಯಾಣ ಇಲಾಖೆಯಿಂದ ನಿರ್ವಹಿಸಲ್ಪಡುತ್ತಿರುವ ಹಾಸ್ಟೆಲ್‌ಗಳಿಗೆ ಪ್ರತಿ 3 ತಿಂಗಳಿಗೆ 20 ಲ.ರೂ. ಅನುದಾನ ಲಭ್ಯವಾಗುತ್ತಿದೆ. ವರ್ಷಕ್ಕೆ 80 ಲ.ರೂ. ಮಾತ್ರ ಸಿಗುತ್ತಿದ್ದು, ಒಂದು ಹಾಸ್ಟೆಲ್‌ಗೆ ಪ್ರತಿ ತಿಂಗಳು 50 ಸಾವಿರ ರೂ. ಮಾತ್ರ ಹಂಚಿಕೆ ಮಾಡಬಹುದಾಗಿದೆ. ಆದರೆ, ಇಷ್ಟು ಕಡಿಮೆ ಹಣದಲ್ಲಿ ನಿರ್ವಹಣೆ ಅಸಾಧ್ಯ. ವಿದ್ಯಾರ್ಥಿಗಳಿಗೆ ಸೋಪ್ ಕಿಟ್, ಬೆಡ್, ಕಾಟ್, ಸೋಲಾರ್ ವಾಟರ್ ಹೀಟರ್, ತಟ್ಟೆ, ಲೋಟ, ಸೊಳ್ಳೆ ಪರದೆ ಸೇರಿ ಮತ್ತಿತರ ಸೌಲಭ್ಯ ಕಲ್ಪಿಸಬೇಕು. ಆದರೆ ಇಷ್ಟು ಕಡಿಮೆ ಹಣದಲ್ಲಿ ಎಲ್ಲವನ್ನೂ ಪೂರೈಸುವುದು ಸಾಧ್ಯವಾಗುತ್ತಿಲ್ಲ.

> ವ್ಯಾಸಂಗದ ದೃಷ್ಟಿಯಿಂದ ದೂರದ ಊರುಗಳಿಂದ ಬಂದು ಹಾಸ್ಟೆಲ್‌ಗಳಲ್ಲಿ ಪ್ರವೇಶ ಪಡೆದಿರುವ ಮಕ್ಕಳಿಗೆ ಮೂಲಸೌಲಭ್ಯ ಕಲ್ಪಿಸಬೇಕಾಗುತ್ತದೆ. ಹಂತ ಹಂತವಾಗಿ ಅಗತ್ಯ ಸಾಮಾಗ್ರಿ ಖರೀದಿಸಿ ಕೊಡಲಾಗುವುದು. ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕ್ರಮ ವಹಿಸಲಾಗುವುದು.
>
> -ಪಿ.ದೂದ್‌ಪೀರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ

**ದುಪ್ಪಟ್ಟು ಪ್ರವೇಶಕ್ಕೆ ಕಾರಣವೇನು?**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗು ಸಮಾಜ ಕಲ್ಯಾಣ ಇಲಾಖೆ ವಸತಿ ನಿಲಯಗಳಲ್ಲಿ ಭಾರೀ ವ್ಯತ್ಯಾಸವಿದೆ. ಬಿಸಿಎಂ ಹಾಸ್ಟೆಲ್‌ಗಳಲ್ಲಿ ಮಂಜೂರಾದ ಸೀಟುಗಳನ್ನಷ್ಟೇ ಭರ್ತಿ ಮಾಡಿಕೊಳ್ಳಲಾಗುತ್ತದೆ. ಆದರೆ, ಸಮಾಜ ಕಲ್ಯಾಣ ಇಲಾಖೆಯಲ್ಲಿ ಎಷ್ಟೇ ಮಕ್ಕಳು ಪ್ರವೇಶಕ್ಕೆ ಅರ್ಜಿ ಸಲ್ಲಿಸಿದರೂ ಕಲ್ಪಿಸಿಕೊಡಬೇಕಾಗುತ್ತದೆ. ಹೀಗಾಗಿ ವಿದ್ಯಾರ್ಥಿಗಳ ಸಂಖ್ಯೆ ಅಗತ್ಯಕ್ಕಿಂತ ದುಪ್ಪಟ್ಟಾಗಿದೆ. ಜೊತೆಗೆ ಉತ್ತರ ಕರ್ನಾಟಕದ ಜಿಲ್ಲೆಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಈ ವರ್ಷ ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದಾರೆ. ಸಕಲೇಶಪುರದ ಬಿಇಡಿ ಕಾಲೇಜು ಒಂದರಲ್ಲಿ ಪೂರ್ತಿ ಉತ್ತರ ಕರ್ನಾಟಕದ ವಿದ್ಯಾರ್ಥಿಗಳೇ ಇದ್ದು ಸ್ಥಳೀಯರು ಇಲ್ಲದೇ ಇರುವುದು ಇದಕ್ಕೆ ತಾಜಾ ನಿದರ್ಶನವಾಗಿದೆ.

**ಹಾಸ್ಟೆಲ್ ಉಳಿಸಿಕೊಳ್ಳುವ ಪ್ರಯತ್ನ**

ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾದರೆ ಮುಂದಿನ ವರ್ಷದಿಂದ ಹಾಸ್ಟೆಲ್ ಮುಚ್ಚಬೇಕಾಗುತ್ತದೆಂಬ ಆತಂಕದಿಂದ ವಾರ್ಡನ್‌ಗಳೇ ಹೊರ

» ನಾಲ್ಕನೇ ಪುಟದಲ್ಲಿ

## ಕಡಜ ದಾಳಿಗೆ ವೃದ್ಧೆ ಸಾವು

**ಸಕಲೇಶಪುರ:** ಕಡಜ ಹುಳುಗಳ ದಾಳಿಗೆ ವೃದ್ದೆಯೊಬ್ಬರು ಮೃತಪಟ್ಟಿರುವ ಘಟನೆ ತಾಲ್ಲೂಕಿನ ಹೆಗ್ಗೋವೆ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಇಂದ್ರಮ್ಮ (70) ಮೃತರು. ಬುಧವಾರ ಬೆಳಿಗ್ಗೆ ಮನೆ ಸಮೀಪ ಸೌದೆ ತರಲು ತೆರಳಿದ್ದ ವೇಳೆ ಕಡಜ (ಹುಲ್ಲಗಡ್ಜ) ದಾಳಿ ನಡೆಸಿದ ಪರಿಣಾಮ ಪ್ರಜ್ಞೆತಪ್ಪಿ ವೃದ್ದೆ ಬಿದ್ದಿದ್ದರು. ಚಿಕಿತ್ಸೆಗಾಗಿ ಅವರನ್ನು ಹಾಸನದ ಹಿಮ್ಸ್‌ಗೆ ದಾಖಲಿಸಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ.

## ನವಕೀಸ್ ಕಾಲೇಜಿನಲ್ಲಿ 6.60 ಲ.ರೂ. ಕಳವು

**ಹಾಸನ:** ಕಾಲೇಜಿನ ಅಕೌಂಟ್ ಡಿಪಾರ್ಟ್‌ಮೆಂಟ್‌ನ ಬೀಗ ಒಡೆದು ಒಳನುಗ್ಗಿರುವ ಕಳ್ಳರು 6.60 ಲ.ರೂ. ಕಳವು ಮಾಡಿರುವ ಘಟನೆ ನಗರ ಸಮೀಪದ ನವಕೀಸ್ ಇಂಜಿನೀಯರಿಂಗ್ ಕಾಲೇಜಿನಲ್ಲಿ ನಡೆದಿದೆ.

ಆ.18ರ ರಾತ್ರಿ ಬೀಗ ಒಡೆದು ಒಳಪ್ರವೇಶಿಸಿರುವ ಕಳ್ಳರು 6.60 ಲ.ರೂ. ಮೊತ್ತದ ಎರಡು ಚೆಕ್ ಕದ್ದಿದ್ದಾರೆ. ಜೊತೆಗೆ ಇತರೆ ದಾಖಲೆ ಪತ್ರಗಳು ನಾಪತ್ತೆಯಾಗಿವೆ.

E-mail : prajodayahsn@gmail.com
ಪ್ರಜೋದಯ
21 ಆಗಸ್ಟ್ 2026 ಶುಕ್ರವಾರ

# ಸಿನಿ ಪ್ರಜಾ

ಟಾಕ್ಸಿಕ್ ಸಿನಿಮಾ ಎಫೆಕ್ಟ್ ಜೋರಾಗಿದೆ. ಕಳೆದ ವಾರ ಕನ್ನಡದಲ್ಲಿ ಒಂದೇ ಚಿತ್ರ ರಿಲೀಸ್ ಆಯಿತು. ಆದರೆ, ಈ ವಾರ ಒಂದೇ ಒಂದು ಚಿತ್ರವೂ ಇಲ್ಲ ನೋಡಿ. ಇದರ ಇನ್ನಷ್ಟು ಮಾಹಿತಿ ಇಲ್ಲಿದೆ ಓದಿ.

**ಈ ವಾರ ಒಂದೇ ಒಂದು ಕನ್ನಡ ಚಿತ್ರ ರಿಲೀಸ್ ಆಗ್ತಾ ಇಲ್ಲ! ಯಾಕ್ ಗೊತ್ತಾ?**

ಟಾಕ್ಸಿಕ್ ಚಿತ್ರ ದೊಡ್ಡಮಟ್ಟದಲ್ಲಿ ರಿಲೀಸ್ ಆಗುತ್ತಿದೆ. ಈ ಚಿತ್ರ ಬರೋಕೆ ಇನ್ನು 8 ದಿನಗಳೇ ಇವೆ. ಆದರೆ, ಇದರ ಎಫೆಕ್ಟ್ ಈಗಲೇ ಶುರು ಆಗಿದೆ. ಮುಂದಿನ ವಾರ ಅತಿ ದೊಡ್ಡ ಸಿನಿಮಾ ಬರ್ತಿದೆ. ಇದರ ಮುಂದೆ ನಿಲ್ಲೋಕೆ ಆಗುತ್ತಾ? ನೋ ವೇ ಚಾನ್ಸೇ ಇಲ್ಲ ಬಿಡಿ. ಈ ಒಂದು ಪ್ರ್ಯಾಕ್ಟಿಕಲ್ ಸತ್ಯವನ್ನ ಕನ್ನಡ ಸಿನಿಮಾ ನಿರ್ಮಾಪಕರು ತಿಳಿದುಕೊಂಡಿದ್ದಾರೆ. ಡೈರೆಕ್ಟರ್ ನಾಗತಿಹಳ್ಳಿ ಚಂದ್ರಶೇಖರ್ ಅವರಿಗೂ ಇದು ಅರ್ಥ ಆಗಿದೆ. ಹಾಗಾಗಿಯೇ ಇವರು ತಮ್ಮ ಅಮೆರಿಕಾ ಅಮೆರಿಕಾ-2 ಚಿತ್ರವನ್ನ ಸೆಪ್ಟೆಂಬರ್ 11 ರಂದು ರಿಲೀಸ್ ಮಾಡುತ್ತಿದ್ದಾರೆ. ಆದರೆ, ವಿಷಯ ಇನ್ನೂ ಒಂದು ಇದೆ. ಅದು ಈ ವಾರದ ರಿಲೀಸ್ ಮ್ಯಾಟರ್ ಆಗಿದೆ. ಅದರ ವಿವರ ಮುಂದೆ ಇದೆ ಓದಿ.



**ಒಂದು ಚಿತ್ರವೂ ರಿಲೀಸ್ ಇಲ್ಲ**

ಕನ್ನಡದಲ್ಲಿ ವಾರಕ್ಕೆ 7 ಇಲ್ಲವೆ 8 ಚಿತ್ರಗಳು ಬರೋದು ಇದೆ. ಏನಿಲ್ಲ ಅಂದ್ರು ಮೂರೋ ಇಲ್ಲವೆ ನಾಲ್ಕೋ ಬಂದೇ ಬರುತ್ತವೆ.

ಈ ವಾರ ಒಂದೇ ಒಂದು ಸಿನಿಮಾ ರಿಲೀಸ್ ಇಲ್ಲ!

## ರಾಕಿ ಭಾಯ್‌ಗೆ ದಾರಿ ಬಿಡ್ಕೊಟ್ಟಿತಾ ಸ್ಯಾಂಡಲ್‌ವುಡ್?

ಆದರೆ, ಈ ವಾರ ಆಗಸ್ಟ್-21 ಕ್ಕೆ ಕನ್ನಡದ ಒಂದೇ ಒಂದು ಚಿತ್ರವೂ ರಿಲೀಸ್ ಆಗುತ್ತಿಲ್ಲ. ಆ ರೀತಿನೇ ಸುದ್ದಿ ಇದೆ. ಇದಕ್ಕೆ ಕಾರಣ ಏನು ಅನ್ನುವ ಪ್ರಶ್ನೆಗೆ ಉತ್ತರ ಸಿಂಪಲ್ ಆಗಿದೆ. ಅದು ಟಾಕ್ಸಿಕ್ ಅಂತ ಹೇಳೋವವರೇ ಹೆಚ್ಚಿದ್ದಾರೆ.

**ಟಾಕ್ಸಿಕ್ ಸಿನಿಮಾ ಭರ್ಜರಿ ಎಫೆಕ್ಟ್**

ಟಾಕ್ಸಿಕ್ ಸಿನಿಮಾ ಸಣ್ಣ ಮಟ್ಟದಲ್ಲಿ ಬರ್ತಿಲ್ಲ ನೋಡಿ. ಇಡೀ ವಿಶ್ವದಲ್ಲಿ ರಿಲೀಸ್ ಆಗುತ್ತಿದೆ. ದೊಡ್ಡ ಪ್ರಮಾಣದಲ್ಲಿಯೇ ತೆರೆ ಕಾಣುತ್ತಿದೆ.

ಕರ್ನಾಟಕದಲ್ಲೂ ಈ ಚಿತ್ರದ ಸದ್ದು ಜೋರಾಗಿಯೇ ಇದೆ. ದೊಡ್ಡ ಲೆವೆಲ್‌ಗೇನೇ ಇದು ರಿಲೀಸ್ ಆಗುತ್ತಿದೆ. ಬೆಂಗಳೂರಿನಲ್ಲಿ ಮುಂಜಾನೆ ಶೋ ಇರುತ್ತವೆ.

**ಆಗಸ್ಟ್-21 ರಿಂದ ಟಿಕೆಟ್ ಬುಕಿಂಗ್**

ಆಗಸ್ಟ್-21 ರಿಂದ ದೇಶಾದ್ಯಂತ ಟಿಕೆಟ್ ಬುಕಿಂಗ್ ಶುರು ಆಗುತ್ತಿದೆ. ಇದರೊಟ್ಟಿಗೆ ಈ ಚಿತ್ರ, ಟಿಕೆಟ್ ಬುಕಿಂಗ್ ಅಲ್ಲಿ ಏನೆಲ್ಲ ದಾಖಲೆ ಮಾಡುತ್ತದೆ ಅನ್ನುವ ಕುತೂಹಲವು ಹೆಚ್ಚಾಗಿದೆ.

ಈ ಚಿತ್ರ ತನ್ನದೇ ರೀತಿಯಲ್ಲಿಯೇ ಎಲ್ಲರ ಗಮನ ಸೆಳೆದಿದೆ. ಆದರೆ, ಇದು ದೊಡ್ಡವರಿಗಾಗಿಯೇ ಮಾಡಿರೋ ಸಿನಿಮಾ ಆಗಿದೆ. ಈ ವಿಷಯವನ್ನ ಚಿತ್ರ ತಂಡವೇ ಹೇಳುತ್ತಿದೆ. ಯಶ್ ಕೂಡ ಇದನ್ನ ಒತ್ತಿ ಹೇಳಿದ್ದಾರೆ.

ಈ ಚಿತ್ರದಲ್ಲಿ ನಟಿಮಣಿಯರ ದೊಡ್ಡ ದಂಡೇ ಇದೆ. ಕಿಯಾರಾ ಅಡ್ವಾಣಿ, ಹುಮಾ ಖುರೇಷಿ, ತಾರಾ ಸುತಾರಿಯಾ, ರುಕ್ಮಿಣಿ ವಸಂತ್, ನಯನತಾರಾ ಹೀಗೆ ಸಾಲು ಸಾಲು ನಟಿಯರು ಈ ಚಿತ್ರದಲ್ಲಿದ್ದಾರೆ.

ಇವರ ಈ ಚಿತ್ರಕ್ಕೆ ಗೀತು ಮೋಹನ್‌ದಾಸ್ ಡೈರೆಕ್ಷನ್ ಇದೆ. ಗೀತು ಪತಿ ರಾಜೀವ್ ರವಿ ಕ್ಯಾಮರಾವರ್ಕ್ ಮಾಡಿದ್ದಾರೆ. ರವಿ ಬಸ್ರೂರು ಹಿನ್ನೆಲೆ ಸಂಗೀತ ಮಾಡಿದ್ದಾರೆ.

ವಿಶಾಲ್ ಮಿಶ್ರಾ, ಹಾಡುಗಳನ್ನ ಹಾಡಿದ್ದಾರೆ, ಕಂಪೋಸ್ ಕೂಡ ಮಾಡಿದ್ದಾರೆ. ಈ ಚಿತ್ರದ ಬಗ್ಗೆ ಭಾರೀ ದೊಡ್ಡ ನಿರೀಕ್ಷೆ ಇದೆ. ಈ ಮೂಲಕ ಯಶ್ ವಿಶ್ವ ಸಿನಿಮಾರಂಗಕ್ಕೆ ಕಾಲಿಡುತ್ತಿದ್ದಾರೆ ಅಂತ ಹೇಳಬಹುದು.





## ಈ ಪ್ಯಾನ್ ಇಂಡಿಯಾ ಸಿನಿಮಾದ ಸ್ಪೆಷಾಲಿಟಿ ಏನ್ ಗೊತ್ತಾ?

### ಶಿವರಾಜ್‌ಕುಮಾರ್ ಕೂರ್ಮಾವತಾರ್ ಟೈಟಲ್ ಟೀಸರ್ ರಿಲೀಸ್

ಕೂರ್ಮಾವತಾರ್ ಚಿತ್ರವನ್ನು ಹರ್ಷ ವರ್ಧನ್ ಕಡಿಯಾಲ ನಿರ್ದೇಶಿಸುತ್ತಿದ್ದು, ಬೃಹತ್ ಬಜೆಟ್‌ನಲ್ಲಿ ನಿರ್ಮಿಸಲಾಗುತ್ತಿದೆ. ಈ ಚಿತ್ರದಲ್ಲಿ ಭಾರತೀಯ ಚಿತ್ರರಂಗದ ಖ್ಯಾತ ನಟ-ನಟಿಯರ ದಂಡೇ ಇರಲಿದ್ದು, ಶಿವರಾಜ್‌ಕುಮಾರ್ ಜೊತೆ ತೆಲುಗು ನಟ ರಾಜ್ ತರುಣ್, ಶಿವಾಜಿ, ವರಲಕ್ಷ್ಮಿ ಶರತ್‌ಕುಮಾರ್, ಸಾಯಿ ಕುಮಾರ್ ಹೀಗೆ ದೊಡ್ಡ ತಾರಾಬಳಗ ಇದೆ.

ಕರುನಾಡ ಚಕ್ರವರ್ತಿ ಡಾ. ಶಿವರಾಜ್‌ಕುಮಾರ್ ಮತ್ತೊಂದು ಬೃಹತ್ ಪ್ಯಾನ್-ಇಂಡಿಯಾ ಸಿನಿಮಾಗೆ ಗ್ರೀನ್ ಸಿಗ್ನಲ್ ನೀಡಿದ್ದಾರೆ. ಶ್ರೀ ಮಹಾವಿಷ್ಣುವಿನ ಎರಡನೇ ಅವತಾರವಾದ ಕೂರ್ಮಾವತಾರದ ಕಥಾಹಂದರವನ್ನು ಆಧರಿಸಿ ಸಿದ್ಧವಾಗುತ್ತಿರುವ ಈ ಮಹತ್ವಾಕಾಂಕ್ಷೆಯ ಚಿತ್ರಕ್ಕೆ ಕೂರ್ಮಾವತಾರ್ ಎಂದು ನಾಮಕರಣ ಮಾಡಲಾಗಿದ್ದು, ಚಿತ್ರತಂಡ ಅಧಿಕೃತ ಟೈಟಲ್ ರಿವೀಲ್ ಟೀಸರ್ ಬಿಡುಗಡೆ ಮಾಡಿದೆ.

ಭಾರತೀಯ ಚಿತ್ರರಂಗದ ಇತಿಹಾಸದಲ್ಲೇ ಕೂರ್ಮಾವತಾರದ ಹಿನ್ನೆಲೆಯನ್ನು ಒಳಗೊಂಡ ಕಥೆಯನ್ನು ಪ್ರಧಾನವಾಗಿಟ್ಟುಕೊಂಡು ನಿರ್ಮಾಣವಾಗುತ್ತಿರುವ ಮೊದಲ ಸಿನಿಮಾ ಇದಾಗಿದ್ದು, ಈಗಾಗಲೇ ಬಿಡುಗಡೆಯಾಗಿರುವ ಟೀಸರ್ ಪ್ರೇಕ್ಷಕರಲ್ಲಿ ಮತ್ತು ಶಿವಣ್ಣನ ಅಭಿಮಾನಿಗಳಲ್ಲಿ ಭಾರಿ ಕುತೂಹಲ ಮೂಡಿಸಿದೆ. ಚಿತ್ರದಲ್ಲಿ ಶಿವರಾಜ್‌ಕುಮಾರ್ ಅವರ ಲುಕ್ ಹೇಗಿರಲಿದೆ ಎಂಬುದನ್ನು ನೋಡಲು ಅಭಿಮಾನಿಗಳು ಕಾತರದಿಂದ ಕಾಯುತ್ತಿದ್ದಾರೆ.

ಈ ಚಿತ್ರವನ್ನು ಹರ್ಷ ವರ್ಧನ್ ಕಡಿಯಾಲ ನಿರ್ದೇಶಿಸುತ್ತಿದ್ದು, ಪಂಚವಕ್ತ್ರ ಪಿಕ್ಚರ್ಸ್ ಹಾಗೂ ರುಕ್ವಿನಾ ಸ್ಟುಡಿಯೋಸ್ ಜಂಟಿ ಬ್ಯಾನರ್‌ಗಳ ಅಡಿಯಲ್ಲಿ ಪೂಜಿತ ಕಡಿಯಾಲ ಮತ್ತು ನರೇಂದ್ರ ಕೊಂಡ ಬೃಹತ್ ಬಜೆಟ್‌ನಲ್ಲಿ ನಿರ್ಮಿಸುತ್ತಿದ್ದಾರೆ. ಈ ಚಿತ್ರದಲ್ಲಿ ಭಾರತೀಯ ಚಿತ್ರರಂಗದ ಖ್ಯಾತ ನಟ-ನಟಿಯರ ದಂಡೇ ಇರಲಿದ್ದು, ಶಿವರಾಜ್ ಕುಮಾರ್ ಅವರೊಂದಿಗೆ ತೆಲುಗು ನಟ ರಾಜ್ ತರುಣ್, ಶಿವಾಜಿ, ವರಲಕ್ಷ್ಮಿ ಶರತ್‌ಕುಮಾರ್, ಸಾಯಿ ಕುಮಾರ್, ರಾಜಾ ರವೀಂದ್ರ, ವಿಟಿವಿ ಗಣೇಶ್, ಸಪ್ತಗಿರಿ, ಗೆಟಪ್ ಶ್ರೀನು, ಶತ್ರು, ಮಹೇಶ್ ವಿಟ್ಟ ಮತ್ತು ಅತಿರಾ ರಾಜ್ ಮುಂತಾದ ಪ್ರತಿಭಾವಂತ ಕಲಾವಿದರು ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಳ್ಳಲಿದ್ದಾರೆ.

ತಾಂತ್ರಿಕವಾಗಿಯೂ ಚಿತ್ರ ಅತ್ಯುನ್ನತ ಮಟ್ಟದಲ್ಲಿ ಮೂಡಿಬರಲಿದ್ದು, ಬಿ. ಅಜನೀಶ್ ಲೋಕನಾಥ್ ಸಂಗೀತ ನಿರ್ದೇಶನ ಮಾಡುತ್ತಿದ್ದಾರೆ. ಚಿತ್ರಕ್ಕೆ ಜಗದೀಶ್ ಚೀಕಾಟಿ ಛಾಯಾಗ್ರಹಣ ಮಾಡುತ್ತಿದ್ದು, ಸಂಕಲನಕಾರ ಮಾರ್ತಾಂಡ್ ಕೆ. ವೆಂಕಟೇಶ್ ಎಡಿಟಿಂಗ್ ಜವಾಬ್ದಾರಿ ಹೊತ್ತಿದ್ದಾರೆ. ಲೇಖಕ್ ರಾಮ್ ಹೆಚ್ಚುವರಿ ಚಿತ್ರಕಥೆ ಹಾಗೂ ಸಂಭಾಷಣೆ ಬರೆದಿದ್ದು, ರಾಘವ ಕಲಾ ನಿರ್ದೇಶನ ಮಾಡುತ್ತಿದ್ದಾರೆ. ವಿಎಫ್‌ಎಕ್ಸ್ ತಂತ್ರಜ್ಞಾನ ಹಾಗೂ ಅದ್ದೂರಿ ಮೇಕಿಂಗ್‌ನೊಂದಿಗೆ ತಯಾರಾಗುತ್ತಿರುವ ಕೂರ್ಮಾವತಾರ್, ಭಾರತದ ಪ್ರಮುಖ ಭಾಷೆಗಳಲ್ಲಿ ಏಕಕಾಲದಲ್ಲಿ ತೆರೆಗೆ ಬರಲು ಸಜ್ಜಾಗುತ್ತಿದೆ.




ಪ್ರಯೋಗಾತ್ಮಕ ಸಿನಿಮಾಗಳು ಹಲವಾರು ಸವಾಲುಗಳಿಗೆ ಎದೆಗೊಡಬೇಕಾದ ಸಂದರ್ಭಗಳು ಸೃಷ್ಟಿಯಾಗೋದು ನಿಜ. ಆದರೆ, ಅಂಥಾ ಸಿನಿಮಾಗಳನ್ನು ಅತೀವ ಪ್ರೀತಿಯಿಂದ ಕೈ ಹಿಡಿಯಬಲ್ಲ ಸದಭಿರುಚಿಯ ಪ್ರೇಕ್ಷಕ ವರ್ಗ ನಮ್ಮಲ್ಲಿದೆ ಎಂಬುದೂ ಅಷ್ಟೇ ನಿಜ. ಈ ಕಾರಣದಿಂದಲೇ ಸಿದ್ಧಸೂತ್ರಗಳನ್ನು ಮೀರಿಕೊಂಡ ಅನೇಕ ಸಿನಿಮಾಗಳನ್ನು ಪ್ರೇಕ್ಷಕರು ಮೆಚ್ಚಿಕೊಂಡಿದ್ದಾರೆ. ಆ ಸಾಲಿನಲ್ಲಿ ಮುಂಚೂಣಿಯಲ್ಲಿರುವ ಸಿನಿಮಾ ದಾರಿ ಯಾವುದಯ್ಯಾ ವೈಕುಂಟಕೆ. ಈ ಚಿತ್ರದ ಮೂಲಕ ಸಿದ್ದು ಪೂರ್ಣಚಂದ್ರ ನಿರ್ದೇಶಕರಾಗಿ ತಮ್ಮದೇ ಛಾಪು ಮೂಡಿಸಿದ್ದೀಗ ಇತಿಹಾಸ. ಇದೀಗ ಸಿದ್ದು ಪೂರ್ಣಚಂದ್ರ, ಬ್ರಹ್ಮ ಕಮಲ ಎಂಬ ಮತ್ತೊಂದು ಸೂಕ್ಷ್ಮ ಕಥಾನಕಕ್ಕೆ ದೃಶ್ಯ ರೂಪ ಕೊಟ್ಟಿದ್ದಾರೆ. ಈ ವಾರ ಅಂದರೆ, ಆಗಸ್ಟ್ 21ರಂದು ರಾಜ್ಯಾದ್ಯಂತ ತೆರೆಗಾಣಲಿದೆ.

ಇತ್ತೀಚೆಗಷ್ಟೇ ಬ್ರಹ್ಮಕಮಲ ಚಿತ್ರ ಟ್ರೈಲರ್ ಮೂಲಕ ವ್ಯಾಪಕವಾಗಿ ಸುದ್ದಿಯಲ್ಲಿತ್ತು. ಒಂದು ಸದಭಿರುಚಿಯ ಸಿನಿಮಾ ಆ ಪರಿಯಾಗಿ ಸದ್ದು ಮಾಡಿದ್ದದ್ದು ಅದರೊಳಗಿರೋ ಕಂಟೆಂಟಿನ ಕಸುವಿನಿಂದ ಮಾತ್ರ. ಈಗಾಗಲೇ ಈ ಚಿತ್ರ ಹಲವಾರು ಅಂತಾರಾಷ್ಟ್ರೀಯ ಸಿನಿಮೋತ್ಸವಗಳಲ್ಲಿ ಪ್ರದರ್ಶನಗೊಂಡು ಮೆಚ್ಚುಗೆ ಗಳಿಸಿಕೊಂಡಿತ್ತು. ಪ್ರೇಕ್ಷಕರ ಬೇಡಿಕೆಯ ಮೇರೆಗೆ ಹಲವಾರು ಬಾರಿ ಪ್ರದರ್ಶನಗೊಳ್ಳುವ ಮೂಲಕವೂ ಗಮನ ಸೆಳೆದಿತ್ತು. ಅದು ಒಟ್ಟಾರೆ ಸಿನಿಮಾ ಮೂಡಿ ಬಂದಿರುವ ರೀತಿಗೊಂದು ಉದಾಹರಣೆಯಷ್ಟೆ. ಇಂಥಾ ಸಿನಿಮಾ ಇದೀಗ ಸಿನಿಮಾ ಮಂದಿರಗಳಲ್ಲಿ ಬಿಡುಗಡೆಯಾಗುತ್ತಿದೆ ಎಂದರೆ, ಸಹಜವಾಗಿಯೇ ಅದರತ್ತ ಕುತೂಹಲ ಮೂಡಿಕೊಳ್ಳುತ್ತದೆ. ಇದೀಗ ಬ್ರಹ್ಮಕಮಲದ ಸುತ್ತಲೂ ಅಂಥಾದ್ದೇ ಗಾಢ ಕೌತುಕ ಮೂಡಿಕೊಂಡಿದೆ.




### ಆಗಸ್ಟ್ 21 ರಂದು ಸಿನಿಮಾ ಮಂದಿರಗಳಲ್ಲಿ ಆರಳಲಿದೆ ಬ್ರಹ್ಮಕಮಲ!

### ಸೂಕ್ಷ್ಮ ಕಥೆಯ ಚುಂಗು ಹಿಡಿದ ಸಿದ್ದು ಪೂರ್ಣಚಂದ್ರ!

ಕಥೆ, ಚಿತ್ರಕಥೆ, ಸಂಭಾಷಣೆಯೊಂದಿಗೆ ಸಿದ್ದು ಪೂರ್ಣಚಂದ್ರ ನಿರ್ದೇಶನ ಮಾಡಿರುವ ಈ ಸಿನಿಮಾ ಪೂರ್ಣಚಂದ್ರ ಫಿಲಂಸ್ ಬ್ಯಾನರಿನಡಿಯಲ್ಲಿ ನಿರ್ಮಾಣಗೊಂಡಿದೆ. ಅದ್ವಿತಿ ಶೆಟ್ಟಿ, ಋತು ಚೈತ್ರ, ಲೋಕೇಂದ್ರ ಸೂರ್ಯ, ಬಾಲ ರಾಜ್ವಾಡಿ, ಮಮತಾ ರಾಹುತ್, ಪ್ರಮೀಳಾ ಸುಬ್ರಮಣ್ಯ ಮುಂತಾದವರ ತಾರಾಗಣ ಈ ಚಿತ್ರಕ್ಕಿದೆ. ಲೋಕೇಂದ್ರ ಸೂರ್ಯ ಛಾಯಾಗ್ರಹಣ, ಅನಂತ್ ಆರ್ಯನ್ ಸಂಗೀತ ನಿರ್ದೇಶನ, ದೀಪು ಸಂಕಲನ, ನಾಗರತ್ನ ಕೆ.ಹೆಚ್ ನಿರ್ಮಾಣ ನಿರ್ವಹಣೆಯಲ್ಲಿ ಬ್ರಹ್ಮಕಮಲ ರೂಪುಗೊಂಡಿದೆ. ಪುಟ್ಟರಾಜು ಮತ್ತು ಪ್ರಮೀಳಾ ಸುಬ್ರಮಣ್ಯ ಕಾರ್ಯಕಾರಿ ನಿರ್ಮಾಪಕರಾಗಿ ಜೊತೆಯಾಗಿದ್ದಾರೆ.

## ಸಾಹಸಸಿಂಹ ವಿಷ್ಣುವರ್ಧನ್ ಅಮೃತಮಹೋತ್ಸವದ ಸಂಭ್ರಮ



**ಅಭಿಮಾನಿಗಳ ಪಾಲಿಗೆ ಇದು ವಿಶೇಷ ದಿನ**

ಸಾಹಸ ಸಿಂಹ ವಿಷ್ಣುವರ್ಧನ್ ಅವರ 75ನೇ ಜನ್ಮ ದಿನವನ್ನ ಅಭಿಮಾನಿಗಳು ವಿಶೇಷವಾಗಿಯೇ ಆಚರಿಸೋಕೆ ಪ್ಲಾನ್ ಮಾಡಿದ್ದಾರೆ. ಡಾ. ವಿಷ್ಣುವರ್ಧನ್ ಅಮೃತಮಹೋತ್ಸವ ಅಂತಲೇ ಇದನ್ನ ಮಾಡ್ತಿದ್ದಾರೆ. ಇದರ ಪೂರ್ಣ ವಿವರ ಇಲ್ಲಿದೆ ಓದಿ.

**ವಿಷ್ಣುವರ್ಧನ್ ಅಮೃತಮಹೋತ್ಸವದ ಸಂಭ್ರಮ!**

ಸಾಹಸ ಸಿಂಹ ವಿಷ್ಣುವರ್ಧನ್ ಅವರ 75 ನೇ ಜನ್ಮ ದಿವನ್ನ ಫ್ಯಾನ್ಸ್ ವಿಶೇಷವಾಗಿಯೇ ಆಚರಿಸೋಕೆ ಪ್ಲಾನ್ ಆಗಿದ್ದಾರೆ. ಡಾ. ವಿಷ್ಣುವರ್ಧನ್ ಅಮೃತಮಹೋತ್ಸವ ಅಂತಲೇ ಇದನ್ನ ಸೆಲೆಬ್ರೇಟ್ ಮಾಡುತ್ತಿದ್ದಾರೆ. ಇಡೀ ದಿನದ ಒಂದು ದೊಡ್ಡ ಕಾರ್ಯಕ್ರಮ ಕೂಡ ಮಾಡುತ್ತಿದ್ದಾರೆ. ಸಿನಿಮಾರಂಗದ ನಟ ಮತ್ತು ನಟಿಯರು ಇಲ್ಲಿ ಭಾಗಿ ಆಗುತ್ತಿದ್ದಾರೆ. ಈ ಒಂದು ವಿಷಯವನ್ನ ಹೇಳಿಕೊಂಡಿದ್ದಾರೆ. ಈ ಬಗೆಗಿನ ಒಂದಷ್ಟು ವಿವರ ಇಲ್ಲಿ ಕೊಟ್ಟಿದ್ದಾರೆ.

**ವಿಷ್ಣುವರ್ಧನ್ ಅಮೃತಮಹೋತ್ಸವ**

ವಿಷ್ಣುವರ್ಧನ್ ಅವರ 75 ನೇ ಜನ್ಮ ದಿನವನ್ನ ಅಭಿಮಾನಿಗಳು ವಿಶೇಷವಾಗಿಯೇ ಆಚರಿಸುತ್ತಿದ್ದಾರೆ. ಡಾ. ವಿಷ್ಣುವರ್ಧನ್ ಅಮೃತಮಹೋತ್ಸವ ಅಂತ ಒಂದು ವಿಶೇಷ ಕಾರ್ಯಕ್ರಮ ಮಾಡುತ್ತಿದ್ದಾರೆ.

ಬೆಂಗಳೂರಿನಲ್ಲಿ ಈ ಅಮೃತಮಹೋತ್ಸವ ನಡೆಯುತ್ತಿದೆ. ಇಡೀ ದಿನ ಈ ಒಂದು ಕಾರ್ಯಕ್ರಮ ನಡೆಯಲಿದೆ. ಈ ಒಂದು ಕಾರ್ಯಕ್ರಮದಲ್ಲಿ ಡಾ. ವಿಷ್ಣುವರ್ಧನ್ ಅವರ ಜೀವನ, ಸಾಧನೆ ಮತ್ತು ಕನ್ನಡ ಚಿತ್ರರಂಗಕ್ಕೆ ಅವರು ನೀಡಿದ ಅಪಾರ ಕೊಡುಗೆಯನ್ನು ಸ್ಮರಿಸುವ ಕೆಲಸ ಇಲ್ಲಿ ಆಗುತ್ತದೆ ಅಂತ ಡಾಕ್ಟರ್ ವಿಷ್ಣು ಸೇನಾ ಸಮಿತಿ ವೀರಕ ಪುತ್ರ ಶ್ರೀನಿವಾಸ ಹೇಳಿದ್ದಾರೆ.

**ಸೆಪ್ಟೆಂಬರ್-27 ರಂದು ಕಾರ್ಯಕ್ರಮ**

ವಿಷ್ಣುವರ್ಧನ್ ಅವರ ಅಮೃತಮಹೋತ್ಸವ ಕಾರ್ಯಕ್ರಮ ಸೆಪ್ಟೆಂಬರ್-27 ರಂದು ನಡೆಯುತ್ತಿದೆ. ಸೆಪ್ಟೆಂಬರ್-18 ರಂದು ವಿಷ್ಣು ಜನ್ಮ ದಿನ ಇದೆ.

ಆದರೆ, ಜನ್ಮ ದಿನವಾದ 9 ದಿನಗಳ ಬಳಿಕ ಈ ಒಂದು ಕಾರ್ಯಕ್ರಮ ಮಾಡಲಾಗುತ್ತಿದೆ. ಬೆಂಗಳೂರಿನ ನಾಯಂಡಹಳ್ಳಿಯ ನಂದಿ ಲಿಂಕ್ ಗ್ರೌಂಡ್ ಮೈದಾನದಲ್ಲಿ ಡಾ. ವಿಷ್ಣುವರ್ಧನ್ ಅಮೃತಮಹೋತ್ಸವವನ್ನು ಆಯೋಜಿಸಲಾಗಿದೆ.

**ವಿಷ್ಣು ಜೀವನ-ಸಾಧನೆ-ಕೊಡುಗೆ ಸ್ಮರಿಸೋ ದಿನ**

**25 ಸಾವಿರಕ್ಕೂ ಹೆಚ್ಚು ಫ್ಯಾನ್ಸ್**

ಈ ಒಂದು ಅಮೃತಮಹೋತ್ಸವಕ್ಕೆ ರಾಜ್ಯದ ಎಲ್ಲ ಜಿಲ್ಲೆಯಿಂದಲೂ ಫ್ಯಾನ್ಸ್ ಬರ್ತಿದ್ದಾರೆ. 25 ಸಾವಿರಕ್ಕೂ ಹೆಚ್ಚು ಫ್ಯಾನ್ಸ್ ಬರುವ ಸಾಧ್ಯತೆ ಇದೆ.

ಕನ್ನಡ ಚಿತ್ರರಂಗದ ಕಲಾವಿದರು, ನಿರ್ದೇಶಕರು, ನಿರ್ಮಾಪಕರು, ತಂತ್ರಜ್ಞರು, ಸಾಹಿತ್ಯ ಕ್ಷೇತ್ರದ ಗಣ್ಯರು ಹಾಗೂ ಸಂಗೀತ ಕ್ಷೇತ್ರದ ದಿಗ್ಗಜರು ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

**ವಿಷ್ಣು ಜೀವನ-ಸಾಧನೆ**



ಈ ಒಂದು ಅಮೃತಮಹೋತ್ಸವ ಕಾರ್ಯಕ್ರಮ ವಿಶೇಷವಾಗಿಯೇ ಇರುತ್ತದೆ. ವಿಷ್ಣುವರ್ಧನ್ ಅವರ ಜೀವನ ಮತ್ತು ಸಾಧನೆ ಸಾರುವ ಹಲವು ಕಾರ್ಯಕ್ರಮಗಳು ಇಲ್ಲಿ ಪ್ಲಾನ್ ಆಗಿವೆ.

ವಿಷ್ಣುವರ್ಧನ್ ಅವರ ಜೊತೆಗೆ ಕೆಲಸ ಮಾಡಿರೋ ಕಲಾವಿದೆಯರು, ನಿರ್ದೇಶಕರನ್ನು ಈ ಒಂದು ಕಾರ್ಯಕ್ರಮಕ್ಕೆ ಆಹ್ವಾನಿಸೋ ಪ್ಲಾನ್ ಇದೆ. ಈ ಒಂದು ಪ್ರಯತ್ನ ಸಾಗಿದೆ ಅಂತ ಡೈರೆಕ್ಟರ್ ರಾಜೇಂದ್ರ ಸಿಂಗ್ ಬಾಬು ಈ ಪತ್ರಿಕಾಗೋಷ್ಠಿಯಲ್ಲಿ ಹೇಳಿಕೊಂಡಿದ್ದಾರೆ.

**ಅಮೃತಮಹೋತ್ಸವದ ಲೋಗೋ**

ಸಾಹಸ ಸಿಂಹ ವಿಷ್ಣುವರ್ಧನ್ ಅಮೃತಮಹೋತ್ಸವದ ಲೋಗೋ ಕೂಡ ಮಾಡಲಾಗಿದೆ. ಇದನ್ನ ಇದೇ ಪತ್ರಿಕಾಗೋಷ್ಠಿಯಲ್ಲಿ ಅನಾವರಣ ಗೊಳಿಸಲಾಗಿದೆ.

ಈ ಸಮಯದಲ್ಲಿ ಕರ್ನಾಟಕ ಚಲನ ಚಿತ್ರ ವಾಣಿಜ್ಯ ಮಂಡಳಿಯ ಉಪಾಧ್ಯಕ್ಷ ಸುಂದರ್ ರಾಜ್, ಡೈರೆಕ್ಟರ್ ರಾಜೇಂದ್ರ ಸಿಂಗ್ ಬಾಬು, ಡಾಕ್ಟರ್ ವಿಷ್ಣು ಸೇನಾ ಸಮಿತಿ ವೀರಕ ಪುತ್ರ ಶ್ರೀನಿವಾಸ್ ಇದ್ದರು.

ಇವರು ವಿಷ್ಣುವರ್ಧನ್ ಅವರ ಜೀವನ, ಸಾಧನೆ ಮತ್ತು ಕೊಡುಗೆಯನ್ನ ಎಲ್ಲರಿಗೂ ತಿಳಿಸೋ ಕೆಲಸವನ್ನ ಈ ಅಮೃತಮಹೋತ್ಸವದ ಮೂಲಕ ಮಾಡೋಕೆ ಹೊರಟ್ಟಿದ್ದಾರೆ ಅಂತಲೇ ಹೇಳಬಹುದು.

## ಎಲ್ಲ ಭಾಷೆಗಳಲ್ಲೂ ಅವಕಾಶಗಳ ಅಬ್ಬರ!

ಸಪ್ತಸಾಗರದಾಚೆ ಎಲ್ಲೋ ಚಿತ್ರದ ಮೂಲಕ ಗೆಲುವಿನ ಪಥಕ್ಕೆ ಅಡಿಯಿರಿಸಿದ್ದಾಕೆ ರುಕ್ಮಿಣಿ ವಸಂತ್. ಸಾಮಾನ್ಯವಾಗಿ, ಇಂಥಾ ಗೆಲುವಿನ ನಂತರದಲ್ಲಿ ಒಂದು ವಿಫಲ ಸಿನಿಮಾದ ಭಾಗವಾದರೆ, ಅದು ಒಂದಿಡೀ ವೃತ್ತಿ ಬದುಕನ್ನೇ ತತ್ತರಿಸುವಂತೆ ಮಾಡೋದಿದೆ. ಆದರೆ, ರುಕ್ಮಿಣಿಯ ಪಾಲಿಗೆ ಅಂಥಾ ಹಿನ್ನಡೆಯೂ ಕೂಡಾ ಮಹಾ ಗೆಲುವೊಂದಕ್ಕೆ ಮುನ್ನುಡಿಯಾಗಿ ಬಿಟ್ಟಿತ್ತು. ವಿಜಯ್ ಸೇತುಪತಿ ಜೊತೆಗಿನ ಸಿನಿಮಾ ರುಕ್ಮಿಣಿ ಪಾಲಿಗೆ ಸ್ಪೀಡ್ ಬ್ರೇಕರಿನಂತಾಗಿತ್ತು. ಆ ನಂತರ ಕಾಂತಾರಾ ಚಾಪ್ಟರ್ ಮೂಲಕ ಪುಟಿದೆದ್ದಿದ್ದ ರುಕ್ಮಿಣಿಗೆ ಸಿಕ್ಕಿದ್ದು ಟಾಕ್ಸಿಕ್‌ನಂತಾ ದೊಡ್ಡ ಅವಕಾಶ. ಇದೀಗ ಟಾಕ್ಸಿಕ್ ಟ್ರೈಲರಿನಲ್ಲಿ ಮಿಂಚಿದ್ದ ಈಕೆಯ ಲುಕ್ಕು ಕಂಡು ಸಿನಿಮಾ ಪ್ರೇಮಿಗಳು ಥ್ರಿಲ್ ಆಗಿದ್ದಾರೆ. ಇಂಥಾ ಹೊತ್ತಿನಲ್ಲಿ ಬೇರೆ ಭಾಷೆಗಳ ಸಿನಿಮಾ ರಂಗಗಳಿಂದ ರುಕ್ಮಿಣಿ ಪಾಲಿಗೆ ಅವಕಾಶಗಳ ಸುಗ್ಗಿ ಆರಂಭವಾಗಿ ಬಿಟ್ಟಿದೆ!

ಸದ್ಯಕ್ಕೆ ಬಂದ ಅವಕಾಶವನ್ನೆಲ್ಲ ಬಾಚಿಕೊಂಡು ಒಪ್ಪಿಕೊಳ್ಳುವ ಸ್ಥಿತಿಯಲ್ಲಿ ರುಕ್ಮೀನಿ ಇಲ್ಲ. ಟಾಕ್ಸಿಕ್‌ನಂಥಾ ದೊಡ್ಡ ಸಿನಿಮಾಗಳಲ್ಲಿ ನಟಿಸಿದ ನಂತರ, ಅದನ್ನು ಸರಿದೂಗಿಸುವಂಥಾ ಸಿನಿಮಾಗಳನ್ನು ಮಾತ್ರವೇ ಆಯ್ಕೆ ಮಾಡಿಕೊಳ್ಳುವ ಅನಿವಾರ್ಯತೆ ಇದೆ. ಇದೀಗ ಒಂದಷ್ಟು ಅವಕಾಶಗಳನ್ನು ಅಮೂಲಾಗ್ರವಾಗಿ ಪರಿಶೀಲಿಸುತ್ತಿರುವ ರುಕ್ಮಿಣಿ, ಮಲೆಯಾಳಂನ ಒಂದು ಸಿನಿಮಾವನ್ನು ಒಪ್ಪಿಕೊಂಡಿದ್ದಾರಂತೆ. ಈ ಮೂಲಕ ಮಲೆಯಾಳದ ಪ್ರಸಿದ್ಧ ನಟ ನಿವಿನ್ ಪೌಲಿಗೆ ನಾಯಕಿಯಾಗಿ ನಟಿಸಲಿರೋದು ಪಕ್ಕಾ ಆದಂತಾಗಿದೆ. ಈ ಸಿನಿಮಾದ ಬಗೆಗಿನ ಮತ್ತಷ್ಟು ಮಾಹಿತಿಗಳು ಶೀಘ್ರದಲ್ಲಿಯೇ ಜಾಹೀರಾಗುವ ನಿರೀಕ್ಷೆಗಳಿವೆ.



ಹಾಗೆ ನೋಡಿದರೆ, ಈ ಹುಡುಗಿಗೆ ಸಪ್ತ ಸಾಗರದಾಚೆ ಎಲ್ಲೋ ಚಿತ್ರದಲ್ಲಿ ನಾಯಕಿ ಯಾಗಿ ನಟಿಸುವ ಅವಕಾಶ ಕೂಡಿ ಬಂದಿದ್ದೇ ಅಚಾನಕ್ಕಾಗಿ. ಅದಾಗಲೇ ನಟಿಯಾಗಬೇಕೆಂಬ ಕನಸಿಟ್ಟುಕೊಂಡಿದ್ದ ರುಕ್ಮಿಣಿಗೆ ಸಪ್ತ ಸಾಗರದಾಚೆ ಎಲ್ಲೋ ಚಿತ್ರದ ನಾಯಕಿಗಾಗಿ ಆಡಿಷನ್ ನಡೆಸುತ್ತಿರುವ ವಿಚಾರ ಗಮನಕ್ಕೆ ಬಂದಿತ್ತು.

ತುಸು ಅಳುಕಿನೊಂದಿಗೆ ಚಿತ್ರತಂಡವನ್ನು ಸಂಪರ್ಕಿಸಿದ್ದ ರುಕ್ಮಿಣಿ, ನಂತರ ಒಂದಷ್ಟು ಸ್ಪರ್ಧೆಯನ್ನು ದಾಟಿ ಕೊಂಡು ನಾಯಕಿಯಾಗಿ ಆಯ್ಕೆಯಾಗಿದ್ದರು. ಅದಕ್ಕೆ ತನ್ನ ಪ್ರತಿಭೆ ಮಾತ್ರವಲ್ಲದೇ ಅದೃಷ್ಟವೂ ಕಾರಣವೆಂಬ ಮನಃಸ್ಥಿತಿ ಹೊಂದಿರುವ ರುಕ್ಮಿಣಿಯೀಗ ತಮಿಳು ಚಿತ್ರರಂಗ ದಲ್ಲಿಯೂ ಬ್ಯುಸಿ ಯಾಗಿದ್ದಾರೆ. ಅದೇ ಹೊತ್ತಿನಲ್ಲಿ ತೆಲುಗಿನಲ್ಲಿಯೂ ಒಂದಷ್ಟು ಅವಕಾಶಗಳು ಅರಸಿ ಬರಲಾರಂಭಿಸಿವೆ. ಈ ನಡುವೆ ಅಧಿಕೃತವಾಗಿಯೇ ಮಲೆಯಾಳಂಗೂ ರುಕ್ಮಿಣಿಯ ಪಾದಾರ್ಪಣೆಯಾದಂತಾಗಿದೆ!



ಜನಪ್ರಿಯ ಅಲೆಗಳ ಭರಾಟೆಯ ನಡುವೆ ಒಂದಷ್ಟು ಪ್ರಯೋಗಾತ್ಮಕ ಪಲ್ಲಟಗಳು ಜರುಗದಿದ್ದರೆ ಸಿನಿಮಾ ರಂಗ ನಿಂತ ನೀರಿನಂತಾಗಿ ಬಿಡುತ್ತದೆ. ಅಂಥಾದ್ದೊಂದು ಹೊಸಾ ಹರಿವನ್ನು ಸಾಧ್ಯವಾಗಿಸೋ ಛಾತಿಯಿರೋದು ಹೊಸಾ ತಂಡಗಳಿಗೆ ಮಾತ್ರ. ಅಂಥಾದ್ದೊಂದು ಹೊಸಾ ಹಾದಿಯಲ್ಲಿ ರೂಪುಗೊಂಡಿರುವ, ವಿಮಲ್ ರಾಜ್ ಎನ್ ನಿರ್ದೇಶನದ ಅ ಡೇಟ್ ಚಿತ್ರವೀಗ ಎಲ್ಲ ಕೆಲಸ ಕಾರ್ಯಗಳನ್ನೂ ಮುಗಿಸಿಕೊಂಡು ಬಿಡುಗಡೆಗೆ ಅಣಿಗೊಂಡಿದೆ. ಇದೇ ಹೊತ್ತಿನಲ್ಲಿ ಬ್ಯಾಡ್ ಗೈ ಆಂಥಮ್ ಸಾಂಗ್ ಶೀರ್ಷಿಕೆಯ ಯುವ ಆವೇಗದ ಹಾಡೊಂದನ್ನು ಚಿತ್ರತಂಡ ಬಿಡುಗಡೆಗೊಳಿಸಿದೆ.

## ಒಂದು ದಿನದಲ್ಲಿ ಘಟಿಸೋ ರೋಮಾಂಚಕ ಕಥನ!

ರ್‍ಯಾಪ್ ಶೈಲಿಯ ಹಾಡುಗಳಿಗೆ ಹುಚ್ಚೆದ್ದು ತೆರೆದುಕೊಳ್ಳುವ ಯುವ ಸಮುದಾಯದ ಸಂಖ್ಯೆ ಇದೀಗ ಹೆಚ್ಚಾಗಿದೆ. ಅಂಥಾ ಕೇಳುಗರನ್ನು ಮಾತ್ರವಲ್ಲದೇ, ಸಂಗೀತಾಸಕ್ತರನ್ನೆಲ್ಲ ಸೆಳೆಯುವ ಶೈಲಿಯಲ್ಲಿ ಸದರಿ ಹಾಡು ಮೂಡಿ ಬಂದಿದೆ. ಈ ಹಾಡಿಗೆ ಸುಜನಿತ್ ಶೆಟ್ಟಿ ಹಾಗೂ ವಿಮಲ್ ರಾಜ್ ಎನ್ ಸಾಹಿತ್ಯ ಬರೆದಿದ್ದಾರೆ. ಮೋಕ್ಷ ಬೀಟ್ಸ್ ಸಂಗೀತ ಸಂಯೋಜನೆಯಿರುವ ಈ ಹಾಡಿನೊಂದಿಗೆ ಅ ಡೇಟ್ ಮತ್ತಷ್ಟು ಪ್ರೇಕ್ಷಕರನ್ನು ಸೆಳೆದುಕೊಂಡಿದೆ. ಈಗಾಗಲೇ ಇದೊಂದು ಭಿನ್ನ ಕಥೆ ಹೊಂದಿರೋ ಸಿನಿಮಾವಾಗಿ ಪ್ರೇಕ್ಷಕರ ವಲಯದಲ್ಲೊಂದು ಕುತೂಹಲ ಮೂಡಿಕೊಂಡಿದೆ. ಈ ಹಾಡು ಅದನ್ನು ಮತ್ತಷ್ಟು ತೀವ್ರಗೊಳಿಸುವಲ್ಲಿ ಸಫಲವಾಗಿದೆ.

ಕಿರುಚಿತ್ರಗಳನ್ನು ನಿರ್ದೇಶನ ಮಾಡಿ ಸೈ ಅನ್ನಿಸಿಕೊಂಡಿದ್ದಾರೆ. ಅಂಥಾ ಕಿರುಚಿತ್ರಗಳಲ್ಲಿ ಅನೇಕವುಗಳು ಚಲನಚಿತ್ರೋತ್ಸವಗಳಲ್ಲಿ ಪ್ರದರ್ಶನಗೊಂಡು ಮೆಚ್ಚುಗೆ ಗಳಿಸಿಕೊಂಡಿವೆ. ಹೀಗೆ ಕಿರುಚಿತ್ರಗಳ ಮೂಲಕ ತಮ್ಮೊಳಗಿನ ನಿರ್ದೇಶನದ ಕಸುವನ್ನು ಒರೆಗೆಹಚ್ಚಿದ್ದ ವಿಮಲ್ ರಾಜ್ ನಿರ್ದೇಶನದ ಚೊಚ್ಚಲ ಚಿತ್ರ ಅ ಡೇಟ್ ಇಲ್ಲಿ ಯುವ ಆವೇಗದ ಕಥೆಯಿದೆ. ಉತ್ತರದ ಹುಡುಗಿ ಮತ್ತು ದಕ್ಷಿಣದ ಹುಡುಗನ ನಡುವೆ ಬೆಂಗಳೂರಿನ ಭೂಮಿಕೆಯಲ್ಲಿ ಕಥೆಯೊಂದು ಗರಿಬಿಚ್ಚಿಕೊಳ್ಳುತ್ತದೆಯಂತೆ. ರೊಮ್ಯಾಮ್ಸ್ ಡ್ರಾಮಾ ಜಾನರಿಗೊಳಪಡುವ ಈ ಸಿನಿಮಾದಲ್ಲಿ ಭಯ, ಕುತೂಹಲ, ಹಿಂಜರಿಕೆಗಳ ಮಿಶ್ರ ಭಾವದೊಂದಿಗೆ ಭೇಟಿಯಾಗೋ ಎರಡು ಜೀವಗಳ ಹಿನ್ನೆಲೆಯಲ್ಲಿ, ಪ್ರಸ್ತುತ ಬೆಂಗಳೂರಿನ ಸನ್ನಿವೇಶಗಳನ್ನು ಒಳಗೊಂಡಂತೆ ಕಥೆ ತೆರೆದುಕೊಳ್ಳುತ್ತದೆ. ಸುಜನಿತ್ ಶೆಟ್ಟಿ ಮತ್ತು ಅಶ್ವಿನಿ ಶೆಣೈ ನಾಯಕ ನಾಯಕಿಯರಾಗಿ ನಟಿಸಿದ್ದಾರೆ.

ವಿಶೇಷವೆಂದರೆ, ಈ ಸಿನಿಮಾ ಎರಡು ಪಾತ್ರಗಳ ಸುತ್ತಾ ಚಲಿಸುತ್ತೆ. ನಿರ್ದೇಶಕರು ಪ್ರತೀ ದೃಶ್ಯಗಳೂ ಕೂಡಾ ಅತ್ಯಂತ ನೈಜವಾಗಿ ಮೂಡಿ ಬರಬೇಕೆಂಬ ಇರಾದೆಯಿಂದ ಬೆಂಗಳೂರಿನ ಐವತ್ತೈದಕ್ಕೂ ಹೆಚ್ಚು ಸ್ಥಳಗಳಲ್ಲಿ ಚಿತ್ರೀಕರಣ ನಡೆಸಿದ್ದಾರೆ. ಇದರ ಭಾಗವಾಗಿಯೇ ಬೆಂಗಳೂರು ಕೂಡಾ ಚಿತ್ರದ ಪ್ರಮುಖ ಪಾತ್ರವೊಂದರಂತೆ ಮೂಡಿಬಂದಿದೆ. ವೀಕೆಂಡ್ ಶಾರ್ಟ್ಸ್ ಸ್ಟುಡಿಯೋ ಬ್ಯಾನರ್‌ನಡಿ ಸಮಾನ ಮನಸ್ಕರ ತಂಡ ಈ ಚಿತ್ರವನ್ನು ನಿರ್ಮಿಸಿದೆ. ಚಿತ್ರಕ್ಕೆ ಮೋಕ್ಷ ಬೀಟ್ಸ್ ಸಂಗೀತ, ವಡ್ಡೆ ದೇವೇಂದ್ರ ರೆಡ್ಡಿ ಛಾಯಾಗ್ರಹಣ, ವಿಮಲ್ ರಾಜ್ ಎನ್ ಸಂಕಲನ ಹಾಗೂ ಸುಜನಿತ್ ಶೆಟ್ಟಿ ಮತ್ತು ವಿಮಲ್ ರಾಜ್ ಎನ್ ಸಾಹಿತ್ಯವಿದೆ. ಇಷ್ಟರಲ್ಲಿಯೇ ಅ ಡೇಟ್ ಬಿಡುಗಡೆ ದಿನಾಂಕ ಘೋಷಣೆಯಾಗಲಿದೆ.

# ದೇವರಾಜ ಅರಸು ಸಾಮಾಜಿಕ ನ್ಯಾಯದ ಹರಿಕಾರ

## ಕ್ರಾಂತಿಕಾರಿ ಹೆಜ್ಜೆಗಳನ್ನು ಇಟ್ಟ ಧೀಮಂತ ನಾಯಕ: ಶ್ರೀಧರ್ ಕಂಕಣವಾಡಿ

• ಪ್ರಜೋದಯ ವರದಿ

**ಬೇಲೂರು:** ದೇವರಾಜ ಅರಸು ಅವರು ಕೇವಲ ಒಬ್ಬ ರಾಜಕಾರಣಿಯಾಗಿರಲಿಲ್ಲ, ಶೋಷಿತರು, ಹಿಂದುಳಿದವರು ಹಾಗೂ ದೀನದಲಿತರ ಧ್ವನಿಯಾಗಿ, ಸಮಾಜದಲ್ಲಿದ್ದ ಅಸಮಾನತೆಯನ್ನು ಹೋಗಲಾಡಿಸಲು ಕ್ರಾಂತಿಕಾರಿ ಹೆಜ್ಜೆಗಳನ್ನು ಇಟ್ಟ ಧೀಮಂತ ನಾಯಕ ಎಂದು ತಾಲ್ಲೂಕು ದಂಡಾಧಿಕಾರಿ ಶ್ರೀಧರ್ ಕಂಕಣವಾಡಿ ಅವರು ಹೇಳಿದರು.



ಪಟ್ಟಣದ ಅಂಬೇಡ್ಕರ್ ಭವನದಲ್ಲಿ ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆ ಅಂಗವಾಗಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಪುರಸಭೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ದೇವರಾಜ ಅರಸು ಅವರು ಜಾರಿಗೆ ತಂದ ಉಳುವವನೇ ಭೂಮಿಯ ಒಡೆಯ ಎಂಬ ಭೂ ಸುಧಾರಣಾ ಕಾಯ್ದೆ ಲಕ್ಷಾಂತರ ಬಡ ರೈತರಿಗೆ ಸ್ವಂತ ಭೂಮಿಯ ಹಕ್ಕು ದೊರಕಿಸಿಕೊಟ್ಟಿತು. ಗೇಣಿ ಪದ್ಧತಿಯನ್ನು ರದ್ದುಗೊಳಿಸಿ, ದುಡಿಯುವ ಕೈಗಳಿಗೆ ಭೂಮಿಯ ಹಕ್ಕು ಕಲ್ಪಿಸಿದ ಕೀರ್ತಿ ಅರಸು ಅವರಿಗೆ ಸಲ್ಲುತ್ತದೆ ಎಂದರು.

ಹಿಂದುಳಿದ ವರ್ಗಗಳ ಸಾಮಾಜಿಕ ಹಾಗೂ ಆರ್ಥಿಕ ಸ್ಥಿತಿಗತಿಗಳನ್ನು ಅಧ್ಯಯನ ಮಾಡಲು ಎಲ್.ಜಿ. ಹಾವನೂರು ಆಯೋಗವನ್ನು ರಚಿಸಿ, ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರಗಳಲ್ಲಿ ಹಿಂದುಳಿದ ವರ್ಗಗಳಿಗೆ ಸೂಕ್ತ ಮೀಸಲಾತಿ ದೊರಕುವಂತೆ ಮಾಡಿದ ಅವರ ಸಾಮಾಜಿಕ ನ್ಯಾಯದ ಪರಿಕಲ್ಪನೆ ಇಂದಿಗೂ ಮಾದರಿಯಾಗಿದೆ ಎಂದು ಹೇಳಿದರು.

ಜೀತ ಪದ್ಧತಿ ನಿರ್ಮೂಲನೆ, ಮಲ ಹೊರುವ ಪದ್ಧತಿ ನಿಷೇಧ ಹಾಗೂ ವಸತಿ ರಹಿತರಿಗೆ ಮನೆ ನಿರ್ಮಿಸಿ ಕೊಡುವಂತಹ ಹಲವು ಜನಪರ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದು, ಅರಸು ಅವರ ದೂರದೃಷ್ಟಿ ಮತ್ತು ಸಾಮಾಜಿಕ ಕಾಳಜಿಗೆ ಸಾಕ್ಷಿಯಾಗಿದೆ. ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣ ಮಾಡಿದ ಶ್ರೇಯಸ್ಸು ಕೂಡ ದೇವರಾಜ ಅರಸು ಅವರಿಗೆ ಸಲ್ಲುತ್ತದೆ ಎಂದರು.

ಅರಸು ಅವರ ತತ್ವ, ಸಿದ್ಧಾಂತ ಹಾಗೂ ಸಾಮಾಜಿಕ ನ್ಯಾಯದ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿವೆ. ಸಮಾಜದ ಪ್ರತಿಯೊಬ್ಬರಿಗೂ ಸಮಾನ ಅವಕಾಶ ದೊರಕುವಂತೆ ಶ್ರಮಿಸುವುದೇ ದೇವರಾಜ ಅರಸು ಅವರಿಗೆ ಸಲ್ಲಿಸುವ ನಿಜವಾದ ಗೌರವವಾಗಿದೆ ಹೇಳಿದರು.

ಕಾರ್ಯಕ್ರಮದಲ್ಲಿ ಹಾಸನದ ಸಂತ ಫಿಲೋಮಿನಾ ಪದವಿ ಕಾಲೇಜಿನ ಉಪನ್ಯಾಸಕ ಯೋಗೇಶ್ ಅವರು ದೇವರಾಜ ಅರಸು ಅವರ ಜೀವನ, ಆಡಳಿತ ಹಾಗೂ ಸಾಮಾಜಿಕ ಸುಧಾರಣೆಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕೆಡಿಪಿ ಸದಸ್ಯೆ ಸೌಮ್ಯ ಆನಂದ್, ತಾಲ್ಲೂಕು ಕೆಡಿಪಿ ಸದಸ್ಯೆ ಜ್ಯೋತಿ, ಪೊಲೀಸ್ ಇನ್ಸ್‌ಪೆಕ್ಟರ್ ಎಸ್.ಎಸ್.ಪಾಟೀಲ್, ಚೆನ್ನಕೇಶವ ದೇವಸ್ಥಾನದ ಆಡಳಿತಾಧಿಕಾರಿ ಯೋಗೇಶ್, ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ಭಾಗ್ಯಮ್ಮ, ಬಿಆರ್‌ಸಿ ಶಿವ ಮರಿಯಪ್ಪ, ನಿವೃತ್ತ ಉಪ ತಹಸೀಲ್ದಾರ್ ಅಣ್ಣೇಗೌಡ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಮುದುಕಪ್ಪ, ಬಾಯವಾಡಿ, ವಿವಿಧ ಇಲಾಖೆಗಳ ಅಧಿಕಾರಿಗಳು, ಶಾಲಾ ಮಕ್ಕಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಉನ್ನತ ಮಟ್ಟದ ವಿಚಾರಣಾ ಸಮಿತಿ ರಚಿಸಿದ ಸುಪ್ರೀಂ

• ಪ್ರಜೋದಯ ವರದಿ

**ನವದೆಹಲಿ:** ಜುಲೈ 20ರಂದು ನಡೆದ ನೀಟ್ ವಿದ್ಯಾರ್ಥಿಗಳ ಪ್ರತಿಭಟನೆಯ ಸಂದರ್ಭದಲ್ಲಿ ಪೊಲೀಸರು ಅತಿಯಾದ ಬಲಪ್ರಯೋಗ ನಡೆಸಿದ್ದಾರೆ ಎಂಬ ಆರೋಪ ಕೇಳಿ ಬಂದಿದ್ದು, ಆ ಪ್ರತಿಭಟನೆಯ ವೇಳೆ ಉಂಟಾದ ಹಿಂಸಾಚಾರದ ಕುರಿತು ಸ್ವತಂತ್ರ ತನಿಖೆ ನಡೆಸಲು ಸುಪ್ರೀಂ ಕೋರ್ಟ್ 5 ಸದಸ್ಯರ ಉನ್ನತ ಮಟ್ಟದ ವಿಚಾರಣಾ ಸಮಿತಿಯನ್ನು ರಚಿಸಿದೆ.

ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯ ಮೂರ್ತಿ ಆರ್. ಸುಭಾಷ್ ರೆಡ್ಡಿ ಅವರ ನೇತೃತ್ವದ ಈ ಸಮಿತಿಯಲ್ಲಿ ನಿವೃತ್ತ ನ್ಯಾಯಾಧೀಶರು ಹಾಗೂ ಮಾಜಿ ಉನ್ನತ ಪೊಲೀಸ್ ಅಧಿಕಾರಿಗಳ ತಂಡವಿದೆ.

ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿ ಜೋಯ್‌ಮಲ್ಯ ಬಾಗ್ಚಿ ಮತ್ತು ನ್ಯಾಯಮೂರ್ತಿ ವಿ.ಮೋಹನಾ ಅವರನ್ನೊಳಗೊಂಡ ಪೀಠವು ಈ ಆದೇಶ ನೀಡಿದ್ದು, ಪ್ರತಿಭಟನಾಕಾರರ ಮೇಲಿನ ಬಲಪ್ರಯೋಗ ಹಾಗೂ ಪೊಲೀಸರ ಮೇಲಿನ ದಾಳಿ ಈ ಎರಡೂ ಕಡೆಯ ಆರೋಪಗಳ ಕುರಿತು ನಿಷ್ಪಕ್ಷಪಾತ ತನಿಖೆಯ ಅಗತ್ಯವಿದೆ ಎಂದು ನ್ಯಾಯಾಲಯ ತಿಳಿಸಿದೆ.

# ಬದುಕಿನಲ್ಲಿ ಗಣ್ಯರ ಆದರ್ಶ ಅಳವಡಿಸಿಕೊಳ್ಳಬೇಕು

## ತಹಸೀಲ್ದಾರ್ ಎಚ್. ಮಲ್ಲಿಕಾರ್ಜುನ ಅಭಿಮತ

• ಪ್ರಜೋದಯ ವರದಿ

**ಆಲೂರು:** ಸಮಾಜದ ಅಭಿವೃದ್ಧಿಗೆ ಶ್ರಮಿಸಿ ಅಮರವಾಗಿರುವ ಗಣ್ಯರ ಆದರ್ಶಗಳನ್ನು ತಿಳಿದು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಹಸೀಲ್ದಾರ್ ಎಚ್. ಮಲ್ಲಿಕಾರ್ಜುನ ಅಭಿಪ್ರಾಯಪಟ್ಟರು.



ಪಟ್ಟಣದ ಮಿನಿ ವಿದಾನಸೌಧ ಸಭಾಂಗಣದಲ್ಲಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಧಿಕಾರಿಗಳ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಡಿ.ದೇವರಾಜ ಅರಸು ಅವರ 11 ನೇ ಜನ್ಮ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಡಿ.ದೇವರಾಜ ಅರಸು ಅವರು ಸಮಾಜದಲ್ಲಿ ಸಮಾನತೆ ಇರಬೇಕು ಎಂಬ ದೂರದೃಷ್ಟಿಯುಳ್ಳವರಾಗಿದ್ದು, ತಮ್ಮ ಆಡಳಿತ ಅಧಿಕಾರ ಅವಧಿಯಲ್ಲಿ ಅನೇಕ ನಿಯಮಗಳನ್ನು ರಚಿಸಿ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಆಶಾಕಿರಣವಾದರು ಎಂದರು.

ಶಿಕ್ಷಕ ಕೊಟ್ರೇಶ್ ಎಸ್.ಉಪ್ಪಾರ್ ಅವರು ಮಾತನಾಡಿ, ರಾಜ್ಯದಲ್ಲಿ ಹಿಂದುಳಿದವರ ಕಲ್ಯಾಣಕ್ಕಾಗಿ ರೂಪಿಸಿರುವ ಬಹುತೇಕ ಯೋಜನೆ ಗಳನ್ನು ಎಲ್.ಜಿ.ಹಾವನೂರು ಆಯೋಗದ ವರದಿಯಂತೆ ರಾಜಕೀಯ, ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕವಾಗಿ ಡಿ. ದೇವರಾಜ ಅರಸು ರವರು ತಮ್ಮ ಅಧಿಕಾರದ ಅವಧಿಯಲ್ಲಿ ಮೀಸಲಾತಿ ಅಳವಡಿಸುವ ಮೂಲಕ ಜಾರಿಗೆ ತಂದರು.

ಇಂದಿರಾ ಗಾಂಧಿಯವರು ಪ್ರಧಾನ ಮಂತ್ರಿಯಾಗಲು ಮರುಜೀವ ತಂದುಕೊಟ್ಟವರು ಅರಸರು. ಅನೇಕ ಸಾಹಿತಿಗಳ ಹೋರಾಟದಿಂದ ಮೈಸೂರು ರಾಜ್ಯ ಎಂಬ ಹೆಸರಿನಲ್ಲಿದ್ದ ರಾಜ್ಯವನ್ನು ನ. 1. 1973 ರಂದು ಕರ್ನಾಟಕ ಎಂದು ನಾಮಕರಣ ಮಾಡಿದರು. ವಿಶೇಷವಾಗಿ ಮಲ ಹೊರುವ ಪದ್ಧತಿ ನಿಷೇಧ, ಭೂಮಿ ಉಳುವವನೆ ಒಡೆಯ, ಜೀತ ಪದ್ಧತಿ ವಿಮೋಚನೆ, ಗರೀಬಿ ಹಠಾವೊ, ಭಾಗ್ಯಜ್ಯೋತಿ, ಅಸ್ಪೃಶ್ಯತೆ ನಿವಾರಣೆ, ಶಾಲೆ ಮಕ್ಕಳಿಗೆ ಮದ್ಯಾಹ್ನ ಬಿಸಿಊಟ, ದೇವಸ್ಥಾನಗಳಲ್ಲಿ ದಲಿತ ವರ್ಗದವರನ್ನು ಪೂಜಾರಿಯನ್ನಾಗಿ ನೇಮಿಸುವ ಕುರಿತಂತೆ ಅನೇಕ ನಿಯಮಗಳು ಬಹಳ ಮಹತ್ವ ಪಡೆದವು ಎಂದರು.

ಸಮಾರಂಭದಲ್ಲಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ್, ಹಿಂದುಳಿದ ವರ್ಗಗಳ ಇಲಾಖೆ ವಿಸ್ತರಣಾಧಿಕಾರಿ ನಿರ್ಮಲ, ಕಲ್ಯಾಣಾಧಿಕಾರಿ, ಚಂದ್ರಶೇಖರ್, ವಾರ್ಡನ್ ಆನಂದ್, ಚೇತನ್, ನರೇಗ ಯೋಜನೆ ಸಹಾಯಕ ನಿರ್ದೇಶಕ ಕೇಶವಮೂರ್ತಿ ಉಪಸ್ಥಿತರಿದ್ದರು. ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿನಿಯರು ಹಾಗೂ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಸನ್ಮಾನಿಸಲಾಯಿತು.

# ನಾಳೆ 300 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

• ಪ್ರಜೋದಯ ವರದಿ

**ಸಕಲೇಶಪುರ:** ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಸರ್ಕಾರಿ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನಿವೃತ್ತ ರಾಜ್ಯ ಸರ್ಕಾರಿ ನೌಕರರಿಗೆ ಸನ್ಮಾನ ಕಾರ್ಯಕ್ರಮ ಆ.22ರಂದು ಬೆಳಿಗ್ಗೆ 10.30ಕ್ಕೆ ನಗರದ ಡಾ. ಬಿ. ಆರ್.ಅಂಬೇಡ್ಕರ್ ಭವನದಲ್ಲಿ ನಡೆಯಲಿದೆ ಎಂದು ಸಂಘದ ನಿರ್ದೇಶಕ ಪೃಥ್ವಿ ತಿಳಿಸಿದರು.




ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, 2024-25 ಹಾಗೂ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ ಹಾಗೂ ಪದವಿ ಪರೀಕ್ಷೆಯಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕ ಗಳಿಸಿದ 260 ವಿದ್ಯಾರ್ಥಿಗಳು ಈಗಾಗಲೇ ಪ್ರತಿಭಾ ಪುರಸ್ಕಾರಕ್ಕೆ ನೋಂದಣಿ ಮಾಡಿಕೊಂಡಿದ್ದಾರೆ. 15 ನಿವೃತ್ತ ಸರ್ಕಾರಿ ನೌಕರರು ಸನ್ಮಾನಕ್ಕೆ ನೋಂದಾಯಿಸಿಕೊಂಡಿದ್ದು, ಅರ್ಹರಿಗೆ ಆ.20ರ ಸಂಜೆವರೆಗೆ ನೋಂದಣಿಗೆ ಅವಕಾಶವಿದೆ ಎಂದರು.

ಕಾರ್ಯಕ್ರಮವನ್ನು ಶಾಸಕ ಸಿಮೆಂಟ್ ಮಂಜು ಉದ್ಘಾಟಿಸಲಿದ್ದು, ಹಾಸನ ಲೋಕಸಭಾ ಸದಸ್ಯ ಶ್ರೇಯಸ್ ಪಟೇಲ್, ಮಾಜಿ ಸಚಿವ ಎಚ್.ಕೆ. ಕುಮಾರಸ್ವಾಮಿ ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ. ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಮತ್ತು ಮೈಸೂರಿನ ಅಕ್ಕಾ ಅಕಾಡೆಮಿ ಸಂಸ್ಥಾಪಕ ಡಾ. ಶಿವಕುಮಾರ್ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲಿದ್ದಾರೆ ಎಂದರು.

ತಾಲೂಕು ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಹಾಗೂ ಸಂಘದ ಖಜಾಂಚಿ ಶಾಂತರಾಜ್ ಅವರು ಮಾತನಾಡಿ, ಡಾ.ಬಿ.ಆರ್. ಅಂಬೇಡ್ಕರ್ ರಾಜ್ಯ ಪ್ರಶಸ್ತಿ ಪುರಸ್ಕೃತ ಹೆತ್ತೂರು ಅಣ್ಣಯ್ಯ ಅವರನ್ನು ಸನ್ಮಾನಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಸುಮಾರು 1,000 ಮಂದಿ ವಿದ್ಯಾರ್ಥಿಗಳು, ಪೋಷಕರು, ಸರ್ಕಾರಿ ನೌಕರರು ಹಾಗೂ ಸಾರ್ವಜನಿಕರು ಭಾಗವಹಿಸುವ ನಿರೀಕ್ಷೆಯಿದ್ದು, ಮಧ್ಯಾಹ್ನ ಊಟದ ವ್ಯವಸ್ಥೆ ಮಾಡಲಾಗಿದೆ. ಎಲ್ಲ ಸರ್ಕಾರಿ ನೌಕರರು, ವಿದ್ಯಾರ್ಥಿಗಳು, ಪೋಷಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಸರ್ಕಾರಿ ನೌಕರರ ಕ್ಷೇಮಾಭಿವೃದ್ಧಿ ಸಂಘದ ತಾಲೂಕು ಅಧ್ಯಕ್ಷ ಮಹೇಶ್, ಸಂಘದ ಪದಾಧಿಕಾರಿಗಳಾದ ಡಿ.ಪಿ.ರಮೇಶ್, ಕೆಂಚಯ್ಯ ಹಾಗೂ ನಿಂಗಯ್ಯ ಅವರು ಉಪಸ್ಥಿತರಿದ್ದರು.

# ಅಂಗನವಾಡಿ ಹುದ್ದೆಗೆ ಅರ್ಜಿ ಆಹ್ವಾನ

• ಪ್ರಜೋದಯ ವರದಿ

**ಹಾಸನ:** ಚನ್ನರಾಯಪಟ್ಟಣ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಮಿಷನ್ ಶಕ್ತಿ ಯೋಜನೆಯ ಸಾಮರ್ಥ್ಯ ಉಪ ಯೋಜನೆಯ ಪಾಲನಾ ಉಪ ಯೋಜನೆಯಡಿಯಲ್ಲಿ ಪ್ರಾರಂಭಗೊಂಡಿರುವ 8 ಅಂಗನವಾಡಿ ಕಂ.ಕ್ರೆ‌ನ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಹುದ್ದೆಗಳಿಗೆ ಆಯ್ಕೆ ಮಾಡಲು ಸ್ಥಳೀಯ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ ಎಂದು ಚನ್ನರಾಯಪಟ್ಟಣ ಶಿಶು ಅಭಿವೃದ್ಧಿ ಯೋಜನಾಧಿಕಾರಗಳು ತಿಳಿಸಿದ್ದಾರೆ.

ಸೆ.19 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ, ಅರ್ಜಿ ನಮೂನೆಯನ್ನು ಚನ್ನರಾಯಪಟ್ಟಣ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಪಡೆದು ಅವಶ್ಯಕ ದಾಖಲಾತಿಗಳೊಂದಿಗೆ ಮುಚ್ಚಿದ ಲಕೋಟೆಯಲ್ಲಿ ಕಚೇರಿಗೆ ಸಲ್ಲಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತೇಜಸ್ವಿ ವೃತ್ತ ಅಗಲೀಕರಣಕ್ಕೆ ಅಳತೆ ಕಾರ್ಯ ಆರಂಭ

## ಪದೇ ಪದೇ ಅಪಘಾತ ಹಿನ್ನಲೆ: ಡಿ.ಸಿ. ಸೂಚನೆ ಮೇರೆಗೆ ಕೆಲಸ ಶುರು

• ಪ್ರಜೋದಯ ವರದಿ

**ಸಕಲೇಶಪುರ:** ಪಟ್ಟಣದ ತೇಜಸ್ವಿ ವೃತ್ತದಲ್ಲಿ ಹೆಚ್ಚುತ್ತಿರುವ ಅಪಘಾತ ಹಾಗೂ ಸಂಚಾರ ದಟ್ಟಣೆ ನಿಯಂತ್ರಿಸುವ ಉದ್ದೇಶದಿಂದ ವೃತ್ತದ ಅಗಲೀಕರಣಕ್ಕೆ ಅಳತೆ ಕಾರ್ಯ ಆರಂಭಿಸಲಾಗಿದೆ ಎಂದು ಯೋಜನಾ ಪ್ರಾಧಿಕಾರದ ಅಧ್ಯಕ್ಷ ಸಯ್ಯದ್ ಮುಫೀಜ್ ಹೇಳಿದರು.



ಸುದ್ದಿಗಾರರೊಂದಿಗೆ ಮಾತನಾಡಿ, ತೇಜಸ್ವಿ ವೃತ್ತದ ಬಳಿ ಪದೇ ಪದೇ ಅಪಘಾತಗಳು ಸಂಭವಿಸುತ್ತಿದ್ದು, ಸಂಚಾರ ಸಮಸ್ಯೆಯೂ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಸುಮಾರು 15 ದಿನಗಳ ಹಿಂದೆ ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ವೃತ್ತವನ್ನು ಅಗಲೀಕರಣಗೊಳಿಸುವುದರ ಜತೆಗೆ ವೃತ್ತದಿಂದ 200 ಮೀಟರ್ ವ್ಯಾಪ್ತಿಯಲ್ಲಿ ಹಾಗೂ ಅರೇಹಳ್ಳಿ ರಸ್ತೆ ಭಾಗದಲ್ಲಿಯೂ ಅಗತ್ಯವಿರುವಷ್ಟು ರಸ್ತೆ ಅಗಲೀಕರಣ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದರು. ಈ ಸೂಚನೆಯಂತೆ ಗುರುವಾರ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಅಳತೆ ಕಾರ್ಯ ಕೈಗೊಂಡಿದ್ದಾರೆ ಎಂದು ತಿಳಿಸಿದರು.

ವೃತ್ತದ ಅಗಲೀಕರಣ ಹಾಗೂ ತೆರವು ಕಾರ್ಯಕ್ಕೆ ಅಂಗಡಿ ಮಾಲೀಕರು ಹಾಗೂ ಸಾರ್ವಜನಿಕರು ಸಹಕರಿಸಬೇಕು. ಈ ಕುರಿತು ಜಿಲ್ಲಾಧಿಕಾರಿಗಳನ್ನೂ ಸ್ಥಳಕ್ಕೆ ಕರೆಸಿ, ಅವರ ಮಾರ್ಗದರ್ಶನದಂತೆ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕರ ಸುರಕ್ಷತೆ ಹಾಗೂ ಸುಗಮ ಸಂಚಾರದ ದೃಷ್ಟಿಯಿಂದ ಎಲ್ಲರೂ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಪುರಸಭಾ ಮುಖ್ಯಾಧಿಕಾರಿ ಮಹೇಶ್ವರಪ್ಪ ಮಾತನಾಡಿ, ಜಿಲ್ಲಾಧಿಕಾರಿಗಳು ಇತ್ತೀಚೆಗೆ ಸಕಲೇಶಪುರ ಪಟ್ಟಣಕ್ಕೆ ಭೇಟಿ ನೀಡಿ ಅಭಿವೃದ್ಧಿ ಹಾಗೂ ಸಾರ್ವಜನಿಕರ ಸಮಸ್ಯೆಗಳ ಕುರಿತು ಪರಿಶೀಲನೆ ನಡೆಸಿದ್ದರು. ಈ ವೇಳೆ ತೇಜಸ್ವಿ ವೃತ್ತ ಕಿರಿದಾಗಿರುವುದರಿಂದ ಸಂಚಾರಕ್ಕೆ ತೊಂದರೆಯಾಗುತ್ತಿರುವುದನ್ನು ಗಮನಿಸಿ, ವೃತ್ತವನ್ನು ತುರ್ತಾಗಿ ಅಗಲೀಕರಣಗೊಳಿಸುವಂತೆ ಸೂಚಿಸಿದ್ದರು ಎಂದರು.

ಜಿಲ್ಲಾಧಿಕಾರಿಗಳ ಸೂಚನೆಯಂತೆ ಸಂಬಂಧಪಟ್ಟ ಅಧಿಕಾರಿಗಳು, ಲೋಕೋಪಯೋಗಿ ಇಲಾಖೆ, ಪಟ್ಟಣ ಯೋಜನಾ ವಿಭಾಗ ಹಾಗೂ ಯೋಜನಾ ಪ್ರಾಧಿಕಾರದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ವೃತ್ತದ ಅಗಲೀಕರಣಕ್ಕೆ ಸಂಬಂಧಿಸಿದಂತೆ ಅಳತೆ ಕಾರ್ಯ ಕೈಗೊಂಡಿದ್ದಾರೆ. ಮುಂದಿನ ದಿನಗಳಲ್ಲಿ ಅಗಲೀಕರಣ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಯೋಜನಾ ಪ್ರಾಧಿಕಾರದ ಸದಸ್ಯರಾದ ಚರಣ್, ಬೈಕೆರೆ ದೇವರಾಜ್, ಸಹಾಯಕ ನಿರ್ದೇಶಕ ರಮೇಶ್, ಲೋಕೋಪಯೋಗಿ ಇಲಾಖೆಯ ಸಹಾಯಕ ಎಂಜಿನಿಯರ್ ರಜಾಕ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

# ನೊಂದವರಿಗೆ ರಾಜಕೀಯ ಶಕ್ತಿ ನೀಡಿದ ಮಹನೀಯ ಅರಸು



• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಶೋಷಿತ ಸಮುದಾಯಗಳ ಮುನಿಯಾಗಿ ನೊಂದವರಿಗೆ ಹಾಗೂ ಸಮಾಜದ ಕಟ್ಟ ಕಡೆಯ ವ್ಯಕ್ತಿಗಳಿಗೆ ರಾಜಕೀಯ ಶಕ್ತಿ ನೀಡಿದ ಧೀಮಂತ ನಾಯಕ ಡಿ.ದೇವರಾಜ ಅರಸು ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಅವರು ತಿಳಿಸಿದರು.

ಪಟ್ಟಣದ ಹಿಂದುಳಿದ ವರ್ಗಗಳ ಇಲಾಖೆಯಲ್ಲಿ ನಡೆದ ಡಿ.ದೇವರಾಜ ಅರಸು ಅವರ ಜನ್ಮ ದಿನೋತ್ಸವದ ಕಾರ್ಯಕ್ರಮದಲ್ಲಿ ಅರಸು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿ, ಅರಸು ಈ ನಾಡು ಕಂಡ ಮಹಾನ್ ವ್ಯಕ್ತಿ ಉಳುವವನೇ ಭೂಮಿಯ ಒಡೆಯ ಎಂಬ ಕಾನೂನನ್ನ ರಾಜ್ಯದಲ್ಲಿ ತರುವ ಮೂಲಕ ಬಡವರ ಶೋಷಿತರ ದುರ್ಬಲರ ಪರವಾಗಿ ನಿಂತ ನಾಯಕರಾಗಿ ಎಲ್ಲಾ ವರ್ಗದವರಿಗೂ ದುನಿಯಾಗಿದ್ದವರು ಎಂದರು.

ಅರಸು ಅಂತಹ ವ್ಯಕ್ತಿ ರಾಜ್ಯದಲ್ಲಿ ಮತ್ತೊಮ್ಮೆ ಹುಟ್ಟಲು ಸಾಧ್ಯವಿಲ್ಲ ಅಂತಹ ಮಹಾನ್ ಪುರುಷರ ತತ್ವ ಆದರ್ಶವನ್ನು ಬೆಳೆಸಿಕೊಳ್ಳುವುದು ಎಲ್ಲರ ಕರ್ತವ್ಯವಾಗಿದೆ. ರಾಜಕೀಯವಾಗಿ ದೇವರಾಜ ಅರಸುರವರು ಹೆಚ್ಚು ಕಾಲ ಮುಖ್ಯಮಂತ್ರಿಗಳಾಗಿ ಸೇವೆ ಸಲ್ಲಿಸಿದ್ದಾರೆ. ಅವರ ಕಾಲದಲ್ಲಿ ವಿದ್ಯಾರ್ಥಿ ನಿಲಯಗಳು, ಶಾಲಾ ಕಾಲೇಜುಗಳು ಹೆಚ್ಚು ನಿರ್ಮಾಣವಾದವು. ಬ್ಯಾಂಕ್‌ಗಳ ರಾಷ್ಟ್ರೀಕರಣ ಸೇರಿದಂತೆ ಅನೇಕ ಜನಪರ ಶೋಷಿತರ ಪರವಾಗಿ ಕೆಲಸ ಮಾಡಿದಂತಹ ನಾಯಕರಾಗಿದ್ದರು ಎಂದರು

ಕಾರ್ಯಕ್ರಮದಲ್ಲಿ ಬಿಸಿಎಂ ಅಧಿಕಾರಿ ಚವ್ಹಾಣ್ ಹಾಗೂ ಅಧಿಕಾರಿಗಳು ಹಾಜರಿದ್ದರು.

# ನೋಂದಾಯಿತ ಕುಟುಂಬಕ್ಕೆ 125 ದಿವಸ ಉದ್ಯೋಗ

## ವಿಬಿಜಿ ರಾಮ್ ಜಿ ಯೋಜನೆಯಡಿ ಕೆಲಸ | ಕೂಲಿ ಮೊತ್ತ ದಿನಕ್ಕೆ 382 ರೂ.

• ಪ್ರಜೋದಯ ವರದಿ

**ಹಾಸನ:** ವಿಬಿಜಿ ರಾಮ್ ಜಿ ಯೋಜನೆಯಡಿ ಒಂದು ನೋಂದಾಯಿತ ಕುಟುಂಬಕ್ಕೆ ವರ್ಷದಲ್ಲಿ 125 ದಿವಸ ಉದ್ಯೋಗ, ಒಂದು ದಿನಕ್ಕೆ ರೂ. 382 ಕೂಲಿ ಮೊತ್ತ ನೀಡಲಾಗುತ್ತಿದೆ ಎಂದು ಬಸವಘಟ್ಟಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ವೇತಾ ಅವರು ತಿಳಿಸಿದ್ದಾರೆ.



ಹಾಸನ ತಾಲ್ಲೂಕು ಬಸವಾಘಟ್ಟ ಗ್ರಾಮ ಪಂಚಾಯಿತಿಯಲ್ಲಿ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಅಂಡ್ ಆಜೀವಿಕ ಮಿಷನ್ (ಗ್ರಾಮೀಣ) ಯೋಜನೆಯಡಿ ಜಾಬ್ ಕಾರ್ಡ್ ಮೇಳ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈ ಕಾರ್ಯಕ್ರಮದಡಿ ಮನೆ ಮನೆ ಬೇಟಿ ಮತ್ತು ಸಾರ್ವಜನಿಕ ಸ್ಥಳಗಳಾದ ಹಾಲಿನ ಡೈರಿ, ಅರಳಿಕಟ್ಟೆ, ಟೀ ಅಂಗಡಿ, ರೇಷನ್ ಅಂಗಡಿ ಮುಂತಾದ ಸ್ಥಳಗಳಲ್ಲಿ ಜಾಬ್ ಕಾರ್ಡ್ ಮೇಳ ಬ್ಯಾನರ್ ಹಿಡಿದು ವಿಬಿಜಿ ರಾಮ್ ಜಿ ಮಾಹಿತಿ ಇರುವ ಕರಪತ್ರ ನೀಡುವ ಮೂಲಕ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಅಂಡ್ ಆಜೀವಿಕ ಮಿಷನ್ ಯೋಜನೆ ಬಗ್ಗೆ ಸಂಪೂರ್ಣ ಮಾಹಿತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕಸದ ಸ್ವಚ್ಛ ವಾಹಿನಿ, ಡಂಗೂರ ಮೂಲಕ ಪ್ರಚಾರ ಮಾಡಿ ಜಾಗೃತಿ ಅಭಿಯಾನ ಕೈಗೊಂಡು ಸಾರ್ವಜನಿಕರಿಗೆ ಮಾಹಿತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಜಾಬ್ ಕಾರ್ಡ್ ಹೊಂದಿರುವ ಎಲ್ಲಾ ಕುಟುಂಬಗಳು ವೈಯಕ್ತಿಕವಾಗಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಾನುವಾರು ಕೊಟ್ಟಿಗೆ, ಕೋಳಿ ಶೆಡ್, ಹಂದಿ ಶೆಡ್, ಕುರು ಆಡು ಶೆಡ್ ನಿರ್ಮಾಣ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ತೋಟಗಾರಿಕೆ ಇಲಾಖೆಯಡಿ ತೆಂಗು, ಸೀತಾಫಲ, ಹಲಸು, ಡ್ರಾಗನ್ ಫ್ರೂಟ್, ಅಡಿಕೆ, ದಾಳಿಂಬೆ, ಸಪೋಟ ಬೆಳೆಗಳನ್ನು ಬೆಳೆಯಲು ಆರ್ಥಿಕ ಸಹಾಯಧನ ನೀಡಲಾಗುತ್ತದೆ ಹಾಗೂ ಕೃಷಿ ಇಲಾಖೆಯಡಿ ಕೃಷಿ ಹೊಂಡ, ಗೊಬ್ಬರದ ಗುಂಡಿ, ರೈತರ ಮರು ಪೂರ್ಣ ಘಟಕ ನಿರ್ಮಿಸಲು ಮತ್ತು ರೇಷ್ಮೆ ಇಲಾಖೆಯಡಿ ಕರಿಬೇವು, ಹಿಪ್ಪು ನೇರಳೆ, ಮುಂತಾದ ಕಾಮಗಾರಿ ನಿರ್ಮಾಣ ಮಾಡಿಕೊಳ್ಳಲು ಆರ್ಥಿಕ ನೆರವು ನೀಡಲಾಗುವುದು ಎಂದು ತಿಳಿಸಿದರು.

ಒಂದು ನೋಂದಾಯಿತ ಕುಟುಂಬವು ಜೀವಿತಾವಧಿಯಲ್ಲಿ 5 ಲಕ್ಷ ರೂ. ವರೆಗೆ ಆರ್ಥಿಕ ನೆರವು ಪಡೆಯಬಹುದು, ಈಗಾಗಲೇ ಕ್ರಿಯಾ ಯೋಜನೆಯಲ್ಲಿ ಅನುಮೋದನೆಯಾಗಿರುವ ವೈಯಕ್ತಿಕ ಕಾಮಗಾರಿಗಳನ್ನು ನಿರ್ಮಾಣ ಮಾಡಿಕೊಳ್ಳಲು ಬಸವಘಟ್ಟಾ ಗ್ರಾಮ ಪಂಚಾಯಿತಿಯಿಂದ ಸಾರ್ವಜನಿಕರಿಗೆ ಕಾರ್ಯಾದೇಶ ಪ್ರತಿಯನ್ನು ನೀಡಲಾಗುತ್ತಿದೆ ಎಂದು ಅವರು ತಿಳಿಸಿದರು.

# ವಿವಿಧ ಬಗೆಯ ಹಣ್ಣಿನ ಸಸಿ ನೆಟ್ಟು ಸಂಭ್ರಮ



• ಪ್ರಜೋದಯ ವರದಿ

**ಹಾಸನ:** 80ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ವತಿಯಿಂದ ಹೊಳೆನರಸೀಪುರ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿವಿಧ ಬಗೆಯ ಹಣ್ಣಿನ ಸಸಿಗಳನ್ನು ನೆಡಲಾಯಿತು.

ಈಚೆಗೆ ನಡೆದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಹೊಳೆನರಸೀಪುರ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ರೋಟರಿ ರಾಯಲ್ ಕ್ಲಬ್‌ನ ಕಾರ್ಯದರ್ಶಿ ಡಾ.ಎಚ್. ಎನ್.ಹರೀಶ್ ಅವರು ಕಾಲೇಜಿನ ಪ್ರಾಂಶುಪಾಲ ಜಿ.ಜಿ. ರಾಜಶೇಖರ್ ಸಹಕಾರದೊಂದಿಗೆ ವಿವಿಧ ಬಗೆಯ ಹಣ್ಣಿನ ಸಸಿಗಳನ್ನು ನೆಡುವ ಮೂಲಕ ವಿಶೇಷವಾಗಿ ಸ್ವಾತಂತ್ರ್ಯ ದಿನಾಚರಣೆ ಮಾಡಲಾಯಿತು.

ಇದೇ ವೇಳೆ ದೆಹಲಿಯಲ್ಲಿ ಕಳೆದ ವರ್ಷ ನಡೆದಿದ್ದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕರ್ನಾಟಕ/ಗೋವಾ ಎನ್.ಸಿ.ಸಿ. ಬೆಟಾಲಿಯನ್‌ನಿಂದ ಆಯ್ಕೆಯಾಗಿ ಪ್ರಧಾನ ಮಂತ್ರಿಗಳಿಂದ ಧ್ವಜ ಸ್ವೀಕಾರ ಮಾಡಿದ ಹೊಳೆನರಸೀಪುರ ಕಾಲೇಜಿನ ವಿದ್ಯಾರ್ಥಿ ವೈ.ಪಿ.ಅಭಿಷೇಕ್ ಅವರನ್ನು ರಾಯಲ್ ಕ್ಲಬ್ ವತಿಯಿಂದ ಸನ್ಮಾನಿಸಲಾಯಿತು.

# ಧನಸಹಾಯಕ್ಕೆ ಕಾಲಾವಧಿ ವಿಸ್ತರಣೆ

• ಪ್ರಜೋದಯ ವರದಿ

ಹಾಸನ: ಕಲಾವಿದರಿಗೆ ನೀಡುವ ಧನ ಸಹಾಯಕ್ಕೆ ಕಾಲಾವಧಿ ವಿಸ್ತರಣೆ ಮಾಡಲಾಗಿದ್ದು, ಸದುಪಯೋಗ ಪಡಿಸಿಕೊಳ್ಳುವಂತೆ ತಿಳಿಸಲಾಗಿದೆ.

ರಾಜ್ಯಾದ್ಯಂತ ಹಾಗೂ ಹೊರ ರಾಜ್ಯಗಳಲ್ಲಿ ಕ್ರಿಯಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳ ಮೂಲಕ ನಾಡಿನ ಭಾಷಾ ಸಂವರ್ಧನೆ, ಕಲೆ, ಸಾಹಿತ್ಯ ಸಂಗೀತ, ಜಾನಪದ, ನೃತ್ಯ ಕಲಾಪ್ರಕಾರಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಕಾರ್ಯ ನಿರ್ವಹಿಸುತ್ತಿರುವ ನೋಂದಾಯಿತ ಸಂಘ-ಸಂಸ್ಥೆಗಳಿಗೆ ಧನಸಹಾಯ ನೀಡಲು ಹಾಗೂ ಕಲಾವಿದರಿಗೆ ವಾದ್ಯ ಪರಿಕರ ಮತ್ತು ವೇಷಭೂಷಣಗಳ ಖರೀದಿಗೆ ಸಹಾಯಧನ ಹಾಗೂ ಚಿತ್ರಕಲೆ/ಶಿಲ್ಪ ಕಲಾಕೃತಿಗಳ ಪ್ರದರ್ಶನಕ್ಕೆ ಸಹಾಯ ಧನ ನೀಡಲು 2026-27ನೇ ಸಾಲಿನ ಸಾಮಾನ್ಯ/ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಉಪಯೋಜನೆಯಡಿ ಸೇವಾಸಿಂಧು Sevasindhu.karnataka.gov.in ಮುಖಾಂತರ ಸದರಿ ಯೋಜನೆಗಳಿಗೆ ಅರ್ಜಿ ಸಲ್ಲಿಕೆಯ ಕಾಲಾವಧಿಯನ್ನು 15 ದಿನಗಳು ವಿಸ್ತರಿಸಲಾಗಿದೆ.

ಸೆ.4 ರವರೆಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ ಎಂದು ಬೆಂಗಳೂರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ದೇಶಕರು ತಿಳಿಸಿದ್ದಾರೆ.

## ಖಾಸಗಿ ವ್ಯಕ್ತಿಯಿಂದ ಸರ್ಕಾರಿ ಜಮೀನಿನ ಮೇಲೆ ಹಕ್ಕು ಸಾಧಿಸುವ ಪ್ರಯತ್ನ: ಆರೋಪ

# ಸರ್ಕಾರಿ ಜಮೀನಿನಲ್ಲಿ ಬಡವರಿಗೆ ನಿವೇಶನ ಹಂಚಿಕೆ ಮಾಡಲಿ

• ಪ್ರಜೋದಯ ವರದಿ

**ಬೇಲೂರು:** ಬಿಕ್ಕೋಡು- ಚೋಕನಹಳ್ಳಿ ಗ್ರಾಮದ ಗಡಿಭಾಗದಲ್ಲಿರುವ ಸರ್ವೆ ನಂಬರ್ 18ರ ಸರ್ಕಾರಿ ಜಮೀನನ್ನು ಖಾಸಗಿ ವ್ಯಕ್ತಿಗಳು ಅತಿಕ್ರಮಿಸಲು ಯತ್ನಿಸುತ್ತಿರುವುದನ್ನು ಕೂಡಲೇ ತಡೆದು, ಹಲವು ವರ್ಷಗಳಿಂದ ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿರುವ ಬಡ ನಿವೇಶನ ರಹಿತರಿಗೆ ಜಮೀನನ್ನು ಹಂಚಿಕೆ ಮಾಡಬೇಕು ಎಂದು ಸಾಮಾಜಿಕ ಹೋರಾಟಗಾರ ಆಸೀಫ್ ಆಗ್ರಹಿಸಿದರು.



ಬಿಕ್ಕೋಡು ಮತ್ತು ಚೋಕನಹಳ್ಳಿ ಗ್ರಾಮಸ್ಥರೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ಬಳಿಕ ಮಾತನಾಡಿದ ಅವರು, ಸರ್ವೆ ನಂಬರ್ 18ರಲ್ಲಿರುವ ಜಾಗವು ಸುಮಾರು 35 ವರ್ಷಗಳಿಂದ ಯಾರ ಬಳಕೆಯಲ್ಲೂ ಇಲ್ಲದೆ ಪಾಳು ಬಿದ್ದಿದ್ದು, ಇದೀಗ ಖಾಸಗಿ ವ್ಯಕ್ತಿಯೊಬ್ಬರು ಈ ಸರ್ಕಾರಿ ಜಮೀನಿನ ಮೇಲೆ ಹಕ್ಕು ಸಾಧಿಸಲು ಪ್ರಯತ್ನಿಸುತ್ತಿದ್ದಾರೆ ಎಂಬುದು ಗ್ರಾಮಸ್ಥರ ಆರೋಪವಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ತಕ್ಷಣ ಸ್ಥಳ ಪರಿಶೀಲನೆ ನಡೆಸಿ, ಸರ್ಕಾರಿ ಜಮೀನನ್ನು ಸಂರಕ್ಷಿಸಬೇಕು ಎಂದು ಒತ್ತಾಯಿಸಿದರು.

ಗ್ರಾಮಸ್ಥರ ಪ್ರಕಾರ, ಸುಮಾರು 35 ವರ್ಷಗಳ ಹಿಂದೆ ಸ್ವರ್ಣ ಎಂಬುವವರು ಜಾಗದ ಮೇಲೆ ಹಕ್ಕು ಪ್ರತಿಪಾದಿಸಿ ಬೇಲಿ ಹಾಕಿಕೊಂಡಿದ್ದರು. ನಂತರ ಪಕ್ಕದಲ್ಲಿದ್ದ ಸುಮಾರು 10 ಎಕರೆ ಜಮೀನನ್ನು ಮಾರಾಟ ಮಾಡಿ ಸ್ಥಳದಿಂದ ತೆರಳಿದ್ದು, ಅಂದಿನಿಂದ ಈ ಜಾಗ ಖಾಲಿಯಾಗಿಯೇ ಇದೆ. ಹಲವು ವರ್ಷಗಳಿಂದ ಯಾರೂ ಇಲ್ಲಿ ವಾಸವಿಲ್ಲದೆ ಜಾಗ ಕಾಡಿನಂತಾಗಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಈ ಹಿಂದೆ ತಹಸೀಲ್ದಾರ್ ಮಮತಾ ಹಾಗೂ ಸರ್ಕಲ್ ಇನ್ಸ್‌ಪೆಕ್ಟರ್ ಜಯರಾಮ್ ಅವರು ಸ್ಥಳ ಪರಿಶೀಲನೆ ನಡೆಸಿ, ಜಾಗದಲ್ಲಿ ಸದ್ಯ ಯಾರೂ ಸ್ವತಂತ್ರವಾಗಿ ವಾಸವಿಲ್ಲ ಎಂಬ ವರದಿ ನೀಡಿದ್ದರು ಎಂದು ಗ್ರಾಮಸ್ಥರು ತಿಳಿಸಿದ್ದಾರೆ. ಆದರೂ ಬಿಕ್ಕೋಡಿನ ಚಂದ್ರೇಗೌಡ ಎಂಬುವವರು ಜಾಗವನ್ನು ತಮ್ಮದಾಗಿಸಿಕೊಳ್ಳಲು ಅತಿಕ್ರಮಣಕ್ಕೆ ಮುಂದಾಗುತ್ತಿದ್ದಾರೆ ಎಂದು ಆರೋಪಿಸಿದರು.

ಜಾಗದಲ್ಲಿರುವ ಮರಗಳನ್ನು ಕಡಿದು, 2017ರಲ್ಲಿ ಗ್ರಾಮಸ್ಥರು ನಿರ್ಮಿಸಿದ್ದ ಬೇಲಿಯನ್ನು ತೆರವುಗೊಳಿಸುವ ಪ್ರಯತ್ನ ನಡೆಸಲಾಗಿದೆ. ಅಲ್ಲದೆ, ಇದೇ ಜಾಗದಲ್ಲಿರುವ ಪುರಾತನ ನಾಗಮಣಿ ದೇವಸ್ಥಾನವನ್ನು ಗ್ರಾಮಸ್ಥರು ಪುನರುಜ್ಜೀವನಗೊಳಿಸಿ ಪೂಜೆ ಸಲ್ಲಿಸುತ್ತಿದ್ದು, ದೇವಸ್ಥಾನಕ್ಕೆ ಆಗಮಿಸುವ ಭಕ್ತರು ಹಾಗೂ ಪೂಜಾರಿಗಳಿಗೆ ಬೆದರಿಕೆ ಹಾಕಲಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿದೆ.

**40 ಬಡ ಕುಟುಂಬಗಳಿಗೆ ನಿವೇಶನದ ನಿರೀಕ್ಷೆ:** 2017ರಲ್ಲಿಯೇ ಗ್ರಾಮದ ಸುಮಾರು 40 ಬಡ ಯುವಕರು ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿದ್ದಾರೆ. ಗ್ರಾಮದಲ್ಲಿ ಆರ್ಥಿಕವಾಗಿ ಹಿಂದುಳಿದ ಹಾಗೂ ನಿವೇಶನ ರಹಿತ ಕುಟುಂಬಗಳು ಹೆಚ್ಚಿನ ಸಂಖ್ಯೆಯಲ್ಲಿದ್ದು, ಸರ್ಕಾರಿ ಜಮೀನನ್ನು ಖಾಸಗಿ ವ್ಯಕ್ತಿಗಳಿಗೆ ಮಂಜೂರು ಮಾಡುವ ಬದಲು ಅರ್ಹ ಬಡವರಿಗೆ ನಿವೇಶನಗಳಾಗಿ ಹಂಚಿಕೆ ಮಾಡಬೇಕು ಎಂದು ಗ್ರಾಮಸ್ಥರು ಮನವಿ ಮಾಡಿದ್ದಾರೆ.

ಈ ಕುರಿತು ಜಿಲ್ಲಾಧಿಕಾರಿಗಳು ತಕ್ಷಣ ಅಧಿಕಾರಿಗಳಿಂದ ಸಮಗ್ರ ವರದಿ ಪಡೆದು, ಸರ್ವೆ ನಂಬರ್ 18ರ ಜಮೀನಿನ ವಾಸ್ತವ ಸ್ಥಿತಿಯನ್ನು ಪರಿಶೀಲಿಸಬೇಕು. ಸರ್ಕಾರಿ ಜಮೀನಿನ ಮೇಲೆ ನಡೆಯುತ್ತಿರುವ ಯಾವುದೇ ಅತಿಕ್ರಮಣ ಪ್ರಯತ್ನವನ್ನು ತಡೆದು, ಅರ್ಹ 40 ನಿವೇಶನ ರಹಿತ ಬಡ ಕುಟುಂಬಗಳಿಗೆ ನ್ಯಾಯಯುತವಾಗಿ ನಿವೇಶನ ಒದಗಿಸಬೇಕು ಎಂದು ಸಾಮಾಜಿಕ ಹೋರಾಟಗಾರ ಆಸೀಫ್ ಹಾಗೂ ಗ್ರಾಮಸ್ಥರು ಒತ್ತಾಯಿಸಿದರು.

**ಸೂಚನೆ:** ಖಾಸಗಿ ವ್ಯಕ್ತಿಯ ವಿರುದ್ಧದ ಅತಿಕ್ರಮಣ, ಬೆದರಿಕೆ ಹಾಗೂ ಇತರೆ ಆರೋಪಗಳು ಗ್ರಾಮಸ್ಥರು ಮಾಡಿರುವ ಆರೋಪಗಳಾಗಿದ್ದು, ಸಂಬಂಧಪಟ್ಟ ವ್ಯಕ್ತಿಯ ಪ್ರತಿಕ್ರಿಯೆ ಲಭ್ಯವಾದಲ್ಲಿ ಸುದ್ದಿಯಲ್ಲಿ ಸೇರಿಸಬಹುದು.

ಅಧಿಕಾರಿಗಳಾದ ವಿ.ಎ. ಮೈತ್ರಿ ಹಾಗೂ ಆರ್.ಐ. ಯೋಗೇಶ್ ಸೇರಿದಂತೆ ಹಲವಾರು ಇದ್ದರು.

# ನಾಗೇಂದ್ರ ವಿಚಾರಣೆಗೆ ರಾಜ್ಯಪಾಲರ ಅನುಮತಿ ಕೋರಿದ ಸಿಬಿಐ

• ಪ್ರಜೋದಯ ವರದಿ

**ಬೆಂಗಳೂರು** ರಾಜ್ಯ ರಾಜಕಾರಣದಲ್ಲಿ ಭಾರೀ ಚರ್ಚೆಗೆ ಕಾರಣವಾಗಿರುವ ಮಹರ್ಷಿ ವಾಲೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಣ ದುರುಪಯೋಗ ಪ್ರಕರಣದಲ್ಲಿ ಸಚಿವ ಬಿ. ನಾಗೇಂದ್ರ ಅವರ ಕಾನೂನು ಸಂಕಷ್ಟ ಮತ್ತಷ್ಟು ಗಂಭೀರವಾಗುವ ಸಾಧ್ಯತೆ ಇದೆ. ಪ್ರಕರಣದ ತನಿಖೆ ನಡೆಸುತ್ತಿರುವ ಸಿಬಿಐ, ನಾಗೇಂದ್ರ ಅವರನ್ನು ವಿಚಾರಣೆಗೊಳಪಡಿಸಲು ಹಾಗೂ ಕಾನೂನು ಕ್ರಮ ಮುಂದುವರಿಸಲು ರಾಜ್ಯಪಾಲರ ಅನುಮತಿ ಕೋರಿ ಪತ್ರ ಬರೆದಿದೆ ಎನ್ನಲಾಗಿದೆ.




ನಿಗಮದ ಸುಮಾರು 89.63 ಕೋಟಿ ರೂ.ಗಳನ್ನು ನಕಲಿ ಚೆಕ್‌ಗಳು ಮತ್ತು ಆರ್‌ಟಿಜಿಎಸ್ ಮೂಲಕ ಅಕ್ರಮವಾಗಿ ವರ್ಗಾಯಿಸಿ, ನೂರಾರು ಬೇನಾಮಿ ಖಾತೆಗಳ ಮೂಲಕ ದುರ್ಬಳಕೆ ಮಾಡಲಾಗಿದೆ ಎಂಬುದು ತನಿಖೆಯ ಪ್ರಮುಖ ಆರೋಪವಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ದೋಷಾರೋಪಪಟ್ಟಿ ಸಲ್ಲಿಸಿದ್ದು, ನಾಗೇಂದ್ರ ಅವರನ್ನು ಪ್ರಮುಖ ಆರೋಪಿಗಳ ಪೈಕಿ ಒಬ್ಬರಾಗಿ ಉಲ್ಲೇಖಿಸಿದೆ ಎನ್ನಲಾಗಿದೆ.

ಹಗರಣದ ಆರೋಪಗಳು ತೀವ್ರಗೊಂಡ ಹಿನ್ನೆಲೆಯಲ್ಲಿ 2024ರಲ್ಲಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ನಾಗೇಂದ್ರ ಅವರನ್ನು ಜಾರಿ ನಿರ್ದೇಶನಾಲಯ ಕೂಡ ಬಂಧಿಸಿ ವಿಚಾರಣೆ ನಡೆಸಿತ್ತು. ಬಳಿಕ ಅವರು ನ್ಯಾಯಾಲಯದಿಂದ ಜಾಮೀನು ಪಡೆದು ಹೊರಬಂದಿದ್ದರು. ಇತ್ತೀಚೆಗೆ ಅವರು ಮತ್ತೆ ಸಚಿವ ಸಂಪುಟಕ್ಕೆ ಸೇರ್ಪಡೆಯಾಗಿರುವುದು ಬಿಜೆಪಿ ಮತ್ತು ಜೆಡಿಎಸ್ ಸೇರಿದಂತೆ ಪ್ರತಿಪಕ್ಷಗಳ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ರಾಜ್ಯ ಸರ್ಕಾರದ ವಾದದ ಪ್ರಕಾರ, ಆರೋಪಪಟ್ಟಿ ಸಲ್ಲಿಕೆಯಾದ ಮಾತ್ರಕ್ಕೆ ವ್ಯಕ್ತಿ ಅಪರಾಧಿ ಎಂದು ಪರಿಗಣಿಸಲಾಗುವುದಿಲ್ಲ. ಆರೋಪಗಳು ನ್ಯಾಯಾಲಯದಲ್ಲಿ ಸಾಬೀತಾಗುವವರೆಗೆ ನಿರ್ದೋಷಿತ್ವದ ಹಕ್ಕು ಅನ್ವಯಿಸುತ್ತದೆ. ಇದೇ ವೇಳೆ, ನಾಗೇಂದ್ರ ಅವರನ್ನು ಸಚಿವರಾಗಿ ಮುಂದುವರಿಸುವ ಸರ್ಕಾರದ ನಿರ್ಧಾರವನ್ನು ಪ್ರತಿಪಕ್ಷಗಳು ನೈತಿಕ ಪ್ರಶ್ನೆಯಾಗಿ ಮುಂದಿಟ್ಟಿವೆ.

ರಾಜ್ಯಪಾಲರ ಅನುಮತಿ ದೊರೆತರೆ ನಾಗೇಂದ್ರ ವಿರುದ್ಧದ ಕಾನೂನು ಪ್ರಕ್ರಿಯೆ ಮತ್ತಷ್ಟು ವೇಗ ಪಡೆಯುವ ಸಾಧ್ಯತೆ ಇದೆ. ಮುಂದಿನ ಹಂತದಲ್ಲಿ ನ್ಯಾಯಾಲಯ ಆರೋಪಪಟ್ಟಿಯನ್ನು ಪರಿಗಣಿಸುವುದು, ಆರೋಪ ನಿಗದಿ ಮತ್ತು ವಿಚಾರಣೆಯ ಪ್ರಗತಿ ಪ್ರಕರಣದ ದಿಕ್ಕನ್ನು ನಿರ್ಧರಿಸಲಿದೆ.

ಈ ಬೆಳವಣಿಗೆ ಕಾಂಗ್ರೆಸ್ ಸರ್ಕಾರಕ್ಕೆ ರಾಜಕೀಯವಾಗಿಯೂ ಸವಾಲಾಗಿದೆ. ನಾಗೇಂದ್ರ ಅವರನ್ನು ಸಂಪುಟದಲ್ಲಿ ಮುಂದುವರಿಸುವುದೇ ಅಥವಾ ಪ್ರಕರಣದ ಹಿನ್ನೆಲೆಯಲ್ಲಿ ಕ್ರಮ ಕೈಗೊಳ್ಳುವುದೇ ಎಂಬ ಪ್ರಶ್ನೆ ಇದೀಗ ಮತ್ತಷ್ಟು ಮಹತ್ವ ಪಡೆದಿದೆ.

# ನಕಲಿ ಔಷಧ ಜಾಲ ಸಕ್ರಿಯ: ಕೇಂದ್ರಕ್ಕೆ ಪತ್ರ

• ಪ್ರಜೋದಯ ವರದಿ



**ಬೆಂಗಳೂರು:** ನಕಲಿ ಔಷಧ ಪೂರೈಸುವ ಕಂಪನಿಗಳ ವಿರುದ್ಧ ಕ್ರಮ ಜರುಗಿಸುವಂತೆ ಕೇಂದ್ರ ಮತ್ತು ಆಯಾ ರಾಜ್ಯಗಳ ಆರೋಗ್ಯ ಸಚಿವರಿಗೆ ಪತ್ರ ಬರೆಯಲಾಗುವುದೆಂದು ಆರೋಗ್ಯ ಸಚಿವ ಯು.ಟಿ.ಖಾದರ್ ಅವರು ತಿಳಿಸಿದರು.

ಸುದ್ದಿಗಾರರೊಂದಿಗೆ ಗುರುವಾರ ಮಾತನಾಡಿದ ಅವರು, ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ನಕಲಿ ಔಷಧಗಳ ಜಾಲ ಪತ್ತೆಯಾಗಿದೆ. ಈ ಸಮಸ್ಯೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಇದು ಅಂತಾರಾಜ್ಯ ಮಟ್ಟದಲ್ಲಿ ಔಷಧಗಳನ್ನು ತಯಾರಿಸಿ ಕರ್ನಾಟಕಕ್ಕೆ ಸರಬರಾಜು ಮಾಡುತ್ತಿದ್ದ ಜಾಲವಾಗಿದ್ದು, ರಾಜ್ಯದಾದ್ಯಂತ ವಿತರಣೆ ನಡೆದಿರುವ ಸಾಧ್ಯತೆ ಇದೆ. ಈ ಹಿನ್ನಲೆಯಲ್ಲಿ ಕೇಂದ್ರ ಆರೋಗ್ಯ ಸಚಿವರು ಹಾಗು ಸಂಬಂಧಪಟ್ಟ ರಾಜ್ಯಗಳ ಆರೋಗ್ಯ ಸಚಿವರಿಗೆ ಪತ್ರ ಬರೆಯಲಾಗುವುದೆಂದರು.

ನಕಲಿ ಔಷಧಗಳು ಯಾವೆಲ್ಲ ಜಿಲ್ಲೆಗಳಿಗೆ ಸರಬರಾಜಾಗಿವೆ, ಎಲ್ಲೆಲ್ಲಿ ಮಾರಾಟವಾಗಿವೆ, ಎಷ್ಟು ವರ್ಷಗಳಿಂದ ಈ ಜಾಲ ಕಾರ್ಯನಿರ್ವಹಿಸುತ್ತಿತ್ತು. ಯಾವ ಆಸ್ಪತ್ರೆಗಳಲ್ಲಿ ಔಷಧಗಳನ್ನು ಬಳಸಲಾಗಿದೆ ಹಾಗು ಅದರಿಂದ ರೋಗಿಗಳ ಮೇಲೆ ಉಂಟಾಗಿರುವ ಪರಿಣಾಮಗಳೇನು ಎಂಬುದರ ಕುರಿತು ಸಮಗ್ರ ತನಿಖೆ ನಡೆಸಲಾಗುವುದೆಂದರು.

ಪ್ರಕರಣ ಅಂತರ್ ರಾಜ್ಯ ವ್ಯಾಪಿ ಸ್ವರೂಪ ಹೊಂದಿರುವುದರಿಂದ ವಿಶೇಷ ತನಿಖಾ ತಂಡ (ಎಸ್ಐಟಿ) ರಚಿಸುವ ಅಗತ್ಯವಿದೆ. ಈ ಕುರಿತು ಗೃಹ ಸಚಿವರೊಂದಿಗೆ ಚರ್ಚಿಸಿ ಒಂದೆರಡು ದಿನಗಳಲ್ಲಿ ನಿರ್ಧಾರ ಕೈಗೊಳ್ಳಲಾ ಗುವುದು. ಅಲ್ಲಿಯವರೆಗೆ ರಾಮನಗರ ಪೊಲೀಸ್ ವರಿಷ್ಠಾಧಿ ಕಾರಿ ನೇತೃತ್ವದಲ್ಲಿ ತನಿಖೆ ಮುಂದುವರಿಯಲಿದೆ ಎಂದು ಹೇಳಿದರು.

ಸುಮಾರು ಆರು ಬಹುರಾಷ್ಟ್ರೀಯ ಕಂಪನಿಗಳ ಔಷಧಗಳನ್ನು ನಕಲಿ ಲೇಬಲ್ ಬಳಸಿ ಮಾರಾಟ ಮಾಡುತ್ತಿರುವುದು ಪತ್ತೆಯಾಗಿದೆ. ಔಷಧಗಳ ಸಾಗಣೆ ಹಾಗು ವಿತರಣೆಯಲ್ಲಿ ಭಾಗಿಯಾಗಿರುವವರ ವಿರುದ್ಧವೂ ಕಠಿಣ ಕ್ರಮ ಕೈಗೊಳ್ಳಲಾಗುವುದು. ಆರೋಪಿಗಳ ವಿರುದ್ಧ ಸಾವಿಗೆ ಪ್ರೇರಣೆ ನೀಡುವಂತಹ ಕಠಿಣ ಕಾನೂನುಗಳ ಅಡಿಯಲ್ಲಿ ಪ್ರಕರಣ ದಾಖಲಿಸ ಲಾಗುವುದೆಂದರು.

10 ಸಾವಿರ ರೂ. ಮೌಲ್ಯದ ಔಷಧವನ್ನು ಐದು ಸಾವಿರ ರೂ.ಗೆ ಮಾರಾಟ ಮಾಡಲಾಗುತ್ತಿದ್ದರೆ ಸಾರ್ವಜನಿಕರು ಅನುಮಾನಗೊಂಡು ಪ್ರಶ್ನಿಸಬೇಕು. ಈ ಬಗ್ಗೆ ಇಲಾಖೆಗೆ ಮಾಹಿತಿ ನೀಡಬೇಕು ಎಂದು ಸಚಿವರು ಮನವಿ ಮಾಡಿದರು.

ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ವತಿಯಿಂದ ರೈಲ್ವೆ ಇಲಾಖೆಯ ಕ್ಯಾಂಟೀನ್‌ಗಳಲ್ಲಿ ಆಹಾರದ ಗುಣಮಟ್ಟ ಪರಿಶೀಲನೆ ನಡೆಸಲಾಗುವುದು. ಈ ವರೆಗೆ ನಡೆದ ತಪಾಸಣೆಯಲ್ಲಿ ಪತ್ತೆಯಾದ ಲೋಪಗಳ ಕುರಿತು ಸಂಬಂಧಪಟ್ಟವರಿಗೆ ಮೊದಲ ಹಂತದಲ್ಲಿ ನೋಟೀಸ್ ನೀಡಿ ವಿವರಣೆ ಪಡೆಯಲಾಗುವುದು. ತಕ್ಷಣ ಕಠಿಣ ಕ್ರಮ ಕೈಗೊಂಡರೆ ವ್ಯಾಪಾರ- ವಹಿವಾಟಿಗೆ ತೊಂದರೆಯಾಗುವ ಸಾಧ್ಯತೆ ಇರುವುದರಿಂದ ಮೊದಲು ನೋಟೀಸ್ ನೀಡಲಾಗುತ್ತದೆ. ತಪ್ಪುಗಳು ಪುನರಾವರ್ತನೆ ಯಾದರೆ ಕಠಿಣ ಕ್ರಮ ಜರುಗಿಸಲಾಗುವುದೆಂದು ಹೇಳಿದರು.

ಹೋಟೆಲ್‌ಗಳು ಮತ್ತು ಔಷಧ ಅಂಗಡಿಗಳ ಮುಂಭಾಗ ಅಳವಡಿಸಿರುವ ಕ್ಯೂಆರ್ ಕೋಡ್‌ಗಳ ಮೂಲಕ ಮೊದಲ ದಿನವೇ 350ಕ್ಕೂ ಹೆಚ್ಚು ದೂರುಗಳು ಬಂದಿವೆ. ಮುಂದಿನ ದಿನಗಳಲ್ಲಿ ಇನ್ನಷ್ಟು ದೂರು ದಾಖಲಾಗುವ ಸಾಧ್ಯತೆ ಇದೆ. ಜನರಲ್ಲಿ ಜಾಗೃತಿ ಹೆಚ್ಚಾಗಿದ್ದು, ಭವಿಷ್ಯ ದಲ್ಲಿಯೂ ಕ್ಯೂಆರ್ ಕೋಡ್ ವ್ಯವಸ್ಥೆಯನ್ನು ಮುಂದುವರಿಸಲಾಗುವುದೆಂದು ಯು.ಟಿ.ಖಾದರ್ ತಿಳಿಸಿದರು.

# ಪಟ್ಟು ಬಿಡದ ವಿಪಕ್ಷಗಳು : ಕಲಾಪಕ್ಕೆ ಅಡ್ಡಿ

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯದ ಯೋಜನೆ ಮತ್ತು ಸಾಂಖ್ಯಿಕ ಸಚಿವ ಬಿ.ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ಕಳೆದ ಮೂರು ದಿನಗಳಿಂದ ಸದನದಲ್ಲಿ ಹೋರಾಟ ನಡೆಸುತ್ತಿರುವ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು 4ನೇ ದಿನವಾದ ಇಂದೂ ಸಹ ಪ್ರತಿಭಟನೆ ಮುಂದುವರೆಸಿದ್ದರಿಂದ ಸದನದಲ್ಲಿ ಸುಗಮ ಕಲಾಪಕ್ಕೆ ಅಡ್ಡಿಯಾಗಿದೆ.

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ ಸಚಿವ ನಾಗೇಂದ್ರ ಅವರು ರಾಜೀನಾಮೆ ನೀಡಬೇಕು. ಇಲ್ಲವೇ ಅವರನ್ನು ಸಂಪುಟದಿಂದ ವಜಾಗೊಳಿಸಬೇಕೆಂದು ಆಗ್ರಹಿಸಿ ಪ್ರತಿ ಪಕ್ಷಗಳು ಸದನದಲ್ಲಿ ಹೋರಾಟ ನಡೆಸಿದ್ದು, ಇಂದೂ ಸಹ ಸದನ ಆರಂಭವಾಗುತ್ತಿದ್ದಂತೆಯೇ ಪ್ರತಿ ಪಕ್ಷಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ, ನಾಗೇಂದ್ರ ಅವರನ್ನು ವಜಾ ಮಾಡಬೇಕೆಂದು ಆಗ್ರಹಿಸಿದ್ದರಿಂದ ಇಡೀ ಕಲಾಪ ಗೊಂದಲದ ಗೂಡಾಯಿತು.

ವಿಧಾನಸಭಾಧ್ಯಕ್ಷ ಜಿ.ಎಸ್.ಪಾಟೀಲ್ ಅವರು ಸುಗಮ ಕಲಾಪಕ್ಕೆ ಅವಕಾಶ ಮಾಡಿ ಕೊಡಿ ಎಂದು ವಿಪಕ್ಷ ನಾಯಕರಲ್ಲಿ ಮನವಿ ಮಾಡಿದರಾದರೂ ಅದನ್ನು ಲೆಕ್ಕಿಸದೆ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗತೊಡಗಿದರು. ಇದರಿಂದ ಸದನದಲ್ಲಿ ಗದ್ದಲ ತಾರಕಕ್ಕೇರಿತು.

ಪ್ರತಿ ಪಕ್ಷಗಳ ಘೋಷಣೆ ನಡುವೆಯೇ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ್, ಸದನದಲ್ಲಿ ಬುಧವಾರ ಕಂದಾಯ ಸಚಿವ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ನಾಗೇಶ್ ಅಪರಾಧಿ ಅಲ್ಲವೆಂದು ಸದನಕ್ಕೆ ತಪ್ಪು ಮಾಹಿತಿ ನೀಡಿದ್ದಾರೆ. ನಾಗೇಂದ್ರ ಅವರ ವಿರುದ್ಧ 24 ಪ್ರಕರಣಗಳಿವೆ ಎಂದು ಸಿಬಿಐ ಉಲ್ಲೇಖಿಸಿರುವ ಆರೋಪ ಪಟ್ಟಿಯನ್ನು ಸದನದಲ್ಲಿ ಪ್ರದರ್ಶಿಸಿದರು.

ಇಂತಹ ಕಳಂಕಿತ ಶಾಸಕರನ್ನು ಸಂಪುಟದಲ್ಲಿ ಇಟ್ಟುಕೊಂಡಿರುವುದು ಸರಿಯಲ್ಲ. ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಸಿದ್ಧರಾಮಯ್ಯ ಅವರು ನಾಗೇಂದ್ರ ಅವರನ್ನು ಸಚಿವ ಸ್ಥಾನದಿಂದ ತೆಗೆದಿದ್ದರು. ಡಿ.ಕೆ. ಶಿವಕುಮಾರ್ ಅವರು ಮತ್ತೆ ಸಂಪುಟಕ್ಕೆ ಕರೆ ತಂದಿದ್ದಾರೆ. ಕಳಂಕಿತ ನಾಗೇಂದ್ರ ಅವರನ್ನು ವಜಾ ಮಾಡಬೇಕೆಂದು ಒತ್ತಾಯಿಸಿದರು.

ಒಬ್ಬ ನಾಗೇಂದ್ರನಿಂದ 224 ಸದಸ್ಯರ ಹಕ್ಕಿಗೆ ಚ್ಯುತಿ ತರುವುದು ಸರಿಯಲ್ಲ. ಕೋಟ್ಯಾಂತರ ದಲಿತರಿಗೆ ಸೇರಬೇಕಾದ ಹಣವನ್ನು ಲೂಟಿ ಮಾಡಿದ್ದಾರೆ. ಇಂತಹವರು ಸಂಪುಟದಲ್ಲಿ ಇರಬಾರದೆಂದು ಅಶೋಕ್ ಹೇಳಿದರು.

ಎಲ್ಲವನ್ನೂ ಚರ್ಚೆ ಮಾಡೋಣ, ದಾಖಲೆ ಕೊಡಿ ಎಂದು ಸಭಾಧ್ಯಕ್ಷರು ಹೇಳಿದರಾದರೂ ಅದಕ್ಕೆ ವಿಪಕ್ಷಗಳು ಸೊಪ್ಪು ಹಾಕದೆ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗುತ್ತಾ ವಾಲ್ಮೀಕಿ ಎಲ್ಲಿ ಹೋಗಿದೆ, ಎಲ್ಲಿ ಹೋಗಿದೆ. ವಾಲ್ಮೀಕಿ ಹಣ ರಾಹುಲ್‌ಗಾಂಧಿ ಮನೆಗೋಗಿದೆ, ರಾಹುಲ್‌ಗಾಂಧಿ ಮನೆಗೋಗಿದೆ ಎಂದು ಕೂಗತೊಡಗಿದರು. ಇದರಿಂದ ಸದನದಲ್ಲಿ ಗದ್ದಲ ಮತ್ತಷ್ಟು ಜೋರಾಯಿತು. ಈ ಗದಲ್ಲದಲ್ಲೇ ಸಭಾಧ್ಯಕ್ಷರು ಪ್ರಶ್ನೋತ್ತರ, ಶೂನ್ಯ ವೇಳೆ ಕಲಾಪವನ್ನು ನಡೆಸಿ, ನಂತರ ಸದನವನ್ನು ಅರ್ಧ ಗಂಟೆ ಕಾಲ ಮುಂದೂಡಿದರು.

**ಕಪ್ಪು ಪಟ್ಟಿ ಧರಿಸಿದ ಬಿಜೆಪಿ ಸದಸ್ಯರು**

ಸಚಿವ ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ಸದನದಲ್ಲಿ ಕಳೆದ ಮೂರು ದಿನಗಳಿಂದ ಹೋರಾಟ ನಡೆಸಿರುವ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ನಾಲ್ಕನೇ ದಿನವಾದ ಇಂದೂ ತೋಳಿಗೆ ಕಪ್ಪು ಪಟ್ಟಿ ಧರಿಸಿ ಸದನಕ್ಕೆ ಆಗಮಿಸಿದರು. ಭಿತ್ತಿ ಪತ್ರಗಳನ್ನು ಹಿಡಿದು ಘೋಷಣೆಗಳನ್ನು ಕೂಗುತ್ತಾ ಸಚಿವ ನಾಗೇಂದ್ರ ರಾಜೀನಾಮೆಗೆ ಪಟ್ಟು ಹಿಡಿದರು.

**ಪ್ರದೀಪ್ ಈಶ್ವರ್ ಮಾತಿನ ಚಕಮಕಿ**

ಬಿಜೆಪಿ ಮತ್ತು ಜೆಡಿಎಸ್ ಸದಸ್ಯರು ಸಚಿವ ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಘೋಷಣೆಗಳನ್ನು ಕೂಗುತ್ತಾ ಆಡಳಿತ ಪಕ್ಷದ ಹಿಂದಿನ ಸಾಲಿನಿಂದ ಮುಂದಿನ ಸಾಲಿಗೆ ಆಗಮಿಸಿದ ಪ್ರದೀಪ್ ಈಶ್ವರ್, ಬಿಜೆಪಿ ಸದಸ್ಯರ ಜತೆ ನೇರ ಮಾತಿನ ಚಕಮಕಿ ನಡೆಸಿ, ಬಿಜೆಪಿಯವರ ಘೋಷಣೆಗೆ ವಿರುದ್ಧವಾಗಿ ಪ್ರತಿ ಘೋಷಣೆ ಕೂಗಿ, ಬಿಜೆಪಿ ಚೋರ್ ಹೈ ಎಂಬ ಪ್ರತಿ ಘೋಷಣೆಗಳನ್ನು ಕೂಗಿದರು.

ಈ ಹಂತದಲ್ಲಿ ಸಚಿವ ರಾಮಲಿಂಗಾರೆಡ್ಡಿ ಅವರು, ಪ್ರದೀಪ್ ಈಶ್ವರ್ ಬಳಿ ಹೋಗಿ ಅವರ ಆಸನಕ್ಕೆ ತೆರಳುವಂತೆ ಹೇಳಿದರೂ ಅದಕ್ಕೆ ಕಿವಿಗೊಡದ ಪ್ರದೀಪ್ ಈಶ್ವರ್ ಬಿಜೆಪಿ ವಿರುದ್ಧ ಮುಂದಿನ ಸಾಲಿನಲ್ಲಿ ನಿಂತು ಘೋಷಣೆಗಳನ್ನು ಕೂಗುವುದನ್ನು ಮುಂದುವರೆಸಿದರು.

ಕಾಂಗ್ರೆಸ್ ಸದಸ್ಯ ರವಿ ಗಣಿಗ ಅವರು ಎದ್ದು ಬಂದು ಪ್ರದೀಪ್ ಈಶ್ವರ್ ಅವರನ್ನು ಅವರ ಆಸನದತ್ತ ಕರೆದೊಯ್ಯಲು ಯತ್ನಿಸಿದರಾದರೂ ಪ್ರದೀಪ್ ಈಶ್ವರ್ ಅವರಿಂದಲೂ ನುಣುಚಿಕೊಂಡು ಬಿಜೆಪಿ ಸದಸ್ಯರ ಘೋಷಣೆಗಳಿಗೆ ಪ್ರತಿ ಘೋಷಣೆ ಕೂಗುತ್ತಲೆ ಇದ್ದರು

ಈ ಹಂತದಲ್ಲಿ ಸಚಿವ ಬೈರತಿ ಸುರೇಶ್ ಎದ್ದು ಬಂದು ಪ್ರದೀಪ್ ಈಶ್ವರ್ ಅವರನ್ನು ಅವರ ಆಸನದತ್ತ ಕರೆದೊಯ್ದರು. ಇಷ್ಟೆಲ್ಲಾ ಆದರೂ ಬಿಜೆಪಿ ಸದಸ್ಯರು ಪ್ರದೀಪ್ ಈಶ್ವರ್ ಅವರನ್ನು ಕಿಚಾಯಿಸಿ ಘೋಷಣೆಗಳನ್ನು ಕೂಗಿದರು.

## ಅತ್ತೆ ಮನೆ ಕಿರುಕುಳ: ಮಗನನ್ನು ಕೊಂದು ತಾಯಿ ಆತ್ಮಹತ್ಯೆ

» ಮೊದಲನೇ ಪುಟದಿಂದ

ಮನೆಗೆ ಸೇರಿಸಿಲ್ಲ. ನೀನು ಕೂಡ ಅವರೊಂದಿಗೆ ಮಾತನಾಡಬಾರದೆಂದು ಜಗಳವಾಡುತ್ತಿದ್ದಳು. ಒಂದು ವೇಳೆ ಮಾತನಾಡಿದರೆ ತಾಳಿ ಬಿಚ್ಚಿಟ್ಟು ಸಾಯುತ್ತೇನೆಂದು ಬೆದರಿಕೆ ಹಾಕುತ್ತಿದ್ದಳು. ಇದೇ ವಿಚಾರಕ್ಕೆ ಹಲವು ಬಾರಿ ಮನೆ ಬಿಟ್ಟು ಹೋಗುತ್ತಿದ್ದಳು ಎಂದು ಎಸ್‌ಪಿ ವಿವರಿಸಿದರು.

ಅನುಪಮಾ ತಾಯಿ ಯಶೋಧ, ಅಣ್ಣ ಸಂಜು ರಾಜಿ ಸಂಧಾನ ಮಾಡಿ ಹೊಂದಿಕೊಂಡು ಹೋಗುವಂತೆ ಬುದ್ಧಿವಾದ ಹೇಳಿದ್ದರು. ಆದರೆ, ಅನುಪಮಾ ಮಾತ್ರ ಬದಲಾಗಿರಲಿಲ್ಲ. ಪತ್ನಿ ವರ್ತನೆಯಿಂದ ಬೇಸತ್ತ ಪತಿ ಶ್ರೀನಿವಾಸ್ ಪ್ರತ್ಯೇಕವಾಗಿ ವಾಸಿಸಲು ನಿರ್ಧರಿಸಿದ್ದರು. ಪುನಃ ರಾಜಿ ಸಂಧಾನ ಮಾಡಿದ ಬಳಿಕ ಕಳೆದ ಎರಡು ತಿಂಗಳ ಹಿಂದೆ ಆಲೂರು ಪಟ್ಟಣದ ಹೌಸಿಂಗ್ ಬೋರ್ಡ್‌ನ ಬಾಡಿಗೆ ಮನೆ ಯಲ್ಲಿ ನೆಲೆಸಿದ್ದರು.

ಬುಧವಾರ ಮಧ್ಯಾಹ್ನ ಪತಿಗೆ ಕರೆ ಮಾಡಿ ಸಂಜೆ ಬೇಗ ಮನೆಗೆ ಬಾ ಮಾತನಾಡಬೇಕೆಂದು ಹೇಳಿದ್ದರು. ಶ್ರೀನಿವಾಸ್ ಸಂಜೆ 5 ಗಂಟೆಗೆ ಮನೆಗೆ ಬಂದಾಗ ಬಾಗಿಲು, ಕಿಟಕಿಗಳು ಎಲ್ಲಾ ಬಂದ್ ಆಗಿದ್ದವು. ಪತ್ನಿಗೆ ಕರೆ ಮಾಡಿದರೆ ಮನೆಯೊಳಗೆ ರಿಂಗ್ ಆಗುತ್ತಿತ್ತು. ನಂತರ ಬಾಮೈದ ಸಂಜುಗೆ ಕರೆ ಮಾಡಿ ವಿಷಯ ತಿಳಿಸಿದ್ದರು. ಸ್ಥಳಕ್ಕೆ ಬಂದ ಪೊಲೀಸರು ಒಳಗಿನಿಂದ ಹಾಕಿದ್ದ ಬಾಗಿಲು ಲಾಕ್ ಮುರಿದು ಒಳಗೆ ಹೋಗಿ ನೋಡಿದ ವೇಳೆ ಮಗು ಆರ್ಯನನ್ನು ದಿಂಬಿನಿಂದ ಉಸಿರು ಗಟ್ಟಿಸಿ ಕೊಲೆ ಮಾಡಿ ನಂತರ ನೇಣು ಬಿಗಿದುಕೊಂಡು ಅನುಪಮಾ ಆತ್ಮಹತ್ಯೆ ಮಾಡಿಕೊಂಡಿರುವುದು ಬೆಳಕಿಗೆ ಬಂದಿದೆ ಎಂದರು.

## ನೀರು ನಮ್ಮನ್ನು ಒಗ್ಗೂಡಿಸಲಿ, ವಿಭಜಿಸದಿರಲಿ

» ಮೊದಲನೇ ಪುಟದಿಂದ

ಚಂದ್ರಬಾಬು ನಾಯ್ಡು ಹಾಗೂ ರೇವಂತ್ ರೆಡ್ಡಿ ಅವರು ನನ್ನೊಂದಿಗೆ ಆ ಸಭೆಯಲ್ಲಿ ಭಾಗವಹಿಸಿದ್ದರು. ನಾವು ಸ್ಪರ್ಧಿಗಳಾಗಿ ಅಲ್ಲ, ಪಾಲುದಾರರಾಗಿ ಕುಳಿತು ಚರ್ಚೆ ನಡೆಸಿದೆವು. ಇದೇ ಕರ್ನಾಟಕದ ಮಾದರಿ ಎಂದು ಹೇಳಿದರು.

ಪ್ರತಿಯೊಂದು ನದಿಪಾತ್ರದ ರಾಜ್ಯಕ್ಕೂ ತನ್ನದೇ ಆದ ನ್ಯಾಯ ಸಮ್ಮತ ಅಗತ್ಯಗಳಿವೆ ಎಂಬುದನ್ನು ನಾವು ಒಪ್ಪಿಕೊಳ್ಳುತ್ತೇವೆ. ನಮ್ಮ ನಿಲುವು ಸಮಾನತೆ. ಪಾರದರ್ಶಕತೆ. ಸಹಕಾರ ಎನ್ನುವ ಮೂರು ತತ್ವಗಳ ಮೇಲೆ ಆಧಾರದ ಮೇಲಿವೆ. ಆದರೆ, ಸಹಕಾರವು ಎರಡೂ ದಿಕ್ಕಿನಲ್ಲೂ ಇರಬೇಕು. ಕರ್ನಾಟಕವು ಸದಾ ತನ್ನ ನೆರೆ ರಾಜ್ಯಗಳ ಹಕ್ಕುಗಳನ್ನು ಗೌರವಿಸಿದೆ. ಅದೇ ರೀತಿಯಲ್ಲಿ ನಮ್ಮ ಹಕ್ಕುಗಳನ್ನೂ ಗೌರವಿಸಬೇಕೆಂದು ನಾವು ಬಯಸುತ್ತೇವೆ. ನ್ಯಾಯ ಮಂಡಳಿಗಳ ತೀರ್ಪುಗಳಡಿ ನಮಗೆ ಕಾನೂನು ಬದ್ಧವಾಗಿ ದೊರೆಯಬೇಕಾದ ನೀರಿನ ಪಾಲು ಹಾಗೂ ನಮ್ಮ ರೈತರಿಗೆ ನೀರನ್ನು ತಲುಪಿಸುವ ಯೋಜನೆಗಳ ಸಮಯೋಚಿತ ಪೂರ್ಣಗೊಳಿಸುವಿಕೆಯನ್ನು ನಾವು ನಿರೀಕ್ಷಿಸುತ್ತೇವೆ ಎಂದರು.

# ಭೂ ಒಡೆತನದ ಹಕ್ಕು ನೀಡಿದ ಮಹಾನ್ ನಾಯಕ ಅರಸು

» ಮೊದಲನೇ ಪುಟದಿಂದ

ಹೆಸರು ವಾಸಿಯಾಗಿದ್ದಾರೆಂದು ಹೇಳಿದರು.

ತುಮಕೂರು ವಿಶ್ವವಿದ್ಯಾಲಯದ ಕುಲ ಸಚಿವ ಡಾ.ಮೋಹನ್ ಚಂದ್ರ ಗುತ್ತಿ ಅವರು ಮಾತನಾಡಿ, ದೇವರಾಜ್ ಅರಸು ಅವರು ಬಡ ಕುಟುಂಬದಿಂದ ಬಂದು ಹೋರಾಟಗಾರರಾಗಿ ಸಮಾಜದಲ್ಲಿ ಪ್ರಾಮುಖ್ಯತೆ ಪಡೆದಿದ್ದಾರೆ. ಮಕ್ಕಳ ಜೀವನಕ್ಕೆ ಆದರ್ಶ ದೀಪವಾಗಿ, ವಿದ್ಯಾಭ್ಯಾಸವನ್ನು ಮುಖ್ಯ ಗುರಿಯನ್ನಾಗಿಸಿಕೊಂಡು ಸಮಾಜಕ್ಕೆ ವಿದ್ಯಾಭ್ಯಾಸದ ಮಹತ್ವವನ್ನು ತಿಳಿಸಿಕೊಟ್ಟವರು ಎಂದರು.

ದೇವರಾಜ ಅರಸು ಅವರು ಕೇವಲ ಒಬ್ಬ ರಾಜಕಾರಣಿಯಾಗಿರಲಿಲ್ಲ, ಬದಲಿಗೆ ಸಾಮಾಜಿಕ ಸಮಾನತೆಯನ್ನು ತರಲು ಶ್ರಮಿಸಿದ ಮಹಾನ್ ಸಮಾಜ ಸುಧಾರಕರಾಗಿದ್ದರು. ಡಿ.ದೇವರಾಜ ಅರಸು ಅವರು, ಜೀತ ಪದ್ಧತಿ, ಮಲಹೊರುವ ಪದ್ಧತಿ ನಿರ್ಮೂಲನೆಯ ಮೂಲಕ ಸಾಮಾಜಿಕ ಪರಿವರ್ತನೆಗೆ ಶ್ರಮಿಸಿದ್ದಾರೆಂದು ತಿಳಿಸಿದರು.

ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಕುಮಾರ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಜಿ.ಆರ್.ರಂಜಿತ್ ಮತ್ತಿತರರು ಉಪಸ್ಥಿತರಿದ್ದರು.



**ನಗರದಲ್ಲಿ ಅರಸು ಭಾವಚಿತ್ರ ಮೆರವಣಿಗೆ**

ಡಿ.ದೇವರಾಜ ಅರಸು ಅವರ ಜನ್ಮದಿನಾಚರಣೆ ಅಂಗವಾಗಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ನಡೆದ ಮೆರವಣಿಗೆಗೆ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲಾ ಅವರು ಚಾಲನೆ ನೀಡಿದರು.

ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಅವರು ಮಾತನಾಡಿ, ಡಿ.ದೇವರಾಜ್ ಅರಸುರವರು ಭಾರತಕ್ಕೆ ಸ್ವಾತಂತ್ರ್ಯ ದೊರಕಿದ್ದ ನಂತರ ಮೊದಲ ಚುನಾವಣೆಯಲ್ಲಿ ಹುಣಸೂರು ವಿಧಾನಸಭಾ ಕ್ಷೇತ್ರದಿಂದ ಮೊದಲ ಬಾರಿಗೆ ಶಾಸಕರಾಗಿ ಆಯ್ಕೆಯಾಗುವ ಮೂಲಕ 10 ವರ್ಷ ಶಾಸಕರಾಗಿ ಎರಡು ಬಾರಿ ಮುಖ್ಯಮಂತ್ರಿಗಳಾಗಿ ಸೇವೆ ಸಲ್ಲಿಸುತ್ತಾ ಅವರು ತಮ್ಮ ರಾಜಕೀಯ ಅವಧಿಯಲ್ಲಿ 739 ದಿನಗಳವರೆಗೆ ಮುಖ್ಯಮಂತ್ರಿಗಳಾಗಿ ಕರ್ನಾಟಕದಲ್ಲಿ ವಿವಿಧ ಯೋಜನೆಗಳನ್ನು ಜಾರಿಗೆ ತಂದಿದ್ದಾರೆಂದು ಸ್ಮರಿಸಿದರು.

# ಗಾಂಜಾ ದಾಂಧಲೆ: ಯುವಕನ ಮೇಲೆ ಹಲ್ಲೆ

• ಪ್ರಜೋದಯ ವರದಿ

**ಆಲೂರು:** ಗಾಂಜಾ ಸೇವನೆ ಪ್ರಕರಣ ದಲ್ಲಿ ಜೈಲು ವಾಸಿಯಾಗಿ ಜಾಮೀನಿನ ಮೇಲೆ ಹೊರಬಂದಿದ್ದ ವ್ಯಕ್ತಿಯೊಬ್ಬ ಅಮಾಯಕ ಯುವಕನನ್ನು ಅಡ್ಡಗಟ್ಟಿ ಹಲ್ಲೆ ನಡೆಸಿರುವ ಘಟನೆ ತಾಲ್ಲೂಕಿನ ಕಣತೂರು ಗ್ರಾಮದಲ್ಲಿ ನಡೆದಿದೆ. ಯೋಗೇಶ್ ಹಲ್ಲೆಗೊಳಗಾದ ಯುವಕ. ಸಚಿನ್ ಎಂಬಾತ ಹಲ್ಲೆ ನಡೆಸಿದ್ದಾನೆಂದು ಆರೋಪಿಸಲಾಗಿದೆ.

ಬುಧವಾರ ರಾತ್ರಿ ಡೇರಿಗೆ ಹಾಲು ಹಾಕಿ ಮನೆಗೆ ವಾಪಾಸ್ ಬರುತ್ತಿದ್ದ ಯೋಗೇಶ್‌ನನ್ನು ರಸ್ತೆಯಲ್ಲಿ ಅಡ್ಡ ಗಟ್ಟಿದ ಸಚಿನ್ ಅವಾಚ್ಯ ಶಬ್ದಗಳಿಂದ ನಿಂದಿಸಿ ಹಲ್ಲೆ ನಡೆಸಿದ್ದಾನೆ ಎನ್ನಲಾ ಗಿದೆ. ಗಾಯಾಳು ಯೋಗೇಶ್‌ನನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಜೂ.22ರಂದು ಕೊಡಗಿಹಳ್ಳಿ ಗ್ರಾಮದಲ್ಲಿ ಸಚಿನ್, ಕಿರಣ್, ಕೀರ್ತನ್ ಹಾಗು ಓಂಕಾರ ಎಂಬುವವರು ಗಾಂಜಾ ಸೇವಿಸಿ ದಾಂಧಲೆ ನಡೆಸಿದ್ದರು ಎನ್ನಲಾಗಿದ್ದು, ಟಿಪ್ಪರ್‌ನಿಂದ ಕಾರನ್ನು ಜಖಂಗೊಳಿಸಿ ಅಟ್ಟಹಾಸ ಮೆರೆದಿದ್ದರು. ಈ ಪ್ರಕರಣದಲ್ಲಿ ಕೆಲ ದಿನಗಳ ಹಿಂದೆ ಜಾಮೀನು ಪಡೆದು ಆರೋಪಿಗಳು ಹೊರಬಂದಿದ್ದರು.



ಆಲೂರು ಪೊಲೀಸ್ ಠಾಣೆ ಪ್ರಕರಣ ದಾಖಲಾಗಿದೆ.

# ಪಾರ್ಶ್ವನಾಥ ಸ್ವಾಮಿಗೆ ಮಹಾಮಸ್ತಕಾಭಿಷೇಕ

• ಪ್ರಜೋದಯ ವರದಿ

**ಶ್ರವಣಬೆಳಗೊಳ:** ಇಲ್ಲಿನ ಚಂದ್ರಗಿರಿ ಚಿಕ್ಕಬೆಟ್ಟದಲ್ಲಿ 23ನೇ ತೀರ್ಥಂಕರ ಭಗವಾನ್ ಪಾರ್ಶ್ವನಾಥ ಸ್ವಾಮಿಯ ಬಸದಿಯಲ್ಲಿ ಮೋಕ್ಷ ಕಲ್ಯಾಣ ಮುಕುಟ ಸಪ್ತಮಿಯ ಪ್ರಯುಕ್ತ ಅಂತರಾಳ ಪಾರ್ಶ್ವನಾಥ ಸ್ವಾಮಿಗೆ ವಿಶೇಷ ಪೂಜಾ ಕೈಂಕರ್ಯ ಹಾಗು ಮಹಾಮಸ್ತಕಾಭಿಷೇಕ ನೆರವೇರಿಸಲಾಯಿತು.

ಕ್ಷೇತ್ರದ ಪೀಠಾಧಿಪತಿ ಸ್ವಸ್ತಿಶ್ರೀ ಅಭಿನವ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ ಮಾರ್ಗ ದರ್ಶನದಲ್ಲಿ ನಡೆದ ಧಾರ್ಮಿಕ ಕಾರ್ಯ ಕ್ರಮದಲ್ಲಿ ಚಂದ್ರಗಿರಿಯ 18 ಅಡಿ ಎತ್ತರದ, ಸಪ್ತಫಣಾಧಾರಿ ಅಂತರಾಳ ಪಾರ್ಶ್ವನಾಥ ಸ್ವಾಮಿಯ ಸನ್ನಿಧಿಯಲ್ಲಿ ಶಾಂತಿಧಾರೆ ಹಾಗು ನವಕಲಶಗಳನ್ನು ಪ್ರತಿಷ್ಠಾಪಿಸಲಾಯಿತು.

ಜಲಾಭಿಷೇಕದ ಬಳಿಕ ಎಳನೀರು, ಕಬ್ಬಿನ ಹಾಲು, ಕ್ಷೀರ, ಕಲ್ಕಚೂರ್ಣ, ಅರಿಷಿಣ, ಶ್ರೀಗಂಧ ಹಾಗು ಅಷ್ಟಗಂಧಗಳಿಂದ ವಿವಿಧ ಅಭಿಷೇಕಗಳನ್ನು ನೆರವೇರಿಸಲಾಯಿತು. ಬಳಿಕ ಬೃಹತ್ ಪುಷ್ಪಹಾರವನ್ನು ಸಮರ್ಪಿಸಿ ಪುಷ್ಪವೃಷ್ಟಿ ಮಾಡಲಾಯಿತು. ಮಹಾಶಾಂತಿ ಧಾರೆ ಹಾಗು ಮಹಾಮಂಗಳಾರತಿಯೊಂದಿಗೆ ಪೂಜಾ ವಿಧಿಗಳು ಸಂಪನ್ನಗೊಂಡವು.

ಮೋಕ್ಷ ಕಲ್ಯಾಣದ ಸಂಕೇತವಾಗಿ ನಿರ್ವಾಣ ಲಡ್ಡುವನ್ನು ಅರ್ಪಿಸಿದ ಸಂದರ್ಭದಲ್ಲಿ ನೆರೆದಿದ್ದ ಭಕ್ತರು ತೀರ್ಥಂಕರರ ಜಯ ಘೋಷ ಮೊಳಗಿಸಿ ಭಕ್ತಿಭಾವ ಮೆರೆದರು. ಕ್ಷೇತ್ರದಲ್ಲಿರುವ ಪಾರ್ಶ್ವನಾಥ ಸ್ವಾಮಿಯ



ಎಲ್ಲಾ ಬಸದಿಗಳಲ್ಲಿಯೂ ಮುಕುಟ ಸಪ್ತಮಿ ಪ್ರಯುಕ್ತ ವಿಶೇಷ ಪೂಜಾ ಕೈಂಕರ್ಯಗಳು ನಡೆದವು.

ಮುನಿಶ್ರೀ ಪ್ರಭಾಕರ್ ಸಾಗರ ಮಹಾರಾಜರು, ಕ್ಷುಲ್ಲಿಕಾಶ್ರೀಅಮೃತಮತಿ ಮಾತಾಜಿ ಹಾಗು ಕ್ಷುಲ್ಲಿಕಾಶ್ರೀ ಅಮರಜ್ಯೋತಿ ಮಾತಾಜಿ ಸಾನಿಧ್ಯ ವಹಿಸಿದ್ದರು.

ಪೂಜೆಯಲ್ಲಿ ಪಾಲ್ಗೊಂಡ ಭಕ್ತರಿಗೆ ಗಂಧೋದಕ ವಿತರಿಸಲಾಯಿತು. ಹಿಂದೂಪುರದ ನಾಗೇಂದ್ರ, ಕುಮಾರ್ ಕುಟುಂಬದವರು ಸೇವಾಕರ್ತರಾಗಿ, ವಿಮಲ್ ಕುಮಾರ್ ತಂಡದವರು ಪೂಜಾ ನೇತೃತ್ವ ವಹಿಸಿದ್ದರು. ವ್ಯವಸ್ಥಾಪಕರಾದ ಜೀವೇಂದ್ರ, ಕುಮಾರ್, ರಾಮದಾಸ್ ಸೇರಿ ಮತ್ತಿತರರು ಪಾಲ್ಗೊಂಡಿದ್ದರು.

# ಆ.25 ರಂದು ಹೊರ ಗುತ್ತಿಗೆ ನೌಕರರ ಪ್ರತಿಭಟನೆ

• ಪ್ರಜೋದಯ ವರದಿ

**ಹಾಸನ:** ಪರಿಷ್ಕೃತ ಕನಿಷ್ಟ ವೇತನ ಆದೇಶ ಹಿಂಪಡೆಯುವ ಸರ್ಕಾರದ ನೀತಿ ಖಂಡಿಸಿ ರಾಜ್ಯ ಆರೋಗ್ಯ ಇಲಾಖೆ ವಿವಿಧ ವೃಂದದ ಹೊರಗುತ್ತಿಗೆ ನೌಕರರ ಸಂಘದಿಂದ ಆ.25 ರಂದು ನಗರದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಅಕ್ಷಯ್ ಡಿ.ಎಂ. ಗೌಡ ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ಕಾರ್ಮಿಕ ಇಲಾಖೆಯ ರಾಜ್ಯ ಸರ್ಕಾರದ ಅಧೀನ ಕಾರ್ಯದರ್ಶಿ ಅವರ ಅಧಿಸೂಚನೆಯಂತೆ ಕಳೆದ ಮೇನಲ್ಲಿ ಹೊರಗುತ್ತಿಗೆ ನೌಕರರು, ಕಾರ್ಮಿಕರ ಬಹುದಿನಗಳ ಬೇಡಿಕೆಯಂತೆ ಕನಿಷ್ಟ ವೇತನ ಪರಿಷ್ಕರಣೆಯಾಗಿತ್ತು.ಕೆಲವು ಇಲಾಖೆಗಳಲ್ಲಿ ಎರಡು ದಿನಗಳ ಕನಿಷ್ಟ ವೇತನವನ್ನೂ ಪಾವತಿ ಮಾಡಲಾಗಿದೆ. ಆದರೆ ಆರ್ಥಿಕ ಇಲಾಖೆಯು ಜು.15 ರಂದು ಹೊರಡಿಸಿದ್ದ ಅಧಿಕೃತ ಜ್ಞಾಪನದಲ್ಲಿ ನೂತನ ಪರಿಷ್ಕೃತ ವೇತನವನ್ನು ಹಿಂಪಡೆಯುದಾಗಿ ತಿಳಿಸಿದೆ. ಈ ನಡೆಯನ್ನು ಖಂಡಿಸಿ ಪ್ರತಿಭಟನೆಗೆ ಕರೆ ಕೊಡಲಾಗಿದೆ ಎಂದರು.

ನಗರದ ಡಬಲ್ ಟ್ಯಾಂಕ್ ಮುಂಭಾಗವಿರುವ ಸಂಘದ ಕೇಂದ್ರ ಕಚೇರಿಯಿಂದ ಆ.25ರ ಬೆಳಿಗ್ಗೆ 11 ಗಂಟೆಗೆ ಹೊರಡುವ ಮೆರವಣಿಗೆ ಹೇಮಾವತಿ



ಪ್ರತಿಮೆ ತಲುಪಲಿದೆ. ಅಲ್ಲೇ ಮಾನವ ಸರಪಳಿ ರಚಿಸಿ 30 ನಿಮಿಷಗಳ ಕಾಲ ಘೋಷಣೆ ಕೂಗಲಾಗುವುದು. ಅಲ್ಲಿಂದ ಎನ್.ಆರ್.ವೃತ್ತದಲ್ಲಿ ರಸ್ತೆ ತಡೆದು ಮಾನವ ಸರಪಳಿ ನಿರ್ಮಿಸಿ 1 ಗಂಟೆಗಳ ಕಾಲ ಘೋಷಣೆ ಕೂಗಿ ಜಿಲ್ಲಾಧಿಕಾರಿ ಕಚೇರಿ ತಲುಪಿ ಮನವಿ ಸಲ್ಲಿಸಲಾಗುವುದೆಂದರು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಹೊರ ಗುತ್ತಿಗೆ ನೌಕರರು ಆಗಮಿಸಲಿದ್ದು, ಒಟ್ಟು ಒಂದೂವರೆ ಸಾವಿರ ಮಂದಿ ಭಾಗಿಯಾಗುವ ನಿರೀಕ್ಷೆ ಇದೆ. ಅಂದಿನ ನಮ್ಮ ಹೋರಾಟಕ್ಕೆ ಸರ್ಕಾರ ಸ್ಪಂದಿಸದಿದ್ದರೆ ಎಲ್ಲಾ ಸಂಘಟನೆಗಳ ಜೊತೆ ಚರ್ಚೆ ಮಾಡಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸುಮಾರು 25 ಸಾವಿರ ಜನ ಸೇರಿಸಿ ದೊಡ್ಡ ಮಟ್ಟದ ಹೋರಾಟ ಮಾಡಲಾಗುವುದೆಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷ ವಿ.ಎಸ್. ಕುಮಾರ್, ರಾಜ್ಯ ಸಮಿತಿ ನಿರ್ದೇಶಕ ಆರ್.ಎಸ್. ರಾಜಯ್ಯ, ಮನುಮಲ್ಲೇಶ್, ಲೋಕೇಶ್ ಇದ್ದರು.

# ಸರ್ಕಾರಿ ಜಾಗ ಅಕ್ರಮ ಮಂಜೂರು ಪ್ರಯತ್ನ: ಆರೋಪ

• ಪ್ರಜೋದಯ ವರದಿ

**ಹಾಸನ:** ಸರ್ಕಾರಿ ನೌಕರರೇ ಬೆಲೆ ಬಾಳುವ ಜಾಗವನ್ನು ಅಕ್ರಮವಾಗಿ ಮಂಜೂರು ಮಾಡಿಕೊಡಲು ಪ್ರಯತ್ನಿಸುತ್ತಿದ್ದಾರೆಂದು ಅರಕಲಗೂಡು ತಾಲ್ಲೂಕು ಬೆಟ್ಟಗಳಲೆ ಗ್ರಾಮದ ನಿಕೋಲಾಸ್‌ಅವರು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ಗ್ರಾಮದ ಸರ್ವೆ ನಂ.47ರ ಸರ್ಕಾರಿ ಬೀಳು ಜಾಗವನ್ನು ಅಕ್ರಮವಾಗಿ ಶಾಂತರಾಜು ಎಂಬುವವರಿಗೆ ಮಂಜೂರು ಮಾಡಿಕೊಡಲು ಅಧಿಕಾರಿಗಳು ಹಾಗು ಸಿಬ್ಬಂದಿ ಕೈ ಜೋಡಿಸಿದ್ದಾರೆ. ಈ ಸಂಬಂಧ ಪೊಲೀಸರಿಗೆ ದೂರು ನೀಡಿದರೂ ಪ್ರಯೋಜನ ಆಗುತ್ತಿಲ್ಲವೆಂದರು.

ಅಧಿಕಾರಿಗಳ ದೌರ್ಬಲ್ಯವನ್ನೇ ದುರುಪಯೋಗ ಮಾಡಿಕೊಳ್ಳುತ್ತಿರುವ ಶಾಂತರಾಜು, ಸುನೀತಾ, ಜ್ಯೋತಿ ಹಾಗು ನಿಶ್ಚಿತಾ ಎಂಬುವವರು ನಮ್ಮ ಕುಟುಂಬದವರ ಮೇಲೆ ಹಲ್ಲೆ ಮಾಡಿದ್ದಾರೆ. ಆಗಾಗ ಜಮೀನು ಬಳಿ ಬಂದು ಕೊಲೆ ಬೆದರಿಕೆ ಹಾಕುತ್ತಿದ್ದಾರೆ. ಅದಕ್ಕೆ




ಪೊಲೀಸರು, ತಹಶೀಲ್ದಾರ್ ಹಾಗು ಕಂದಾಯ ಇಲಾಖೆಯವರೂ ಸಹಕಾರ ನೀಡುತ್ತಿದ್ದಾರೆ.ಶಾಂತರಾಜು ಹಿಂದೆಯೇ ಹಲವು ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿದ್ದು, ಷರತ್ತುಬದ್ಧ ಜಾಮೀನಿನ ಮೇಲೆ ಹೊರಗಡೆ ಇದ್ದಾರೆ. ಈ ವೇಳೆ ನ್ಯಾಯಾಲಯದ ಜಾಮೀನು ಷರತ್ತುಗಳನ್ನು ನೇರವಾಗಿ ಉಲ್ಲಂಘನೆ ಮಾಡಿದ್ದಾರೆ. ಹೀಗಾಗಿ ಅವರ ಜಾಮೀನು ರದ್ದುಪಡಿಸಬೇಕೆಂದು ಆಗ್ರಹಿಸಿದರು.

ಗ್ರಾಮದಲ್ಲಿ 1 ಎಕರೆ ಸರ್ಕಾರಿ ಜಾಗವನ್ನು ನಕಲಿ ದಾಖಲೆ ಸೃಷ್ಟಿಸಿ ಬೇರೆಯವರಿಗೆ ಖಾತೆ ಮಾಡಲು ಹೊರಟಿರುವ ಹುನ್ನಾರ ತಡೆಯಬೇಕು. ಸದರಿ ಜಾಗವನ್ನು ಸರ್ಕಾರಕ್ಕೆ ಉಳಿಸಬೇಕೆಂದು ಕೋರಿದರು.

ಸುದ್ದಿಗೋಷ್ಠಿಯಲ್ಲಿ ಅಂತೋಣಿ ಸ್ವಾಮಿ, ಪ್ರಿಯಾಂಕ ಇದ್ದರು.

# ರಾಜೀವ್ ಗಾಂಧಿ-ದೇವರಾಜ ಅರಸು ಕೊಡುಗೆ ಅಪಾರ

• ಪ್ರಜೋದಯ ವರದಿ

**ಹಾಸನ:** ಭಾರತಕ್ಕೆ ತಂತ್ರಜ್ಞಾನ ಮತ್ತು ಸಂಪರ್ಕ ಕ್ರಾಂತಿಯ ಪರಿಚಯ ಮಾಡಿಕೊಟ್ಟ ಮಾಜಿ ಪ್ರಧಾನಿ ದಿ|| ರಾಜೀವ್ ಗಾಂಧಿ ಹಾಗು ಸಾಮಾಜಿಕ ನ್ಯಾಯದ ಹರಿಕಾರ, ಮಾಜಿ ಮುಖ್ಯ ಮಂತ್ರಿ ದಿ|| ಡಿ.ದೇವರಾಜ ಅರಸು ಅವರು ತಮ್ಮ ಜನಪರ ಕೊಡುಗೆಗಳ ಮೂಲಕ ದೇಶದ ಜನರ ಹೃದಯದಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆಂದು ಜಿಲ್ಲಾ ಕಾಂಗ್ರೆಸ್ ಹಿಂದುಳಿದ ವರ್ಗಗಳ (ಒಬಿಸಿ) ವಿಭಾಗದ ಅಧ್ಯಕ್ಷ ಮಂಗಳಾಪುರ ನಾಗರಾಜ್ ಅವರು ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ಗುರುವಾರ ಆಯೋಜಿಸಿದ್ದ ರಾಜೀವ್ ಗಾಂಧಿ ಹಾಗು ಡಿ.ದೇವರಾಜ ಅರಸು ಅವರ ಜನ್ಮದಿನಾಚರಣೆಯಲ್ಲಿ ನಾಯಕರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಅವರು, ದೇಶವನ್ನು ಸಮಗ್ರ ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸುವಲ್ಲಿ ಈ ಇಬ್ಬರೂ ಮಹಾನ್ ನಾಯಕರು ನೀಡಿದ ಕೊಡುಗೆ ಅನನ್ಯ. ಉಳುವವನೇ ಹೊಲದೊಡೆಯ ಎಂಬ ಕ್ರಾಂತಿಕಾರಿ ಕಾನೂನಿನ ಮೂಲಕ ದೇವರಾಜ ಅರಸು ಅವರು ರಾಜ್ಯದಲ್ಲಿ ಸಾಮಾಜಿಕ ನ್ಯಾಯಕ್ಕೆ ಭದ್ರ ಅಡಿಪಾಯ ಹಾಕಿದರು. ಹಾಗೆಯೇ, ಇಂದು ನಾವು ಕಾಣುತ್ತಿರುವ ಡಿಜಿಟಲ್ ಭಾರತದ ಪರಿಕಲ್ಪನೆ ಹಾಗು ತಾಂತ್ರಿಕ ಪ್ರಗತಿಗೆ ಮುನ್ನುಡಿ ಬರೆದ ಶ್ರೇಯಸ್ಸು ರಾಜೀವ್ ಗಾಂಧಿ ಅವರಿಗೆ ಸಲ್ಲುತ್ತದೆ ಎಂದು ಸ್ಮರಿಸಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ರಘು ದಾಸರಕೊಪ್ಪಲು, ಹಾಸನ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚಂದ್ರಶೇಖರ್, ಮುಖಂಡ ಜೆಸಿಬಿ ಚಂದ್ರಶೇಖರ್, ಆಲೂರು ಒಬಿಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಜಶೇಖರ್, ಹೊಳೆನರಸೀಪುರ ಒಬಿಸಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಚ್.ಎನ್.ಗೌಡ ಮತ್ತಿತರರಿದ್ದರು.



## ಹಳೆಯ ದ್ವೇಷ: ಇಬ್ಬರ ಮೇಲೆ ಮಾರಣಾಂತಿಕ ಹಲ್ಲೆ

• ಪ್ರಜೋದಯ ವರದಿ

**ಹೊಳೆನರಸೀಪುರ:** ಹಳೆಯ ದ್ವೇಷದಿಂದ ಇಬ್ಬರು ಯುವಕರ ಮೇಲೆ ಸ್ನೇಹಿತರು ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ಪಟ್ಟಣದಲ್ಲಿ ನಡೆದಿದೆ.

ಪಟ್ಟಣದ ಅಂಬೇಡ್ಕರ್ ನಗರದ ಯಲ್ಲಮ್ಮ ದೇವರ ಬೀದಿ ನಿವಾಸಿ ಪವನ್ ಹಾಗು ಚಂದನ್ ಗಾಯಾಳುಗಳು. ಪಟ್ಟಣದ ಅಜಿತ್, ಮುತ್ತುರಾಜ್, ಸುಪ್ಪಿ ಹಾಗು ಅಕ್ಷಯ್ ಆರೋಪಿಗಳು.

ಆ.18ರಂದು ಸ್ನೇಹಿತ ಚೇತನ್‌ನ ಮದುವೆಗೆಂದು ಪವನ್ ಹೋಗಿದ್ದಾಗ ಅಲ್ಲಿಯೇ ಎಣ್ಣೆ ಪಾರ್ಟಿ ಮಾಡುತ್ತಿದ್ದ ನಾಲ್ವರು ಆರೋಪಿಗಳು ಅವಾಚ್ಯ ಶಬ್ದಗಳಿಂದ ನಿಂದಿಸಿ ಪವನ್ ಮೇಲೆ ಹಲ್ಲೆ ನಡೆಸಿದ್ದಾರೆ. ನಾಲ್ವರು ಪವನ್‌ನನ್ನು ಬಲವಾಗಿ ತಬ್ಬಿಕೊಂಡು ಕಪಾಳಕ್ಕೆ ಹೊಡೆದು, ಮರ್ಮಾಂಗಕ್ಕೆ ಒದ್ದು ನೋವುಂಟು ಮಾಡಿದರು. ಗಂಭೀರ ಗಾಯಗೊಂಡು ರಸ್ತೆಯಲ್ಲೇ ಬಿದ್ದ ಪವನ್‌ನನ್ನು ಆತನ ಸಹೋದರ ತಕ್ಷಣ ಪಟ್ಟಣದ ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ ಅಲ್ಲಿಗೂ ಬಂದ ಆರೋಪಿಗಳು ತುರ್ತು ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಕೊಠಡಿಗೆ ನುಗ್ಗಿ ಪವನ್ ಮೇಲೆ ಮತ್ತೆ ಚಾಕುವಿನಿಂದ ಹಲ್ಲೆ ನಡೆಸಿದ್ದಾರೆ. ಗಾಯಾಳು ಜೊತೆಗೆ ಇದ್ದ ಚಂದನ್‌ನನ್ನು ಆಸ್ಪತ್ರೆಯಿಂದ ಹೊರಗೆ ಎಳೆದುಕೊಂಡು ಬಂದು ಮನಬಂದಂತೆ ಥಳಿಸಿದ್ದಾರೆ. ಆಗ ರಂಗಸ್ವಾಮಿ, ಉಮೇಶ್, ಜೀವನ್ ಹಾಗು ರಾಹುಲ್ ಎಂಬುವವರು ಜಗಳ ಬಿಡಿಸಿ ಎಲ್ಲರನ್ನೂ ಸಮಾಧಾನಪಡಿಸಿದ್ದಾರೆ. ಗಂಭೀರ ಗಾಯಗೊಂಡಿರುವ ಪವನ್ ಹಾಗು ಚಂದನ್ ಅವರನ್ನು ಚಿಕಿತ್ಸೆಗಾಗಿ ಹಿಮ್ಸ್‌ಗೆ ದಾಖಲಿಸಲಾಗಿದೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಟ್ರ್ಯಾಕ್ಟರ್ ಪಲ್ಟಿ: ಚಾಲಕ ಸಾವು

• ಪ್ರಜೋದಯ ವರದಿ

**ಅರಕಲಗೂಡು:** ನಿರ್ಲಕ್ಷ್ಯದ ಚಾಲನೆಯಿಂದ ಟ್ರ್ಯಾಕ್ಟರ್ ಹೊಂಡದಲ್ಲಿ ಬಿದ್ದು ಚಾಲಕ ಮೃತಪಟ್ಟಿರುವ ಘಟನೆ ಕಟ್ಟಾಯ ಗ್ರಾಮದಲ್ಲಿ ನಡೆದಿದೆ.

ತಾಲ್ಲೂಕಿನ ಕೆಂಚನಹಳ್ಳಿ ಗ್ರಾಮದ ಎಸ್.ಜಿ.ಯಶ್ವಂತ್ ಮೃತರು. ಗದ್ದೆಯಲ್ಲಿ ಉಳುಮೆ ಮಾಡಿ ವಾಪಾಸ್ ಬರುತ್ತಿದ್ದಾಗ ಪಕ್ಕದ ಗದ್ದೆಯಲ್ಲಿ ಕೃಷಿ ಹೊಂಡದಲ್ಲಿ ಟ್ರ್ಯಾಕ್ಟರ್ ಕುಸಿದು ಹೊಂಡಕ್ಕೆ ಬಿದ್ದು ಯಶ್ವಂತ್ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಗೊರೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕರ್ವಾಲೋ: ಸೆ.12ರಂದು ರಾಜ್ಯ ಮಟ್ಟದ ರಸಪ್ರಶ್ನೆ ಸ್ಪರ್ಧೆ

• ಪ್ರಜೋದಯ ವರದಿ




**ಹಾಸನ:** ಸಾಹಿತಿ ಕೆ.ಪಿ. ಪೂರ್ಣಚಂದ್ರ ತೇಜಸ್ವಿ ಅವರ ಜನಪ್ರಿಯ ಕೃತಿ ಕರ್ವಾಲೋ ಪ್ರಕಟ ಗೊಂಡು 46 ವರ್ಷ ಪೂರೈಸಿರುವ ಹಿನ್ನಲೆಯಲ್ಲಿ ನಗರದ ಅಬಚೂರಿನ ಮಿತ್ರವೃಂದ ವತಿಯಿಂದ ಸೆ.12 ರಂದು ರಾಜ್ಯಮಟ್ಟದ ರಸಪ್ರಶ್ನೆ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ.

ಮಹಾಲಕ್ಷ್ಮಿ ಬಡಾವಣೆಯ ಸ್ಕಾಲರ್ಸ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಅಂದು ಬೆಳಿಗ್ಗೆ 9 ಗಂಟೆಗೆ ಸ್ಪರ್ಧೆ ಆರಂಭವಾಗಲಿದ್ದು, ಕೊಟ್ಟಿಗೆಹಾರದ ಕೆ.ಪಿ.ಪೂರ್ಣಚಂದ್ರ ತೇಜಸ್ವಿ ಪ್ರತಿಷ್ಠಾನ ಹಾಗು ಹಾಸನ ರೋಟರಿ ಕ್ವಾಂಟಾ ಸಂಸ್ಥೆಗಳು ಸಹಯೋಗ ನೀಡಿವೆ.

**ಎರಡು ವಿಭಾಗಗಳಲ್ಲಿ ಸ್ಪರ್ಧೆ**

ಮುಕ್ತ ವಿಭಾಗ (ಕರ್ವಾಲೋ ಕ್ವಿಜ್): ಯಾವುದೇ ವಯೋಮಿತಿಯಿಲ್ಲದೆ ಎಲ್ಲಾ ಸಾಹಿತ್ಯಾಸಕ್ತರಿಗೂ ಮುಕ್ತ ಅವಕಾಶ. ಕರ್ವಾಲೋ ಕಾದಂಬರಿ ಆಧಾರಿತ ಪ್ರಶ್ನೆಗಳಿರುತ್ತವೆ. ಪ್ರಥಮ ಬಹುಮಾನ 10,000 ರೂ., ದ್ವಿತೀಯ 5,000 ರೂ. ಹಾಗು ತೃತೀಯ 3,000 ರೂ. ಬಹುಮಾನ ನಿಗದಿಪಡಿಸಲಾಗಿದೆ.

ಶಾಲಾ ಮಕ್ಕಳ ವಿಭಾಗ (ಪ್ರಕೃತಿ-ಪರಿಸರ): ಶಾಲಾ ವಿದ್ಯಾರ್ಥಿಗಳಲ್ಲಿ ಜೀವವೈವಿಧ್ಯ ಮತ್ತು ಪರಿಸರ ಜಾಗೃತಿ ಮೂಡಿಸುವ ಉದ್ದೇಶದಿಂದ ಪ್ರಕೃತಿ ವಿಷಯದ ರಸಪ್ರಶ್ನೆ ನಡೆಯಲಿದೆ. ಪ್ರಥಮ 5,000 ರೂ., ದ್ವಿತೀಯ 3,000 ರೂ. ಹಾಗು ತೃತೀಯ 1,500 ರೂ. ಬಹುಮಾನ ನೀಡಲಾಗುತ್ತದೆ.

**ಸ್ಪರ್ಧೆಯ ನಿಯಮಗಳು**

ಎರಡೂ ವಿಭಾಗಗಳಿಗೂ ಮೊದಲ ಸುತ್ತಿನಲ್ಲಿ ಲಿಖಿತ ಬಹು ಆಯ್ಕೆ ಪರೀಕ್ಷೆ ನಡೆಯಲಿದೆ. ಗರಿಷ್ಟ ಅಂಕ ಪಡೆದ 10 ಸ್ಪರ್ಧಿಗಳನ್ನು ಆಯ್ದು, ತಲಾ ಇಬ್ಬರಂತೆ 5 ತಂಡಗಳನ್ನು ರಚಿಸಿ ಅಂತಿಮ ಬಹುಹಂತದ ರಸಪ್ರಶ್ನೆ ನಡೆಸಲಾಗುತ್ತದೆ. ಸ್ಪರ್ಧೆಯ ವೇಳೆ ಮೊಬೈಲ್ ಬಳಕೆ ನಿಷೇಧಿಸಲಾಗಿದೆ.

ಪ್ರವೇಶ ಶುಲ್ಕ 100 ಆಗಿದ್ದು, ಪ್ರತಿ ವಿಭಾಗದಲ್ಲೂ ಮೊದಲು ನೋಂದಾಯಿಸಿದ 100 ಅಭ್ಯರ್ಥಿಗಳಿಗೆ ಮಾತ್ರ ಭಾಗವಹಿಸಲು ಅವಕಾಶವಿರುತ್ತದೆ.

**ನೋಂದಣಿ ವಿವರ:** ಮುಕ್ತ ವಿಭಾಗದ ನೋಂದಣಿಗೆ ಡಾ. ವಿನೋದ್ ಕುಮಾರ್ (7829449332) ಹಾಗು ಶಾಲಾ ವಿಭಾಗದ ನೋಂದಣಿಗೆ ತಾರಾ (8129045993) ಅವರನ್ನು ಸಂಪರ್ಕಿಸಬಹುದು.

## ಹಾಸ್ಟೆಲ್ ನಿರ್ವಹಣೆಗೆ ಸಾಕಾಗದ ಅನುದಾನ

» ಮೊದಲನೇ ಪುಟದಿಂದ

ಜಿಲ್ಲೆಯಿಂದ ವಿದ್ಯಾರ್ಥಿಗಳನ್ನು ಕರೆಸಿಕೊಳ್ಳುವ ಪದ್ಧತಿಯೂ ಗೌಪ್ಯವಾಗಿ ನಡೆಯುತ್ತದೆ. ಕಳೆದ ವರ್ಷಕ್ಕಿಂತ ಈ ವರ್ಷ ಹೆಚ್ಚು ವಿದ್ಯಾರ್ಥಿಗಳಿದ್ದರಷ್ಟೇ ಆ ಹಾಸ್ಟೆಲ್ ಉಳಿಯುತ್ತದೆಂಬ ಸರ್ಕಾರದ ನಿಯಮ ಮಕ್ಕಳ ಸಂಖ್ಯೆ ಹೆಚ್ಚಾಗಲು ಕಾರಣವಾಗಿದೆ.

**ಕಿಟಕಿಗೆ ಪರದೆಯೂ ಇಲ್ಲ**

ವಿದ್ಯಾರ್ಥಿ ನಿಲಯದಲ್ಲಿ ವಾಸಿಸುತ್ತಿರುವ ವಿದ್ಯಾರ್ಥಿನಿಯರಿಗೆ ಕಿಟಕಿ ಪರದೆ, ಸ್ಲಿಪ್ಪರ್ ಸ್ಟ್ಯಾಂಡ್, ಮ್ಯಾಟ್, ಸೊಳ್ಳೆ ಕಾಯಿಲ್, ಬೆಡ್ ಹಾಗು ಕಾಟ್‌ಗಳಂತಹ ಕನಿಷ್ಟ ಮೂಲ ಸೌಲಭ್ಯ ಕಲ್ಪಿಸುತ್ತಿಲ್ಲವೆಂದು ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಿಟಕಿಗಳಿಗೆ ಪರದೆಗಳಿಲ್ಲದ ಕಾರಣ ಬಟ್ಟೆ ಬದಲಾಯಿಸುವ ಸಂದರ್ಭದಲ್ಲಿಯೂ ಬೆಡ್‌ಶೀಟ್‌ಗಳನ್ನು ಬಳಸಬೇಕಾದ ಮುಜುಗರದ ಪರಿಸ್ಥಿತಿ ನಿರ್ಮಾಣವಾಗಿದೆ. ರಾತ್ರಿಯ ವೇಳೆ ಸೊಳ್ಳೆಗಳ ಕಾಟ ಹಾಗು ಉಸಿರು ಗಟ್ಟುವ ವಾತಾವರಣದಿಂದ ವಿದ್ಯಾರ್ಥಿನಿಯರ ಶಿಕ್ಷಣ, ಆರೋಗ್ಯ ಮತ್ತು ಮಾನಸಿಕ ನೆಮ್ಮದಿಯ ಮೇಲೂ ಪರಿಣಾಮ ಬೀರುತ್ತಿದೆ.

**ಶಿಫಾರಸ್ಸಿಗೆ ರಾಜ್ಯ ಸರ್ಕಾರ ನಿರ್ಧಾರ | ವಿಧಾನಸಭೆಯಲ್ಲಿ ಗಂಭೀರ ಚರ್ಚೆ**

# ಕಸ್ತೂರಿ ರಂಗನ್ ವರದಿ ಅಧಿಸೂಚನೆ ತಿರಸ್ಕಾರ

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯದ ಸಾವಿರಕ್ಕೂ ಹೆಚ್ಚು ಗ್ರಾಮಗಳನ್ನು ಒಳಗೊಳ್ಳುವ ಕೇಂದ್ರ ಸರ್ಕಾರದ ಕಸ್ತೂರಿ ರಂಗನ್ ವರದಿ ಕರಡು ಅಧಿಸೂಚನೆಯನ್ನು ತಿರಸ್ಕರಿಸಲು ರಾಜ್ಯ ಸರ್ಕಾರದಿಂದ ಶಿಫಾರಸ್ಸು ಮಾಡಲು ನಿರ್ಧರಿಸಲಾಗಿದೆ.

ಹಾಸನ, ಕೊಡಗು ಸೇರಿ ಪಶ್ಚಿಮಘಟ್ಟ ಪ್ರದೇಶದ ರೈತರು ಮತ್ತು ಸಾರ್ವಜನಿಕರ ಆತಂಕವನ್ನು ಸದನದ ಗಮನಕ್ಕೆ ತರುವ ನಿಟ್ಟಿನಲ್ಲಿ ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಎ.ಎಸ್ .ಪೊನ್ನಣ್ಣ ವಿಷಯ ಪ್ರಸ್ತಾಪಿಸಿದ್ದು, ಕೇಂದ್ರದ ಕರಡು ಅಧಿಸೂಚನೆ ವಿರುದ್ಧ ನಿರ್ಣಯ ಅಂಗೀಕಾರಕ್ಕೆ ಒತ್ತಾಯಿಸಿದ್ದಾರೆ. ಪಶ್ಚಿಮಘಟ್ಟ ಭಾಗದ ಜನರ ಹಿತಾಸಕ್ತಿಯನ್ನು ಕಾಪಾಡುವಂತೆ ಸರ್ಕಾರಕ್ಕೆ ಮನವಿ ಮಾಡಿದರು. ಅದಕ್ಕೆ ಉತ್ತರಿಸಿದ ಅರಣ್ಯ ಸಚಿವ ರಾಮಲಿಂಗಾರೆಡ್ಡಿ, 10 ಜಿಲ್ಲೆಗಳ ವ್ಯಾಪ್ತಿಯಲ್ಲಿ 39 ತಾಲ್ಲೂಕುಗಳಲ್ಲಿ ಕಸ್ತೂರಿ ರಂಗನ್ ವರದಿ ಪರಿಣಾಮ ಬೀರಲಿದೆ. ಈ ಹಿಂದೆಯೂ ರಾಜ್ಯ ಸರ್ಕಾರ ಇದಕ್ಕೆ ಆಕ್ಷೇಪಿಸಿತ್ತು. ರೈತರ ಬೇಡಿಕೆಗಳ ಕುರಿತು ಸರ್ಕಾರದ ಗಮನದಲ್ಲಿದೆ. ಆಕ್ಷೇಪಣೆ ಸಲ್ಲಿಸಲು 60 ದಿನಗಳ ಕಾಲಾವಕಾಶ ಇದೆ. ಹೀಗಾಗಿ ಕಸ್ತೂರಿ ರಂಗನ್ ವರದಿ ತಿರಸ್ಕಾರಕ್ಕೆ ರಾಜ್ಯ ಸರ್ಕಾರದಿಂದ ಶಿಫಾರಸ್ಸು ಮಾಡುತ್ತೇವೆಂದು



ನಿಲುವು ಸ್ಪಷ್ಟಪಡಿಸಿದರು.

ಸರ್ಕಾರದ ತೀರ್ಮಾನದ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಪೊನ್ನಣ್ಣ ಅವರು, ಸದನದಲ್ಲಿ ನಿಯಮ 69ರ ಅಡಿ ಕಸ್ತೂರಿರಂಗನ್ ವರದಿ ಚರ್ಚೆಯಾಗಿದೆ. ವರದಿಯಿಂದ 1,150 ಮಲೆನಾಡಿನ ಭಾಗದ ಮನೆಗಳಲ್ಲಿ ಭಯ ಹುಟ್ಟಿದೆ. ಇದರ ಬಗ್ಗೆ ಚರ್ಚೆ ನಡೆಸಿ ಸದನದಿಂದ ಕೇಂದ್ರ ಸರ್ಕಾರಕ್ಕೆ ಒಂದು ಸೂಚನೆ ಕೊಡಬೇಕು ಎಂಬುದಿತ್ತು. ನಾನು, ಶಾಸಕ ತಮ್ಮಯ್ಯ, ಶಿವಮೊಗ್ಗ ನಗರ ಶಾಸಕರು, ರಾಜೇಗೌಡ ಮತ್ತು ಶಿರಸಿ ಶಾಸಕರು ಸಹಿ ಮಾಡಿ ಕೊಟ್ಟ ಅರ್ಜಿ ಕುರಿತು ಚರ್ಚೆಗೆ ಸದನದಲ್ಲಿ ಅವಕಾಶ ಸಿಕ್ಕಿತು ಎಂದರು.

**ಗದ್ದಲದ ಮಧ್ಯೆಯೂ ಚರ್ಚೆ**

ಕಸ್ತೂರಿ ರಂಗನ್ ವರದಿ ವಿರುದ್ಧ ಪಕ್ಷಾತೀತ ಹೋರಾಟ ಆಗಬೇಕಿತ್ತು. ರೈತರ ಬಗ್ಗೆ ಕಾಳಜಿ ಇರುವವರು ಚರ್ಚೆ ಮಾಡಿ ಸದನದಲ್ಲಿ ಸರ್ವಾನುಮತದಿಂದ ತೀರ್ಮಾನ ಮಾಡಬೇಕಿತ್ತು. ಇದಕ್ಕೂ ಕೂಡ ವಿರೋಧ ಪಕ್ಷದವರು ರಾಜಕೀಯ ಬಣ್ಣ ಬಳಿದಿದ್ದಾರೆ. ಅದರಲ್ಲೂ ಅವರ ಪ್ರತಿಭಟನೆ ಮುಂದುವರೆಸಿದ್ದಾರೆ. ಅಷ್ಟೆಲ್ಲ ಗದ್ದಲದ ಮಧ್ಯದಲ್ಲೂ ನಾನು ಮತ್ತು ನಮ್ಮ ಶಾಸಕರು ಚರ್ಚೆ ಮಾಡಿದ್ದು, ಕಸ್ತೂರಿರಂಗನ್ ವರದಿಯನ್ನು ತಿರಸ್ಕರಿಸಿದ್ದೇವೆಂದು ಪೊನ್ನಣ್ಣ ಅವರು ಹೇಳಿದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK